ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಪಟ್ಟಿ – ೧೦**

**ಒಟ್ಟು ಪ್ರಶ್ನೆಗಳು – ೧೩೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನೆಯ ಅಧಿವೇಶನ**
**(ಮುಂದುವರೆದ ಉಪವೇಶನ)**

**ಮಂಗಳವಾರ, ದಿನಾಂಕ : ೨೯ನೇ ಮಾರ್ಚ್, ೨೦೧೬**

---

## ಸಮೂಹ – II

೧. ಇಂಧನ ಸಚಿವರು.

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು.

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು.

೪. ಲೋಕೋಪಯೋಗಿ ಸಚಿವರು.

೫. ಸಹಕಾರ ಮತ್ತು ಸಕ್ಕರೆ ಸಚಿವರು.

೬. ಕೃಷಿ ರಾಜ್ಯ ಸಚಿವರು.

೭. ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು.

---

## ಮಂಡ್ಯ ಜಿಲ್ಲೆಯ ಕಬ್ಬು ಬೆಳೆಗಾರರ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೨ (೧೧೭೬) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಕ್ಕರೆ ನಾಡು ಮಂಡ್ಯದಲ್ಲಿ ಇರುವ ಒಟ್ಟು ಕಬ್ಬಿನ ಕಾರ್ಖಾನೆಗಳ ಸಂಖ್ಯೆ ಎಷ್ಟು ; ಇದರಲ್ಲಿ ಸರ್ಕಾರ ಹಾಗೂ ಖಾಸಗಿ ಸಕ್ಕರೆ ಕಾರ್ಖಾನೆಗಳೆಷ್ಟು ; (ವಿವರ ನೀಡುವುದು)

(ಆ) ಸದರಿ ಕಾರ್ಖಾನೆಗಳಲ್ಲಿ ದಿನಂ ಪ್ರತಿ ಕಬ್ಬು ಅರೆಯುವ ಸಾಮರ್ಥ್ಯ ಎಷ್ಟು ;

(ಇ) ಕಬ್ಬು ಅರೆಯುವ ಸಾಮರ್ಥ್ಯಕ್ಕಿಂತ ಹೆಚ್ಚಾಗಿ ಕಬ್ಬು ಬೆಳೆಯುತ್ತಿದ್ದು ಸಕಾಲದಲ್ಲಿ ಕಟಾವು ಮಾಡಲಾಗದೆ ಕಬ್ಬು ಒಣಗಿ ರೈತರು ಸಂಕಷ್ಟಕೊಳ್ಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಇದನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ರೈತರ ಆತ್ಮಹತ್ಯೆ ಪ್ರಕರಣಗಳು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೩ (೧೧೭೫) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಮಂಡ್ಯ ಜಿಲ್ಲೆಯಲ್ಲಿ ದಾಖಲಾಗಿರುವ ರೈತರ ಆತ್ಮಹತ್ಯೆ ಪ್ರಕರಣಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ರೈತರ ಆತ್ಮಹತ್ಯೆಗೆ ನಿಖರವಾದ ಕಾರಣಗಳೇನು ;

(ಇ) ರೈತರ ಆತ್ಮಹತ್ಯೆ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) "ಅನ್ನದಾತ ಸುಖಿಭವ" ಎಂಬ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಸರ್ಕಾರ ಮುಂದಾಗುವುದೇ ; ಹಾಗಿದ್ದಲ್ಲಿ, ವಿವರ ನೀಡುವುದು ?

## ಲೋಕೋಪಯೋಗಿ ಇಲಾಖೆಯ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೪ (೧೧೭೮) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳಾವುವು ;

(ಆ) ಸದರಿ ಕಾಮಗಾರಿಗಳಿಗೆ ಹಂಚಿಕೆ ಮಾಡಲಾದ ಅನುದಾನ ಎಷ್ಟು ; (ಲೆಕ್ಕ ಶೀರ್ಷಿಕೆವಾರು ವಿವರ ನೀಡುವುದು)

(ಇ) ಮಂಜೂರು ಮಾಡಲಾದ ಕಾಮಗಾರಿಗಳ ಪೈಕಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಲ್ಪಟ್ಟ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಈ) ಸದರಿ ಕಾಮಗಾರಿಗಳಲ್ಲಿ ತುಂಡುಗುತ್ತಿಗೆ ಮೇಲೆ ಕಾರ್ಯನಿರ್ವಹಿಸಲಾದ ಕಾಮಗಾರಿಗಳ ಸಂಖ್ಯೆ ಎಷ್ಟು ;

(ಉ) ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಯಶಸ್ವಿನಿ ಆರೋಗ್ಯ ವಿಮಾ ಯೋಜನೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೫ (೧೧೭೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯ ಸದಸ್ಯತ್ವವನ್ನು ಹೊಂದಿರುವವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯ ಪ್ರಯೋಜನ ಪಡೆದ ರೋಗಿಗಳ ಸಂಖ್ಯೆ ಎಷ್ಟು ; ಎಲ್ಲಾ ಜಿಲ್ಲೆಗಳ ತಾಲ್ಲೂಕುವಾರು ವಿವರ ನೀಡುವುದು ;

(ಇ) ಸದರಿ ಜಿಲ್ಲೆಯಲ್ಲಿ ಯಶಸ್ವಿನಿ ಆರೋಗ್ಯ ವಿಮಾ ಯೋಜನೆಯಡಿಯಲ್ಲಿ ಚಿಕಿತ್ಸೆ ನೀಡುವ ಆಸ್ಪತ್ರೆಗಳು ಯಾವುವು ? (ತಾಲ್ಲೂಕುವಾರು ವಿವರ ನೀಡುವುದು)

## ಭಾಷಾ ಅಲ್ಪಸಂಖ್ಯಾತರ ಹಾಗೂ ಮತೀಯ ಅಲ್ಪಸಂಖ್ಯಾತರ ತಾರತಮ್ಯದ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೯೬೬ (೧೨೦೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಇರುವ ಭಾಷಾ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು, ಶಾಲಾ–ಕಾಲೇಜುಗಳು ಎನ್.ಜಿ.ಓ. (NGO)ಗಳು, ಹಾಸ್ಟಲ್‌ಗಳು ಇತ್ಯಾದಿ ಯಾವುವು ; (ಪ್ರತಿಯೊಂದರ ಮಾಹಿತಿ ನೀಡುವುದು)

(ಆ) ಅಲ್ಪಸಂಖ್ಯಾತರ ಇಲಾಖೆಯಿಂದ ಭಾಷಾ ಅಲ್ಪಸಂಖ್ಯಾತರಿಗೆ ಯಾವ ಯಾವ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ ; (ಯೋಜನಾವಾರು ವಿವರ ನೀಡುವುದು)

(ಇ) ಅಲ್ಪಸಂಖ್ಯಾತರ ಇಲಾಖೆಯಿಂದ ಭಾಷಾ ಅಲ್ಪ ಸಂಖ್ಯಾತ ಹಾಗೂ ಮತೀಯ ಅಲ್ಪ ಸಂಖ್ಯಾತರ ಮಧ್ಯ ತಾರತಮ್ಯ ಮಾಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ವಿವಿಧ ಇಲಾಖೆಗಳಲ್ಲಿ ಮತೀಯ ಅಲ್ಪಸಂಖ್ಯಾತರು ಮತ್ತು ಭಾಷಾ ಅಲ್ಪಸಂಖ್ಯಾತರ ಮಧ್ಯೆ ತಾರತಮ್ಯ ಆಗುತ್ತಿರುವುದರ ಬಗ್ಗೆ ಅಲ್ಪಸಂಖ್ಯಾತರ ಇಲಾಖೆಗೆ ಮಾಹಿತಿ ಇದೆಯೇ ; ಈ ನಿಟ್ಟಿನಲ್ಲಿ ಭಾಷಿಕ ಅಲ್ಪಸಂಖ್ಯಾತರ ಹಿತ ರಕ್ಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯ್ತಿಗೆ ಮೇಲ್ದರ್ಜೆಗೆ ಏರಿಸುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೯೬೭ (೧೨೦೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಗ್ರಾಮ ಪಂಚಾಯ್ತಿಯಿಂದ ಪಟ್ಟಣ ಪಂಚಾಯ್ತಿಗೆ ಮೇಲ್ದರ್ಜೆಗೆ ಏರಿಸಿರುವ ಊರುಗಳು ಯಾವುವು ; ಪೌರಾಡಳಿತ ಇಲಾಖೆಯಿಂದ ಸದರಿ ಪಟ್ಟಣ ಪಂಚಾಯ್ತಿಗಳಿಗೆ ಒದಗಿಸಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಹುದ್ದೆವಾರು ವಿವರ, ಪಟ್ಟಣ ಪಂಚಾಯ್ತಿವಾರು ವಿವರ ನೀಡುವುದು)

(ಆ) ಘೋಷಣೆಯಾದ ನಂತರ ಒದಗಿಸಿದ ಅನುದಾನ ಎಷ್ಟು ; ೨೦೧೬-೧೭ನೇ ಸಾಲಿನಲ್ಲಿ ಒದಗಿಸಿರುವ ಅನುದಾನ ಎಷ್ಟು ? (ಪಟ್ಟಣ ಪಂಚಾಯ್ತಿವಾರು ವಿವರ ನೀಡುವುದು)

## ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಶಾಲೆ, ಹಾಸ್ಟೆಲ್‌ಗಳ ಯೋಜನೆ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):-**

೯೬೮ (೧೨೦೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯಿಂದ ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ನಿರ್ಮಾಣ ಮಾಡಿರುವ ಶಾಲಾ ಕೊಠಡಿಗಳು ಎಷ್ಟು ; ಹಾಗೂ ಒದಗಿಸಿರುವ ಪೀಠೋಪಕರಣಗಳು ಯಾವುವು ; (ವಿವರ ನೀಡುವುದು)

(ಆ) ಶಾಲಾ ಮಕ್ಕಳಿಗಾಗಿ ಹಮ್ಮಿಕೊಂಡಿರುವ ಯೋಜನೆಗಳು ಮತ್ತು ಹಾಸ್ಟೆಲ್‌ಗಳಿಗೆ ನೀಡಲಾಗಿರುವ ಯೋಜನೆಗಳು ಯಾವುವು ; (ವಿವರ ನೀಡುವುದು)

(ಇ) ಮದರಸಾ, ಅರೇಬಿಕ್ ಶಾಲೆಗಳಿಗೆ ಹಮ್ಮಿಕೊಂಡಿರುವ ಯೋಜನೆಗಳು ಯಾವುವು ;

(ಈ) ಅನುದಾನಿತ, ಅನುದಾನ ರಹಿತ ಹಾಗೂ ಸರ್ಕಾರಿ ಶಾಲೆಗಳಿಗೆ ಒದಗಿಸಿದ ಅನುದಾನ, ಖರ್ಚು ಮಾಡಿದ ಅನುದಾನ ಎಷ್ಟು ? (ಪ್ರತಿ ಸಂಸ್ಥೆವಾರು, ಯೋಜನೆವಾರು ಸಂಪೂರ್ಣ ವಿವರ ನೀಡುವುದು)

## ಪಟ್ಟಣ ಪಂಚಾಯ್ತಿ, ಪುರಸಭೆ, ನಗರ ಸಭೆ ಶಾಲೆಗಳಿಗೆ ಒದಗಿಸಿದ ಸಿ.ಎ. ಸೈಟ್ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೯೬ (೧೨೦೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷದಲ್ಲಿ ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳ ಪಟ್ಟಣ ಪಂಚಾಯ್ತಿ, ಪುರಸಭೆ, ನಗರ ಸಭೆಗಳು ಸರ್ಕಾರಿ ಶಾಲಾ ಕಾಲೇಜುಗಳಿಗೆ ನೀಡಿರುವ C.A. ಸೈಟ್‌ಗಳು ಎಷ್ಟು ; (ಪ್ರತಿ ಪುರಸಭೆ, ನಗರ ಸಭೆ, ಪಟ್ಟಣ ಪಂಚಾಯ್ತಿವಾರು ವಿವರ ನೀಡುವುದು)

(ಆ) ಸರ್ಕಾರಿ ಶಾಲಾ ಕಾಲೇಜುಗಳಿಗೆ C.A. ಸೈಟ್ ನೀಡುವಾಗ ಬೆಲೆ ನಿಗಧಿಗೊಳಿಸುವಲ್ಲಿ ಇರುವ ನಿಯಮಾವಳಿಗಳು ಏನು ; ಉಚಿತವಾಗಿ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರೇಷ್ಮೆ ಇಲಾಖೆಯಡಿ ಇರುವ ಕೃಷಿ ಜಮೀನು ಕಾರ್ಯಾಲಯ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೯೭೦ (೧೨೦೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ರೇಷ್ಮೆ ಇಲಾಖೆಯಡಿಯಲ್ಲಿ ಇರುವ ಕೃಷಿ ಜಮೀನು ಎಷ್ಟು ? (ಜಿಲ್ಲೆ, ತಾಲ್ಲೂಕು, ಗ್ರಾಮವಾರು, ಸರ್ವೆ ನಂಬರ್ ಸಹಿತ ವಿಸ್ತೀರ್ಣವಾರು ಸಂಪೂರ್ಣ ವಿವರ ನೀಡುವುದು)

## ವಿದ್ಯುತ್ ಉಳಿತಾಯಕ್ಕಾಗಿ ಜಾರಿಗೆ ತಂದಿರುವ ಎಲ್.ಇ.ಡಿ. ಮತ್ತು ಸಿ.ಎಫ್.ಎಲ್. ಬಲ್ಬ್ ಬಗ್ಗೆ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೯೭೧ (೧೨೧೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿದ್ಯುತ್ ಉಳಿತಾಯಕ್ಕಾಗಿ ಜಾರಿಗೆ ತಂದಿರುವ (ಎಲ್.ಇ.ಡಿ. ಮಿಶ್ರಿತ ಸಿ.ಎಫ್.ಎಲ್ ಬಲ್ಬ್) " ಹೊಸಬೆಳಕು" ಯೋಜನೆ ಕಾರ್ಯಕ್ರಮ ಕೇಂದ್ರ ಸರ್ಕಾರದ ಯೋಜನೆಯೇ ಅಥವಾ ಸಂಪೂರ್ಣ ರಾಜ್ಯ ಸರ್ಕಾರದ ಯೋಜನೆಯೇ ಅಥವಾ ಕೇಂದ್ರ ಸರ್ಕಾರದ "ಪ್ರಕಾಶ ಪಥ" ಯೋಜನೆಯ ಮರು ನಾಮಕರಣವೇ;

(ಆ) ಇದು ಸಂಪೂರ್ಣ ರಾಜ್ಯ ಸರ್ಕಾರದ ಯೋಜನೆಯಾದರೆ ಕೇಂದ್ರ ಸರ್ಕಾರ ನೀಡುತ್ತಿರುವ ಸಹಾಯಧನವೆಷ್ಟು ;

(ಇ) ಹೊಸಬೆಳಕು ಮತ್ತು ಪ್ರಕಾಶಪಥ ಯೋಜನೆಗಳು ಬೇರೆ ಬೇರೆಯಾದರೆ ಪ್ರಕಾಶಪಥ ಯೋಜನೆಯಿಂದ ರಾಜ್ಯಕ್ಕೆ ಆಗುತ್ತಿರುವ ಅನುಕೂಲವೇನು ; ಈ ಯೋಜನೆಯಿಂದ ವಿದ್ಯುತ್ ಉಳಿತಾಯಕ್ಕೆ ನೀಡುವ ಪ್ರೋತ್ಸಾಹಧನವೆಷ್ಟು ? (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

## ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ಮತ್ತು ಟ್ರಾನ್ಸ್‌ಫಾರ್ಮರ್‌ಗಳ ಬಗ್ಗೆ

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು):–**

೯೭೨ (೧೨೧೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಕಲಬುರಗಿ ವಿದ್ಯುತ್ ಸರಬರಾಜು ಈ ಐದು ಕಂಪನಿಗಳಿಗೆ ಹಾಗೂ ಇತರೆ ಕಂಪನಿಗಳಿಗೆ ವಿದ್ಯುತ್ ಟ್ರಾನ್ಸ್‌ಫಾರ್ಮರ್ ತಯಾರಿಸಿ ಸರಬರಾಜು ಮಾಡಲು ಬೆಂಗಳೂರು ನಗರ, ಮೈಸೂರು ರಸ್ತೆಯಲ್ಲಿರುವ ಕವಿಕಾ ಕಂಪನಿಗೆ ಎಷ್ಟು ಮುಂಗಡ ಹಣವನ್ನು ನೀಡಲಾಗಿದೆ ; ಯಾವಾಗ ನೀಡಲಾಗಿದೆ ;

(ಆ) ಕವಿಕಾ ಕಂಪನಿಯಿಂದ ಎಷ್ಟು ಟ್ರಾನ್ಸ್‌ಫಾರ್ಮರ್‌ಗಳನ್ನು ತಯಾರಿಸಿ ಸರಬರಾಜು ಮಾಡಲಾಗಿದೆ ; ಇದುವರೆವಿಗೂ ಸರಬರಾಜು ಮಾಡಿಲ್ಲವಾದರೆ ಕಾರಣವೇನು ;

(ಇ) ವಿದ್ಯುತ್ ಗ್ರಾಹಕರ ಮೇಲೆ ವಿದ್ಯುತ್ ದರ ಹೆಚ್ಚಿಸಿ, ಗ್ರಾಹಕರು ನೀಡಿದ ಹಣವನ್ನು ಇನ್ನೊಂದು ಕಂಪನಿಗೆ ಮುಂಗಡ ಹಣವನ್ನಾಗಿ ನೀಡಿ ಸರ್ಕಾರ ಸುಮ್ಮನಿರುವುದು ಸರಿಯೇ ;

(ಈ) ಗ್ರಾಮಾಂತರ ಪ್ರದೇಶದಲ್ಲಿ ಟ್ರಾನ್ಸ್‌ಫಾರ್ಮರ್‌ಗಳ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ ; ಬಂದಿದ್ದರೆ, ಪರಿಹಾರಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಹೈದರಾಬಾದ್–ಕರ್ನಾಟಕ ಪ್ರದೇಶದ ಗಂಗಾವತಿಯಲ್ಲಿ ರೈಸ್ ಪಾರ್ಕ್ ಮತ್ತು ಕಲಬುರಗಿಯಲ್ಲಿ ತೋಗರಿ ಟೆಕ್ನಾನಾಲಜಿ ಪಾರ್ಕ್ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೯೭೩ (೧೨೨೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್–ಕರ್ನಾಟಕ ಪ್ರದೇಶದ ಗಂಗಾವತಿಯಲ್ಲಿ ರೈಸ್ ಪಾರ್ಕ್ ಹಾಗೂ ಕಲಬುರಗಿಯಲ್ಲಿ ತೊಗರಿ ಟೆಕ್ನಾನಾಲಜಿ ಪಾರ್ಕ್ (INTAC_G) ಸ್ಥಾಪಿಸುವ ಪ್ರಸ್ತಾವನೆಗಳಿರುವುದು ಸರ್ಕಾರದ ಗಮನಕ್ಕಿದೆಯೇ ; ಇದ್ದರೆ, ಪ್ರತ್ಯೇಕ ಮಾಹಿತಿ ನೀಡುವುದು;

(ಆ) ರಾಜ್ಯ ಸರ್ಕಾರವು ಸದರಿ ರೈಸ್ ಹಾಗೂ ತೊಗರಿ ಪಾರ್ಕ್ ಸ್ಥಾಪಿಸುವ ಘೋಷಣೆ ಮಾಡಿ ಮೂರು ವರ್ಷಗಳು ಗತಿಸಿದ್ದರೂ ಸದರಿ ಯೋಜನೆಗಳಲ್ಲಿ ಯಾವುದೇ ರೀತಿಯ ಬೆಳವಣಿಗೆಯಾಗದೆ ಇರುವುದಕ್ಕೆ ಕಾರಣಗಳೇನು ; (ಯೋಜನೆವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಸದರಿ ಯೋಜನೆಗಳು ಸ್ಥಾಪಿಸುವ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು ; ಈ ಯೋಜನೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ಯೋಜನಾವಾರು ಪ್ರತ್ಯೇಕ ಮಾಹಿತಿ ನೀಡುವುದು)

## ರಾಯಚೂರು ಶಾಖೋತ್ಪನ್ನ ಘಟಕದಿಂದ ವಿದ್ಯುತ್ ಉತ್ಪಾದನೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೯೭೪ (೧೨೨೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಶಾಖೋತ್ಪನ್ನ ಘಟಕ ಸ್ಥಾಪನೆಯಾಗಿರುವುದು ಯಾವಾಗ ; ಘಟಕಗಳ ಸಂಖ್ಯೆ ಪ್ರಾರಂಭವಾದ ವರ್ಷ ಮತ್ತು ವೆಚ್ಚವೆಷ್ಟು ; (ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಸದರಿ ಘಟಕಗಳು ಕಳೆದ ೨ ವರ್ಷಗಳಿಂದ ಸರಾಸರಿ ಪ್ರತಿದಿನ ಎಷ್ಟು ಮೆಟ್ರಿಕ್ ಟನ್ ಕಲ್ಲಿದ್ದಲು ಬಳಸಿ ಎಷ್ಟು ವಿದ್ಯುತ್ ಉತ್ಪಾದಿಸಬೇಕಾಗಿತ್ತು ; ಸದರಿ ಘಟಕಗಳು ಕಳೆದ ೨ ವರ್ಷಗಳಿಂದ ಪ್ರತಿದಿನ ಸರಾಸರಿ ಎಷ್ಟು ಕಲ್ಲಿದ್ದಲು ಬಳಕೆಯಾಗಿ ವಿದ್ಯುತ್ ಉತ್ಪಾದನೆ ಮಾಡಲಾಗಿದೆ ; (ಘಟಕವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಸದರಿ ಘಟಕಗಳು ಪದೇ ಪದೇ ಸ್ಥಗಿತಗೊಳ್ಳುತ್ತಿರುವುದಕ್ಕೆ ಕಾರಣಗಳೇನು ; ಘಟಕವಾರು ವಿವರ ನೀಡುವುದು ; ಹಾಗೂ ಕಳೆದ ೨ ವರ್ಷಗಳಿಂದ ದುರಸ್ಥಿ ಮತ್ತು ನಿರ್ವಹಣೆಗಾಗಿ ಆದ ಖಚ್ಚು ಎಷ್ಟು; ಘಟಕವಾರು ವಿವರ ನೀಡುವುದು ; ಸದರಿ ಘಟಕಗಳ ಶಿಫಾರಸ್ಸು ಮಾಡಿದ ಬಾಳಿಕೆ ಅವಧಿ ಎಷ್ಟು ? (ಘಟಕವಾರು ವಿವರ ನೀಡುವುದು)

# ರಾಜ್ಯದಲ್ಲಿ ಗೋಶಾಲೆಗಳ ಅನುದಾನ ಹಾಗೂ ಮೃತಪಟ್ಟ ಗೋವುಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೯೭೫ (೧೨೩೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಸರ್ಕಾರಿ ಗೋ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಗೋಶಾಲೆಯಲ್ಲಿ ಒಟ್ಟು ಎಷ್ಟು ಗೋವುಗಳಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಗೋ ಶಾಲೆ ನಿರ್ವಹಣೆಗೆ ರಾಜ್ಯ ಸರ್ಕಾರ ಪ್ರತಿ ವರ್ಷ ಬಿಡುಗಡೆ ಮಾಡಿದ ಅನುದಾನವೆಷ್ಟು ;

(ಈ) ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಯೋಜನೆಗಳಿಗೆ ಬಳಸಲಾಗುವುದು ; (ವಿವರ ನೀಡುವುದು)

(ಉ) ಪ್ರತಿ ವರ್ಷ ಗೋ ಶಾಲೆಯಲ್ಲಿ ಮೃತಪಟ್ಟ ಗೋವುಗಳ ಸಂಖ್ಯೆ ಎಷ್ಟು ; ಅವುಗಳು ಸತ್ತ ನಂತರ ಏನು ಮಾಡಲಾಗುತ್ತಿದೆ ;

(ಊ) ಮರಣ ಹೊಂದಿದ ನಂತರ ಅದರ ಚರ್ಮ ಹಾಗೂ ಮೂಳೆಗಳನ್ನು ಮಾರಾಟ ಮಾಡಿ ಆದಾಯಗಳಿಸಲು ಇಲಾಖೆ ಯೋಜನೆ ರೂಪಿಸಿದೆಯೇ ? (ವಿವರ ನೀಡುವುದು)

## ಕೇಂದ್ರದ "ಅಮೃತ ಯೋಜನೆ" ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೯೭೬ (೧೨೩೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರದ "ಅಮೃತ ಯೋಜನೆ" ಅಡಿಯಲ್ಲಿ ಆಯ್ಕೆಯಾದ ಜಿಲ್ಲಾ ಕೇಂದ್ರ ಸ್ಥಾನದ ನಗರಗಳು ಯಾವುವು ; ರಾಜ್ಯದಲ್ಲಿರುವಂತಹ ಒಟ್ಟು ಜಿಲ್ಲಾ ಕೇಂದ್ರ ಸ್ಥಾನದ ನಗರಗಳು ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಹೈದ್ರಾಬಾದ್–ಕರ್ನಾಟಕ ಪ್ರದೇಶದ ಯಾದಗಿರಿ ಹಾಗೂ ಕೊಪ್ಪಳ ಜಿಲ್ಲೆಗಳು ಘೋಷಣೆಯಾಗಿ ಜಿಲ್ಲಾ ಕೇಂದ್ರ ಸ್ಥಾನಗಳಾದ ಯಾದಗಿರಿ ಹಾಗೂ ಕೊಪ್ಪಳ ನಗರಗಳು, ಬೃಹತ್ ಸಿಮೆಂಟ್ ಉದ್ಯಮಗಳು ಇರುವ ಶಹಾಬಾದ–ವಾಡಿ ನಗರಗಳು, ಅಲ್ಲದೆ ಶೈಕ್ಷಣಿಕವಾಗಿ ಬೆಳವಣಿಗೆ ಕಂಡಂತಹ ಹರಪನಳ್ಳಿ ನಗರಗಳಲ್ಲಿ ನಾಗರಿಕ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಸಮಸ್ಯೆ ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಯೋಜನೆಗಳೇನು ; (ಮಾಹಿತಿ ನೀಡುವುದು)

(ಇ) ಸದರಿ "ಅಮೃತ ಯೋಜನೆ" ಅಡಿಯಲ್ಲಿ ಜಿಲ್ಲಾ ಕೇಂದ್ರ ಸ್ಥಾನದ ನಗರಗಳು ಹಾಗೂ ಬೃಹತ್ ಕೈಗಾರಿಕೆ ಹೊಂದಿದ ನಗರಗಳು, ಶೈಕ್ಷಣಿಕ ನಗರಗಳನ್ನು ಆಯ್ಕೆ ಮಾಡುವ ನಿಟ್ಟಿನಲ್ಲಿ ನಿಯಮಗಳಲ್ಲಿ ತಿದ್ದುಪಡಿ ತರುವ ಪ್ರಸ್ತಾವನೆಯನ್ನು ಕೇಂದ್ರಕ್ಕೆ ಕಳುಹಿಸಲು ಸರ್ಕಾರ ಮುಂದಾಗುವುದೇ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿ ಬರುವ RTPS ಮತ್ತು YTPS ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೯೭೭ (೧೨೧೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ RTPS ಮತ್ತು YTPS ನಲ್ಲಿ ಭೂಮಿ ಮತ್ತು ಮನೆ ಕಳೆದು ಕೊಂಡಿರುವಂತಹ ಸಂತ್ರಸ್ತರುಗಳಿಗೆ (ಕಳೆದ ೩೦ ವರ್ಷಗಳಿಂದ) ಉದ್ಯೋಗವಕಾಶ ದೊರಕಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಒಟ್ಟು ಭೂಸಂತ್ರಸ್ತರುಗಳ ಸಂಖ್ಯೆ ಎಷ್ಟು ; ಇದರಲ್ಲಿ ಎಷ್ಟು ಭೂಸಂತ್ರಸ್ತರಿಗೆ ಉದ್ಯೋಗ ದೊರಕಿಸಲಾಗಿದೆ ; ಬಾಕಿ ಭೂಸಂತ್ರಸ್ತರಿಗೆ ಇನ್ನು ಯಾವಾಗ ಉದ್ಯೋಗಾವಕಾಶ ದೊರಕಿಸಲಾಗುವುದು ;

(ಇ) RTPS ಮತ್ತು YTPS ನ ವ್ಯಾಪ್ತಿಯಲ್ಲಿ ಬರುವ (RTPS– ಯದ್ಲಾಪುರ, ದೇವಸೂರು, YTPS ಚಿಕ್ಕಸೂಗುರು, ಯಕ್ಲಾಸಪುರ, ಯಕ್ಷನಹಳ್ಳಿ,

ಎಗನೂರು, ವಡ್ಲೂರು) ಹಳ್ಳಿಗಳನ್ನು ಸ್ಥಳಾಂತರಿಸಲು (Shifting Village) ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಇವುಗಳನ್ನು ಯಾವಾಗ ಸ್ಥಳಾಂತರಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿರುವ ರಸ್ತೆಗಳು ಮತ್ತು ಸೇತುವೆಗಳ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೯೭೮ (೧೨೧೯) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ೨೦೧೫–೧೬ನೇ ಸಾಲಿನಲ್ಲಿ ವಿವಿಧ ಯೋಜನೆಗಳಲ್ಲಿ ಮಂಜೂರಾಗಿರುವ ರಸ್ತೆಗಳು ಮತ್ತು ಸೇತುವೆಗಳೆಷ್ಟು ; (ವಿವರ ಒದಗಿಸುವುದು)

(ಆ) ಈ ಕಾಮಗಾರಿಗಳಿಗೆ ಒದಗಿಸಿರುವ ಒಟ್ಟು ಹಣವೆಷ್ಟು ;

(ಇ) ರಾಯಚೂರು ಜಿಲ್ಲೆಯಲ್ಲಿ ಹಾದು ಹೋಗುವ NH–೧೬೭ ಹಗರಿದಿಂದ ಜಚ್ಚಲವರೆಗಿನ ರಸ್ತೆಯ ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ರಾಜ್ಯ ಹೆದ್ದಾರಿ–೨೩ ರಾಯಚೂರಿನಿಂದ ರಿಂಗ್ ರೋಡ್‌ವರೆಗೂ ಚತುಷ್ಪಥ ರಸ್ತೆಯನ್ನು SHDP ಯೋಜನೆ ಅಡಿಯಲ್ಲಿ ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳಾವುವು ?

## ರಾಯಚೂರು ಜಿಲ್ಲೆಯ ಹತ್ತಿ ಬೆಳೆಗಾರರ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೯೭೯ (೧೨೨೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಹಾನಿಯಾಗಿರುವಂತಹ ಹತ್ತಿ ಬೆಳೆಗಾರರಿಗೆ ಪರಿಹಾರ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಬೀಟಿ ಹತ್ತಿ ಬೆಳೆ ಹಾನಿಗೆ ಕಾರಣಗಳನ್ನು ಗುರುತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಬೆಳೆಹಾನಿ ಆಗದಂತೆ ತಡೆಯಲು ಸರ್ಕಾರ ರೂಪಿಸಿರುವ ಯೋಜನೆಗಳಾವುವು ?

## ರಾಯಚೂರು ಜಿಲ್ಲೆಯಲ್ಲಿರುವ ಪಶು ಆಸ್ಪತ್ರೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೯೮೦ (೧೨೨೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ ಒಟ್ಟು ಪಶು ಆಸ್ಪತ್ರೆಗಳೆಷ್ಟು ;

(ಆ) ಸದರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯಲ್ಲಿ ಸಂಚಾರಿ ಪಶು ಆಸ್ಪತ್ರೆಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿರುವ ಒಟ್ಟು ವಕ್ಫ್ ಆಸ್ತಿ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೯೮೧ (೧೨೨೦೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ ಒಟ್ಟು ವಕ್ಫ್ ಆಸ್ತಿ ಎಷ್ಟು ;

(ಆ) ಜಿಲ್ಲೆಯ ಅಲ್ಪಸಂಖ್ಯಾತರ ಅನುಕೂಲಕ್ಕಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಮನೆ ಕಟ್ಟುವ ಪರವಾನಗಿ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೨ (೧೧೮೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮನೆ ಕಟ್ಟಲು ಪರವಾನಗಿ ಪಡೆಯುವ ನಿಯಮದಡಿಯಲ್ಲಿ ನೂತನವಾಗಿ ಮನೆ ಕಟ್ಟಲು ಸರ್ಕಾರ ನಿಗಧಿಪಡಿಸಿರುವ ಶುಲ್ಕ ಎಷ್ಟು ; ಯಾವ ಆಧಾರದ ಮೇಲೆ ಶುಲ್ಕ ವಸೂಲಿ ಮಾಡಲಾಗುವುದು ;

(ಆ) ಪರವಾನಗಿಯ ಸಮಾಪ್ತಿಯ (Expiry) ಅವಧಿ ಎಷ್ಟು ; ಅವಧಿ ಮುಗಿದ ನಂತರ ನವೀಕರಣಗೊಳಿಸಲು ವಿಧಿಸಲಾಗುವ ಶುಲ್ಕ ಎಷ್ಟು ;

(ಇ) ಪರವಾನಗಿಯಲ್ಲಿ ನಿಗಧಿಪಡಿಸಿರುವ ಅವಧಿಯಲ್ಲಿ ಮನೆ ನಿರ್ಮಾಣ ಮಾಡಿಕೊಳ್ಳದ ಮಾಲೀಕರಿಗೆ ದಂಡ ವಿಧಿಸಲಾಗುತ್ತಿದೆಯೇ ; ಹಾಗಿದ್ದಲ್ಲಿ, ೨೦೧೪–೧೫, ೨೦೧೫–೧೬ರಲ್ಲಿ ವಸೂಲಾದ ದಂಡ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ದಂಡ ವಸೂಲಿ ಮಾಡಲು ಇರುವ ನಿಯಮವು ಮಾನದಂಡಗಳೇನು ?

## ಶಿವಮೊಗ್ಗ ಜಿಲ್ಲಾ ಸಹಕಾರಿ ಬ್ಯಾಂಕ್ ವಿಚಾರ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೩ (೧೧೪೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೪ ರಿಂದ ೨೦೧೪ರ ವರೆಗೆ ಶಿವಮೊಗ್ಗ ಜಿಲ್ಲಾ ಸಹಕಾರಿ ಬ್ಯಾಂಕ್‌ನಲ್ಲಿ ನಡೆದ ಅವ್ಯವಹಾರಗಳ ಬಗ್ಗೆ ಸರ್ಕಾರ ಸಿ.ಓ.ಡಿ. ತನಿಖೆಗೆ ಆದೇಶಿಸಿದೆಯೇ ; ಹಾಗಿದ್ದಲ್ಲಿ, ತನಿಖೆಯು ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಆ) ರಾಜ್ಯ ಸಹಕಾರ ಇಲಾಖೆಯ ಜಂಟಿ ನಿಬಂಧಕರು ಸಹಕಾರ ಸಂಘಗಳ ಕಾಯ್ದೆ ೬೪ರ ಪ್ರಕಾರ ಸರ್ಕಾರಕ್ಕೆ ವರದಿ ಸಲ್ಲಿಸಿದ್ದಾರೆಯೇ ; (ಹಾಗಿದ್ದಲ್ಲಿ, ವರದಿಯ ಪ್ರತಿ ನೀಡುವುದು)

(ಇ) ನೀಡಿರುವ ವರದಿಯ ಮೇರೆಗೆ ಯಾವ ಯಾವ ಅಧಿಕಾರಿಗಳಿಗೆ ನೋಟೀಸ್ ನೀಡಲಾಗಿದೆ ; ಈ ವರದಿಯ ಆಧಾರದ ಮೇರೆಗೆ ತೆಗೆದುಕೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಂಗ್ರಹಿಸುವ ಉಪಕರಣಗಳ ಬಗ್ಗೆ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೪ (೧೧೮೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ ಸ್ಥಳೀಯ ಸಂಸ್ಥೆಗಳಿಂದ ಸಂಗ್ರಹಿಸಲಾಗುವ ವಿವಿಧ ಹಾಗೂ ಉಪಕರ (Cess) ಗಳು ಯಾವುವು ; ಸಂಗ್ರಹವಾಗುವ ಒಟ್ಟು ಮೊತ್ತ ಎಷ್ಟು ; (ವಿದ್ಯಾಕರ, ಭಿಷುಕರ ಕರ, ಗ್ರಂಥಾಲಯ ಕರ ಇತ್ಯಾದಿಗಳ ಜಿಲ್ಲಾವಾರು ವಿವರ ನೀಡುವುದು)

(ಆ) ಸಂಗ್ರಹವಾದ ಕರವನ್ನು ವಿನಿಯೋಗಿಸುವ ಅಧಿಕಾರ ಯಾರಿಗಿದೆ ; ಈ ರೀತಿ ಸಂಗ್ರಹವಾಗುವ ಉಪಕರಗಳನ್ನು ೨೦೧೩–೧೪ರಲ್ಲಿ ಮತ್ತು ೨೦೧೪–೧೫ರಲ್ಲಿ ಎಷ್ಟು ಖರ್ಚು ಮಾಡಲಾಗಿದೆ ; (ವಿವರಗಳನ್ನು ಜಿಲ್ಲಾವಾರು ನೀಡುವುದು)

(ಇ) ಸಂಗ್ರಹಿಸಲಾದ (Cess) ಖರ್ಚು ಮಾಡುವ ಪೂರ್ಣ ಅಧಿಕಾರವನ್ನು ಆಯಾ ಸ್ಥಳೀಯ ಸಂಸ್ಥೆಗಳಿಗೆ ನೀಡುವ ಬಗ್ಗೆ ಸರ್ಕಾರ ಗಮನ ಹರಿಸುವುದೇ ?

## ಹನಿ ನೀರಾವರಿಗೆ ಸಹಾಯ ಧನ

**ಶ್ರೀ ಭಾನುಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೫ (೧೧೯೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹನಿ ನೀರಾವರಿ (Drip irrigation) ಗೆ ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು ; ಖರ್ಚಾದ ಅನುದಾನ ಎಷ್ಟು ; (ವಿವರ ಒದಗಿಸುವುದು)

(ಆ) (Drip irrigation) ಹನಿ ನೀರಾವರಿಗೆ ಸಹಾಯಧನ ಕೋರಿ, ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕಾಲಾವಧಿ ಎಷ್ಟು ; ವಿವರ ಸಲ್ಲಿಸಲು ನಿಗಧಿಪಡಿಸಿದ ಕಾಲಾವಧಿ ಎಷ್ಟು ; (ವಿವರ ನೀಡುವುದು)

(ಇ) ತುಮಕೂರು ಜಿಲ್ಲೆಯಲ್ಲಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ರೈತ ಸಂಪರ್ಕ ಕೇಂದ್ರಗಳ ಬಗ್ಗೆ

**ಶ್ರೀ ಬಸವನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೮೬ (೧೧೦೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿರುವ ರೈತ ಸಂಪರ್ಕ ಕೇಂದ್ರಗಳೆಷ್ಟು ;

(ಆ) ಈ ರೈತ ಸಂಪರ್ಕ ಕೇಂದ್ರಗಳಿಗೆ ಸಿಬ್ಬಂದಿ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಸೌಲಭ್ಯವನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ತಾಲ್ಲೂಕುವಾರು ವಿವರ ನೀಡುವುದು)

## ಪಿ.ಎಲ್.ಡಿ. ಬ್ಯಾಂಕ್‌ಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೯೮೭ (೧೨೧೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪಿ.ಎಲ್.ಡಿ. ಬ್ಯಾಂಕ್‌ಗಳ ವೃಂದ ಮತ್ತು ನೇಮಕಾತಿ ನಿಯಮಾವಳಿಯಂತೆ ಮಂಜೂರಾದ ಹುದ್ದೆಗಳು ಎಷ್ಟು ; ಖಾಲಿ ಇರುವ ಹುದ್ದೆಗಳು ಎಷ್ಟು ; ವಿವರವಾಗಿ ಹುದ್ದೆಯ ಪದನಾಮ, ವೇತನ ಶ್ರೇಣಿ, ವಿದ್ಯಾರ್ಹತೆ, ನೇಮಕಾತಿ ವಿಧಾನಗಳನ್ನೊಳಗೊಂಡಂತೆ ಮಾಹಿತಿ ನೀಡುವುದು ;

(ಆ) ಪಿ.ಎಲ್.ಡಿ. ಬ್ಯಾಂಕುಗಳಲ್ಲಿ ಹಾಲಿ ಎಷ್ಟು ಜನ ಗುತ್ತಿಗೆ ಮತ್ತು ದಿನಗೂಲಿ ನೌಕರರಿದ್ದಾರೆ ; (ವಿವರವಾಗಿ ಹೆಸರು, ವಿಳಾಸದೊಂದಿಗೆ ಮಾಹಿತಿ ಕೊಡುವುದು)

(ಇ) ಇವರುಗಳನ್ನು ಖಾಯಂಗೊಳಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ, ಇಲ್ಲವಾದಲ್ಲಿ, ಇವರನ್ನು ಖಾಯಂಗೊಳಿಸದಿರಲು ಕಾರಣಗಳೇನು ;

(ಈ) ಪಿ.ಎಲ್.ಡಿ. ಬ್ಯಾಂಕುಗಳು ಸರ್ಕಾರದಿಂದ ಅನುದಾನ ಪಡೆಯುತ್ತಿರುವ ಸಂಸ್ಥೆಗಳೇ ; ಅಥವಾ ಇವು ಯಾವ ಸಂಸ್ಥೆಗಳು ;

(ಉ) ಪಿ.ಎಲ್.ಡಿ. ಬ್ಯಾಂಕುಗಳ ಅಭಿವೃದ್ಧಿಗಾಗಿ ಸರ್ಕಾರ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ?

## ತೋಟಗಾರಿಕಾ ಮಿಷನ್ ಯೋಜನೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೯೮೮ (೧೨೨೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಇಲಾಖೆ ವತಿಯಿಂದ ಕೇಂದ್ರ ಸರ್ಕಾರದ ನೆರವಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ೨೦೧೫–೧೬ನೇ ಸಾಲಿನಲ್ಲಿ ಯಾವ ಯಾವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ ;

(ಆ) ಸದರಿ ಯೋಜನೆಯಲ್ಲಿ ಕೇಂದ್ರ ಸರ್ಕಾರದಿಂದ ಬಂದ ಹಣ ಎಷ್ಟು ; ಯಾವ ಯಾವ ಕಾರ್ಯಕ್ರಮಗಳಿಗೆ ವಿನಿಯೋಗಿಸಲಾಗಿದೆ ;

(ಇ) ಸದರಿ ಯೋಜನೆಯಡಿ ಸಾಮೂಹಿಕ ಕೆರೆ ನಿರ್ಮಾಣ ಕಾಮಗಾರಿಗಳನ್ನು ಎಲ್ಲೆಲ್ಲಿ ಅನುಷ್ಠಾನಗೊಳಿಸಿ ಪೂರ್ಣಗೊಳಿಸಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಲಾಭದಲ್ಲಿರುವ ಉದ್ದಿಮೆಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೯೮೯ (೧೨೧೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸಾರ್ವಜನಿಕ ಉದ್ದಿಮೆಗಳು ಎಷ್ಟು ; ಇದರಲ್ಲಿ ಲಾಭದಲ್ಲಿ ನಡೆಯುತ್ತಿರುವ ಉದ್ದಿಮೆಗಳು ಎಷ್ಟು ; ಸೇವಾ ಹುದ್ದೆಗಳು ಎಷ್ಟು ; (ವಿವರವಾದ ಮಾಹಿತಿ ಕೊಡುವುದು)

(ಆ) ಸಾರ್ವಜನಿಕ ಉದ್ದಿಮೆಗಳು ತನ್ನದೇ ಆದಂತಹ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಹೊಂದಿವೆಯೇ ;

(ಇ) ಹೊಂದಿದ್ದರೆ, ಎಲ್ಲಾ ಸಾರ್ವಜನಿಕ ಉದ್ದಿಮೆಗಳ ಹಾಲಿ ಜಾರಿಯಲ್ಲಿರುವ ಹಾಗೂ ಎಲ್ಲಾ ತಿದ್ದುಪಡಿಗಳನ್ನು ಒಳಗೊಂಡಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಉದ್ದಿಮೆವಾರು ಒದಗಿಸುವುದು ?

## ಸೌರವಿದ್ಯುತ್ ಯೋಜನೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೯೯೦ (೧೨೨೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸೌರ ವಿದ್ಯುತ್ ಯೋಜನೆಯಡಿ ಎಷ್ಟು ಜನ ರೈತರಿಗೆ ಪವರ್ ಪರ್‌ಚೇಸ್ ಅಗ್ರಿಮೆಂಟ್ (ಪಿಪಿಎ) ಮಾಡಿಕೊಡಲಾಗಿದೆ ; (ಕ್ರಮವಾಗಿ ರೈತರ ಹೆಸರು, ಅಂಚೆ ವಿಳಾಸ, ದೂರವಾಣಿ ಸಂಖ್ಯೆಗಳೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪವರ್ ಪರ್‌ಚೇಸ್ ಅಗ್ರಿಮೆಂಟ್ (ಪಿಪಿಎ) ಪಡೆದ ರೈತರಲ್ಲಿ ಎಷ್ಟು ಜನ ಸೌರಶಕ್ತಿ ವಿದ್ಯುತ್ ಉತ್ಪದನಾ ಸಂಬಂಧ ಕಾಮಗಾರಿಗಳನ್ನು ಪೂರ್ಣಗೊಳಿಸಿರುತ್ತಾರೆ, ಇಲ್ಲವೇ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ ; (ರೈತರವಾರು ಮಾಹಿತಿ ನೀಡುವುದು)

(ಇ) ಒಂದು ಮೆಗಾವ್ಯಾಟ್ ವಿದ್ಯುತ್ ಅಂದರೆ ಅದರ ಪರಿಮಾಣ ಎಷ್ಟು ; ಎಷ್ಟು ಯುನಿಟ್‌ಗಳಿಗೆ ಸಮ; ಉದಾಹರಣೆಯೊಂದಿಗೆ ವಿವರವಾದ ಮಾಹಿತಿ ನೀಡುವುದು ;

(ಈ) ರೈತರು ಸೌರವಿದ್ಯುತ್ ಯೋಜನೆಯಡಿ ಒಂದು ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲು ಎಷ್ಟು ಎಕರೆ ಜಮೀನಿನಲ್ಲಿ ಎಷ್ಟು ಸೌರಫಲಕಗಳು ಮತ್ತು ಇತರೇ ಸಲಕರಣೆಗಳನ್ನು ನಿರ್ಮಿಸಬೇಕಾಗಿರುತ್ತದೆ ; ಇದಕ್ಕೆ ತಗಲುವ ಒಟ್ಟಾರೆ ವೆಚ್ಚ ಎಷ್ಟು ? (ಸಂಪೂರ್ಣ ತಾಂತ್ರಿಕ ಯೋಜನಾ ವರದಿಯೊಂದಿಗೆ ವಿವರ ನೀಡುವುದು)

## ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಅನುದಾನ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೧ (೧೧೮೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಲೋಕೋಪಯೋಗಿ ಇಲಾಖೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಯಾವ ಯಾವ ಶೀರ್ಷಿಕೆಯಡಿ ಎಷ್ಟೆಷ್ಟು ಹಣವನ್ನು ಒದಗಿಸಲಾಗಿದೆ ; (ಕಳೆದ ೨ ವರ್ಷಗಳ ವಿವರ ನೀಡುವುದು)

(ಆ) ಯಾವ ಯಾವ ಶೀರ್ಷಿಕೆಗೆ ಎಷ್ಟೆಷ್ಟು ಹಣವನ್ನು ಹಂಚಿಕೆ ಮಾಡಲಾಗಿದೆ ; (ತಾಲ್ಲೂಕುವಾರು ಶೀರ್ಷಿಕೆವಾರು ವಿವರ ನೀಡುವುದು)

(ಇ) ಈ ಹಣವನ್ನು ಯಾವ ಯಾವ ಕಾಮಗಾರಿಗಳಿಗೆ ಹಂಚಿಕೆ ಮಾಡಲಾಗಿದೆ ; ಈ ಕಾಮಗಾರಿಗಳು ಯಾವ ಹಂತದಲ್ಲಿವೆ ?

## ರೈತರ ವಿದ್ಯುತ್ ಸಮಸ್ಯೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೭೨ (೧೧೮೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನಿರಂತರ ವಿದ್ಯುತ್ ಸರಬರಾಜಿಲ್ಲದೆ ರೈತರು ತೊಂದರೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರೈತರ ವಿದ್ಯುತ್ ಸಮಸ್ಯೆ ನಿವಾರಣೆಗೆ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಇ) ಸೌರಶಕ್ತಿ ಚಾಲಿತ ಪಂಪುಗಳನ್ನು ಅಳವಡಿಸಿ ವಿದ್ಯುತ್ ಸಮಸ್ಯೆ ನಿವಾರಿಸಲು ಸರ್ಕಾರ ಯೋಚಿಸಿದೆಯೇ ;

(ಈ) ಹಾಗಿದ್ದಲ್ಲಿ, ಶೀಘ್ರವೇ ಇದನ್ನು ಅನುಷ್ಠಾನಕ್ಕೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ?

## ಹಾಪ್‌ಕಾಮ್ಸ್ ಮಳಿಗೆಗಳಲ್ಲಿ ಅನ್ಯಾಯವಾಗುತ್ತಿರುವುದು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೭೩ (೧೧೮೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಪ್‌ಕಾಮ್ಸ್‌ಗಳಲ್ಲಿ ರೈತರು ಉತ್ಪನ್ನಗಳನ್ನು ನ್ಯಾಯವಾದ ಬೆಲೆಯಲ್ಲಿ ಗ್ರಾಹಕರಿಗೆ ನೀಡಬೇಕೆಂಬುದು ಸರ್ಕಾರದ ಉದ್ದೇಶವಲ್ಲವೆ ;

(ಆ) ಬಹುತೇಕ ಹಾಪ್ ಕಾಮ್ಸ್ ಮಳಿಗೆಗಳಲ್ಲಿ ಹಣ್ಣು ಮತು ತರಕಾರಿಗಳ ಬೆಲೆಯನ್ನು ಪ್ರದರ್ಶಿಸದೆ ತಮಗಿಷ್ಟ ಬಂದಂತೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಂತಹವರ, ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಇ) ಹಾಪ್‌ಕಾಮ್ಸ್ ಅಧಿಕಾರಿಗಳು ಎಷ್ಟು ಮಳಿಗೆಗಳಿಗೆ ಭೇಟಿ ನೀಡಿ ತನಿಖೆ ನಡೆಸಿ ಅಕ್ರಮಗಳನ್ನು ಪತ್ತೆ ಹಚ್ಚಿದ್ದಾರೆ ;

(ಈ) ಹಾಪ್‌ಕಾಮ್ಸ್ ಮಳಿಗೆಗಳಲ್ಲಿ ಉತ್ತಮಗುಣಮಟ್ಟದ ಹಾಗೂ ತಾಜಾ (fresh ) ಹಣ್ಣು ಮತ್ತು ತರಕಾರಿಗಳನ್ನು ಮಾರಾಟ ಮಾಡದಿರುವುದರಿಂದ ಖಾಸಗಿ ಅಂಗಡಿಗಳ ಕಡೆ ಜನ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಉತ್ತಮಗುಣಮಟ್ಟದ ಹಾಗೂ ತಾಜಾ ಮತ್ತು ತರಕಾರಿಗಳನ್ನು ನ್ಯಾಯವಾದ ಬೆಲೆಗೆ ಮರಾಟ ಮಾಡಲು ಹಾಗೂ ಕಡ್ಡಾಯವಾಗಿ ನಿಗಧಿತ ಬೆಲೆ ನಮೂದಿಸುವ ಫಲಕಗಳನ್ನು ಹಾಕುವಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದೇ ?

## ಕಾರವಾರ ತಾಲ್ಲೂಕಿನ ಕಡವಾಡ ಹಾಗೂ ಸುಂಕೇರಿ ರಸ್ತೆ ಸೇತುವೆ ಕಾಮಗಾರಿ ವಿಳಂಬ ಬಗ್ಗೆ.

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೪ (೧೧೧೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಕಡವಾಡ ಹಾಗೂ ಸುಂಕೇರಿ ಸಂಪರ್ಕ ಸೇತುವೆ ಕಳೆದ ೪ ವರ್ಷಗಳಿಂದ ನಿರ್ಮಾಣ ಹಂತದಲ್ಲಿಯೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಿನ್ಯಾಸ ಬದಲಾವಣೆಯ ನೆಪದಲ್ಲಿ ಇನ್ನೂ ಅಧಿಕ ಅನುದಾನಕ್ಕಾಗಿ ಇಲಾಖೆ ಹಾಗೂ ಗುತ್ತಿಗೆದಾರ ಕಾದುಕುಳಿತ್ತಿದ್ದು, ಪ್ರಸ್ತುತ ವರ್ಷದ ಮಳೆಗಾಲದಲ್ಲಿ ಹಳೆ ಸೇತುವೆ ಕುಸಿದು ಬಿದ್ದು ಸಂಪರ್ಕ ಕಡಿತಗೊಳ್ಳುವ ಸಾಧ್ಯತೆ ಇರುವುದನ್ನು ಸರ್ಕಾರ ಮನಗಂಡಿದೆಯೇ; (ವಿವರ ನಿಡುವುದು)

(ಇ) ಹಾಗಿದ್ದಲ್ಲಿ, ಇನ್ನೂ ಹೆಚ್ಚಿಸಿ, ಅನುದಾನ ಬಿಡುಗಡೆಗೊಳಿಸಿ ಸದರಿ ಸೇತುವೆ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ತಿಗೊಳಿಸಲು ಸರ್ಕಾರ ಕ್ರಮಕೈಗೊಳ್ಳುವುದು ? (ವಿವರ ನೀಡುವುದು)

## ಪಶುಸಂಗೋಪನೆ ಇಲಾಖೆಯಲ್ಲಿ "ಡಿ" ಗ್ರೂಪ್" ಹುದ್ದೆ ನೇಮಕಾತಿ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೫ (೧೧೧೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ೨೦೧೫–೧೬ನೇ ಸಾಲಿನಲ್ಲಿ ಪಶುಸಂಗೋಪನಾ ಇಲಾಖೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ "ಡಿ ಗ್ರೂಪ್" ನೌಕರರ ನೇಮಕಾತಿಗೆ ಟೆಂಡರ್ ಕರೆದಿರುವ ಬಗ್ಗೆ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾಗಿದೆಯೇ ; (ಮಾಹಿತಿ ಒದಗಿಸುವುದು)

(ಆ) ಸದರಿ ಟೆಂಡರ್ ಪ್ರಕ್ರಿಯೆಯಲ್ಲಿ "ಡಿ ಗ್ರೂಪ್" ನೌಕರರಿಗೆ ನೇಮಕಾತಿ ಮಾಡಿಕೊಳ್ಳುವಲ್ಲಿ ಇರುವ ಮಾನದಂಡವೇನು ;

(ಇ) ಟೆಂಡರ್ ಪ್ರಕ್ರಿಯೆಯಲ್ಲಿ ಕಾರವಾರ ಜಿಲ್ಲೆಗೆ ಟೆಂಡರ್ ಪಡೆದುಕೊಂಡಿರುವವರ ವಿವರ, ಅವರ ಅರ್ಹತೆಯೊಂದಿಗೆ ವಿವರ ನೀಡುವುದು ;

(ಈ) ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ "ಡಿ ಗ್ರೂಪ್" ನೌಕರರನ್ನು ನೇಮಕಾತಿ ಮಾಡಿಕೊಂಡಿರುವ ಹೆಸರು, ವಿವರದೊಂದಿಗೆ ಅವರಿಗೆ ಷರತ್ತಿನ ಪ್ರಕಾರ ಪ್ರತಿ ತಿಂಗಳು ನೀಡಬೇಕಾದ ವೇತನ ಎಷ್ಟು ; ಯಾವ ತಿಂಗಳಿಂದ ವೇತನ ನೀಡಲಾಗುವುದು ? (ವಿವರ ನೀಡುವುದು)

## ಹೆಸ್ಕಾಂ ಹೊರಗುತ್ತಿಗೆ ಆಧಾರದಲ್ಲಿ ದಿನಗೂಲಿ ನೌಕರರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೬ (೧೧೧೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ ಕಾರವಾರ ಜಿಲ್ಲೆಯಲ್ಲಿ ಹೆಸ್ಕಾಂ ಇಲಾಖೆಯಲ್ಲಿ ೨೪X೭ ರ ಹೊರಗುತ್ತಿಗೆ ಆಧಾರದ ಮೇಲೆ ನೌಕರರನ್ನು ನೇಮಕಾತಿಗೆ ಟೆಂಡರ್ ಕರೆದಿರುವ ಬಗ್ಗೆ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾಗಿದೆಯೆ; ಹೊರಡಿಸಿದ್ದಲ್ಲಿ, ಮಾಹಿತಿ ಒದಗಿಸುವುದು ;

(ಆ) ಸದರಿ ಟೆಂಡರ್ ಪ್ರಕ್ರಿಯೆಯಲ್ಲಿ ನೌಕರರಿಗೆ ನೇಮಕಾತಿ ಮಾಡಿಕೊಳ್ಳುವಲ್ಲಿ ಇರುವ ಮಾನದಂಡವೇನು ;

(ಇ) ಟೆಂಡರ್ ಪ್ರಕ್ರಿಯೆಯಲ್ಲಿ ಕಾರವಾರ ಜಿಲ್ಲೆಗೆ ಟೆಂಡರ್ ಪಡೆದುಕೊಂಡಿರುವವರ ವಿವರ, ಅವರ ಅರ್ಹತೆಯೊಂದಿಗೆ ವಿವರ ನೀಡುವುದು ;

(ಈ) ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ ನೌಕರರನ್ನು ನೇಮಕಾತಿ ಮಾಡಿಕೊಂಡಿರುವವರ ಹೆಸರು, ವಿವರದೊಂದಿಗೆ ಅವರಿಗೆ ಷರತ್ತಿನ ಪ್ರಕಾರ ಪ್ರತಿ ತಿಂಗಳು ನೀಡಬೇಕಾದ ವೇತನ ಎಷ್ಟು ; ಯಾವ ತಿಂಗಳಿಂದ ವೇತನ ನೀಡಲಾಗುವುದು ? (ವಿವರ ನೀಡುವುದು)

## ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಸದಸ್ಯರಿಗೆ ನೀಡಿರುವ ಸಾಲದ ವಿವರ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೭ (೧೧೯೬) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಹಾಸನ ಜಿಲ್ಲೆ, ಚನ್ನರಾಯಪಟ್ಟಣ ತಾಲ್ಲೂಕಿನ ವ್ಯಾಪ್ತಿಯಲ್ಲಿರುವ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಸಂಘದ ಸದಸ್ಯರುಗಳಿಗೆ ನೀಡಲಾಗಿರುವ ವಿವಿಧ ಬಗೆಯ ಸಾಲದ ಮೊತ್ತವೆಷ್ಟು ? (ವಿವರಗಳನ್ನು ಒದಗಿಸುವುದು)

## ಬಿತ್ತನೆ ಬೀಜಗಳ ವಿವರ ಮತ್ತು ರಸಗೊಬ್ಬರಗಳ ವಿವರ ನೀಡುವ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೮ (೧೧೯೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬ರ ಮುಂಗಾರು ಮಳೆ ಸಮೀಪಿಸುತ್ತಿದ್ದಂತೆ ಹಾಸನ ಜಿಲ್ಲೆಯ ರೈತರಿಗೆ ಅತ್ಯಗತ್ಯವಾಗಿ ಬೇಕಾದ ವಿವಿಧ ಬಗೆಯ ಬಿತ್ತನೆ ಬೀಜಗಳ ವಿತರಣೆಗೆ ಕ್ರಮ ಕೈಗೊಳ್ಳಲಾಗಿದೆಯೇ ; ಈ ಬಗ್ಗೆ ದಾಸ್ತಾನಿನ ವಿವರ ಒದಗಿಸುವುದು ;

(ಆ) ೨೦೧೬ನೇ ಸಾಲಿನಲ್ಲಿ ಹಾಸನ ಜಿಲ್ಲೆಯಲ್ಲಿ ದಾಸ್ತಾನೀಕರಿಸಬಹುದಾದ ರಸಗೊಬ್ಬರಗಳ ವಿವರವನ್ನು ಒದಗಿಸುವುದು ;

(ಇ) ರೈತರಿಗೆ ದೊರಕಬಹುದಾದ ಸಬ್ಸಿಡಿ ನೀಡುವ ರಸಗೊಬ್ಬರಗಳು ಯಾವುವು ? (ವಿವರವನ್ನು ಒದಗಿಸುವುದು)

## ಕಬ್ಬು ಅರೆಯುತ್ತಿರುವ ರೈತರಿಗೆ ಹಣ ನೀಡದೆ ಇರುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) : –**

೯೯ (೧೧೯೮) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆ, ಚನ್ನರಾಯಪಟ್ಟಣ ತಾಲ್ಲೂಕು ಶ್ರೀನಿವಾಸಪುರದಲ್ಲಿರುವ ಹೇಮಾವತಿ ಸಕ್ಕರೆ ಕಾರ್ಖಾನೆಯನ್ನು ಚಾಮುಂಡೇಶ್ವರಿ ಸಕ್ಕರೆ ಕಾರ್ಖಾನೆಗೆ ಗುತ್ತಿಗೆ ನೀಡಿದ್ದು, ಸದರಿ ಕಾರ್ಖಾನೆಗೆ ಕಬ್ಬನ್ನು ಸರಬರಾಜು ಮಾಡುತ್ತಿರುವ ರೈತರಿಗೆ ನಿಗಧಿತ ಸಮಯಕ್ಕೆ ಹಣ ಪಾವತಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗುತ್ತಿಗೆ ಷರತ್ತು ಮತ್ತು ನಿಬಂಧನೆಯಂತೆ ಹೆಚ್ಚುವರಿ ಕಬ್ಬು ಅರೆಯದೇ ಇರುವುದರಿಂದ ಕಬ್ಬು ಬೆಳೆದಿರುವ ರೈತರಿಗೆ ತೊಂದರೆಯಾಗುತ್ತಿರುವುದರ ಬಗ್ಗೆ ಕ್ರಮ ಕೈಗೊಳ್ಳಲಾಗಿದೆಯೇ;

(ಇ) ಗುತ್ತಿಗೆ ಷರತ್ತು ಮತ್ತು ನಿಯಮ ಉಲ್ಲಂಘಿಸಿದ್ದಲ್ಲಿ ಸದರಿ ಕಾರ್ಖಾನೆಯನ್ನು ಹೇಮಾವತಿ ಸಕ್ಕರೆ ಕಾರ್ಖಾನೆಗೆ ಪುನಃ ವಹಿಸಲು ಸರ್ಕಾರವು ಆಲೋಚಿಸಿದೆಯೇ ?

31

## ಅಲ್ಪ ಸಂಖ್ಯಾತರ ಅಭಿವೃದ್ಧಿ ನಿಗಮದಿಂದ 'ಶ್ರಮಶಕ್ತಿ' ಯೋಜನೆಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೦೦೦ (೧೧೮೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ 'ಶ್ರಮಶಕ್ತಿ' ಯೋಜನೆಯಡಿಯಲ್ಲಿ ೨೦೧೩–೧೪ ರಿಂದ ಇಲ್ಲಿಯವರೆಗೆ ಯೋಜನೆಯನ್ನು ಅನುಭವಿಸಿದ ಫಲಾನುಭವಿಗಳ ಸಂಖ್ಯೆ ಎಷ್ಟು; ಸಾಧನೆಗೆ ಹಾಕಿಕೊಂಡಿರುವ ಗುರಿ ಎಷ್ಟು ; ಯಾವ ಯಾವ ವಿಧಾನಸಭಾ ಕ್ಷೇತ್ರಗಳಿಗೆ ಎಷ್ಟು ಎಷ್ಟು ಅನುದಾನ ನೀಡಲಾಗಿದೆ;

(ಆ) ರಾಜ್ಯದ ಯಾವ ಯಾವ ವಿಧಾನಸಭಾ ಕ್ಷೇತ್ರಗಳಿಗೆ 'ಶ್ರಮಶಕ್ತಿ' ಯೋಜನೆಗಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಯಾವ ಆಧಾರದಲ್ಲಿ ಶ್ರಮಶಕ್ತಿ ಯೋಜನೆಯನ್ನು ನೀಡಲಾಗುತ್ತಿದೆ ; ಮಾನದಂಡಗಳೇನು ; (ವಿವರ ನೀಡುವುದು)

(ಇ) 'ಶ್ರಮಶಕ್ತಿ' ಯೋಜನೆಗೆ ಫಲಾನುಭವಿಗಳನ್ನು ಗುರುತಿಸಲು ಇರುವ ಮಾನದಂಡಗಳೇನು ; ಮತ್ತು ಯೋಜನೆಯನ್ನು ಯಾರಿಗೆ ಮೀಸಲಿಡಲಾಗಿದೆ ? (ಫಲಾನುಭವಿಗಳ ಪಟ್ಟಿ ಸಹಿತ ವಿವರ ನೀಡುವುದು)

## ಶಿರಾಡಿ ಘಾಟಿನಲ್ಲಿ ೨ ನೇ ಹಂತದ ಕಾಮಗಾರಿ ವಿಳಂಬಗೊಂಡಿರುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೦೦೧ (೧೧೮೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿರಾಡಿ ಘಾಟಿನಲ್ಲಿ ೨ ನೇ ಹಂತದ ಕಾಮಗಾರಿ ವಿಳಂಬಗೊಳ್ಳಲು ಕಾರಣವೇನು ; ಈ ಕಾಮಗಾರಿಗೆ ಟೆಂಡರ್ ಕರೆಯಲಾಗಿದ್ದು, ಯಾವಾಗ ; ಇದರಲ್ಲಿ ವಿಧಿಸಲಾಗಿದ್ದ ಷರತ್ತುಗಳಾವುವು ;

(ಆ) ಪ್ರಥಮ ಹಂತದ ಕಾಮಗಾರಿಯಲ್ಲಿ ಎಷ್ಟು ಅವಧಿಗೆ ರಸ್ತೆ ಸಂಪೂರ್ಣ ಬಂದ್ ಮಾಡಲಾಗಿತ್ತು ; ೨ ನೇ ಹಂತದ ಕಾಮಗಾರಿಗೆ ರಸ್ತೆ ಬಂದ್ ಮಾಡದೆ ಕಾಮಗಾರಿ ನಡೆಸಲು ಇಲಾಖೆ ಕ್ರಮ ಕೈಗೊಳ್ಳುವುದೇ ; ಈ ಬಗ್ಗೆ ಇಲಾಖೆ ಕೈಗೊಂಡಿರುವ ಕ್ರಮಗಳೇನು ;

(ಇ) ಶಿರಾಡಿ ಘಾಟ್ ಕಾಮಗಾರಿಯು ನಡೆಯುತ್ತಿರುವ ಸಂದರ್ಭದಲ್ಲಿ ಪರ್ಯಾಯ ಸಂಚಾರ ವ್ಯವಸ್ಥೆಯನ್ನು ಈ ಹಿಂದೆ ಕೈಗೊಂಡು ಸಂಪೂರ್ಣ ವಿಫಲಗೊಂಡ ಬಗ್ಗೆ ಇಲಾಖೆಯ ಗಮನಕ್ಕೆ ಬಂದಿದೆಯೇ ; (ವಿವರ ಒದಗಿಸುವುದು)

(ಈ) ಶಿರಾಡಿ ಘಾಟ್ ಸುರಂಗ ಮಾರ್ಗ ಎಂದು ಪ್ರಾರಂಭವಾಗುವುದು? (ವಿವರ ಒದಗಿಸುವುದು)

# ನೇರಸಾಲ NMDFC ಯೋಜನೆಗೆ ಹಣ ಬಿಡುಗಡೆ ಮಾಡಿದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೦೦೨ (೧೧೮೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೇರಸಾಲ NMDFC ಯೋಜನೆಗೆ ೨೦೧೩–೧೪ ರಿಂದ ೨೦೧೪–೧೫ರಲ್ಲಿ ಬಿಡುಗಡೆಯಾದ ಒಟ್ಟು ಹಣ ಎಷ್ಟು ; ಎಷ್ಟು ಫಲಾನುಭವಿಗಳಿಗೆ ವಿತರಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು) ಯಾವ ಯಾವ ಮಾನದಂಡದಲ್ಲಿ ಹಣವನ್ನು ಬಿಡುಗಡೆ ಮಾಡಲಾಗಿದೆ ; (ಸಂಪೂರ್ಣ ಪಟ್ಟಿಯೊಂದಿಗೆ ವಿವರ ನೀಡುವುದು)

(ಆ) ನೇರಸಾಲ ಮರುಪಾವತಿ ಮಾಡಲು ಇಲಾಖೆ ಕೈಗೊಂಡ ಕ್ರಮವೇನು ; ಯಾವ ಯಾವ ಜಿಲ್ಲೆಗಳಲ್ಲಿ ಮರುಪಾವತಿ ಬಾಕಿ ಇರುತ್ತದೆ ; (ವಿವರ ನೀಡುವುದು)

(ಇ) ನೇರ ಸಾಲ ಅನ್ವಯ ೨೦೧೩–೧೪ ಮತ್ತು ೨೦೧೪–೧೫ರ ವರ್ಷದಲ್ಲಿ ಕ್ರೈಸ್ತ ಅಲ್ಪಸಂಖ್ಯಾತರಿಗೆ, ಮುಸ್ಲಿಂ, ಜೈನರಿಗೆ ಎಷ್ಟು ಫಲಾನುಭವಿಗಳಿಗೆ ನೀಡಲಾಗಿದೆ ; (ವಿವರ ನೀಡುವುದು)

(ಈ) ಈ ಯೋಜನೆ ಅನ್ವಯ ಮರುಪಾವತಿಗೆ ಇಲಾಖೆ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಸೋಲಾರ್ ಸೌರಶಕ್ತಿ ಮೇಲ್ಛಾವಣಿ ಘಟಕಗಳನ್ನು ಅಳವಡಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೦೦೩ (೧೧೭೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸೋಲಾರ್ ಸೌರಶಕ್ತಿ ಮೇಲ್ಛಾವಣಿ ಘಟಕಗಳನ್ನು ಪ್ರೋತ್ಸಾಹಿಸಲು ಸಬ್ಸಿಡಿಯನ್ನು ಇಲಾಖೆಯಿಂದ ಫಲಾನುಭವಿಗಳಿಗೆ ಬಿಡುಗಡೆ ಮಾಡದೇ ಇರುವುದರ ಬಗ್ಗೆ ಇಂಧನ ಇಲಾಖೆ ಕೈಗೊಂಡ ಕ್ರಮಗಳೇನು ;

(ಆ) ಸೌರಶಕ್ತಿಯನ್ನು ಅಳವಡಿಸಲು ಬ್ಯಾಂಕಿನಿಂದ ಶೇ ೪% ಬಡ್ಡಿಯಲ್ಲಿ ಸಾಲವನ್ನು ನೀಡಲು ಕ್ರಮ ಕೈಗೊಂಡಲ್ಲಿ ಹೆಚ್ಚಿನ ಗ್ರಾಹಕರು ಸೌರಶಕ್ತಿ ಬಳಕೆ ಮಾಡಲು ಮುಂದೆ ಬರುವುದರ ಬಗ್ಗೆ ಇಲಾಖೆ ಕೈಗೊಂಡ ಕ್ರಮವೇನು ;

(ಇ) ದಕ್ಷಿಣ ಕನ್ನಡ ಜಿಲ್ಲೆಯನ್ನು ಸಂಪೂರ್ಣ ಸೋಲಾರ್ ಯುಕ್ತ ಜಿಲ್ಲೆಯನ್ನಾಗಿ ಮಾಡಲು ಯೋಜನೆ ಹಾಕಿಕೊಂಡಿರುವ ಇಲಾಖೆಯಿಂದ ದೊರೆಯುವ ಪ್ರೋತ್ಸಾಹ ಏನು ;

(ಈ) ಸೌರಶಕ್ತಿ ಬಳಕೆಯಿಂದ ರಾಜ್ಯದಲ್ಲಿ ಉತ್ಪಾದಿಸುವ ಒಟ್ಟು ಇಂಧನ ಎಷ್ಟು ; ೨೦೧೬-೧೭ರಲ್ಲಿ ಹಾಕಿಕೊಂಡಿರುವ ಗುರಿ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## 'ಪಶುಭಾಗ್ಯ' ಯೋಜನೆ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೦೦೪ (೧೧೮೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ "ಪಶುಭಾಗ್ಯ" ಯೋಜನೆಯಡಿ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಆ) ಆ ಪೈಕಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ವರ್ಗದ ಫಲಾನುಭವಿಗಳ ಸಂಖ್ಯೆ ಎಷ್ಟು ; (ವರ್ಷವಾರು, ಯೋಜನಾವಾರು ವಿವರ ನೀಡುವುದು)

(ಇ) ಈ ಯೋಜನೆಯ ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳೇನು ; ಈ ಯೋಜನೆ ಶೇಕಡಾವಾರು ಎಷ್ಟು ಯಶಸ್ವಿಯಾಗಿದೆ ; (ವಿವರ ನೀಡುವುದು)

(ಈ) ಈ ಯೋಜನೆಯಿಂದ ಎಷ್ಟು ಫಲಾನುಭವಿಗಳು ಮುಂದಿನ ಪ್ರಗತಿಯನ್ನು ಸಾಧಿಸಿದ್ದಾರೆ ; (ವಿವರ ನೀಡುವುದು)

(ಉ) ಪಶು ಭಾಗ್ಯ ಯೋಜನೆಗೆ ಕನಿಷ್ಠ ಎಷ್ಟು ಎಕರೆ ಸ್ಥಳವನ್ನು ನಿಗಧಿ ಪಡಿಸಲಾಗಿದೆ ; ಈ ಯೋಜನೆ ಮೂಲಕ ಪ್ರತಿ ಕುಟುಂಬಕ್ಕೆ ದೊರೆಯುವ ಆದಾಯ ಎಷ್ಟು ? (ವಿವರ ನೀಡುವುದು)

## ಕೃಷಿ ಉಳುಮೆ ಯಂತ್ರದ ಜೊತೆಗೆ ಉಳಿದ ಪರಿಕರಗಳನ್ನು ನೀಡದಿರುವ ಕುರಿತು

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೦೫ (೧೧೦೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೈತರಿಗೆ ಉಳುಮೆ ಯಂತ್ರವನ್ನು ಸಬ್ಸಿಡಿ ದರದಲ್ಲಿ ನೀಡುವಾಗ ಯಂತ್ರ ಅಥವಾ ಯಂತ್ರಕ್ಕೆ ಬೇಕಾದ ಸಾಮಗ್ರಿಗಳನ್ನು ನೀಡಲಾಗುತ್ತದೆಯೇ ;

(ಆ) ಕೆಲವು ರೈತ ಸಂಪರ್ಕ ಕೇಂದ್ರಗಳಲ್ಲಿ ಖಾಲಿ ಉಳುಮೆ ಯಂತ್ರದ ಇಂಜಿನ್‌ನನ್ನು ಹಸ್ತಾಂತರಿಸಿ ಅದಕ್ಕೆ ಬೇಕಾದ ಉಳಿದ ಪರಿಕರಗಳನ್ನು ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇದು ರೈತ ವಿರೋಧಿ ಎಂದು ಅನ್ನಿಸುವುದಿಲ್ಲವೇ?

## ತೆಂಗು ಬೆಳೆಗಾರರ ಸೊಸೈಟಿ ಮತ್ತು ಫೆಡರೇಷನ್ ಕುರಿತು

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೦೬ (೧೮೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ತೆಂಗು ಬೆಳೆಗಾರರ ಎಷ್ಟು ಸೊಸೈಟಿಗಳನ್ನು ನೋಂದಾಯಿಸಲಾಗಿದೆ ; (ಜಿಲ್ಲಾವಾರು ಪಟ್ಟಿ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ತೆಂಗು ಬೆಳೆಗಾರರ ಫೆಡರೇಷನ್‌ಗಳನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು ಪಟ್ಟಿ ನೀಡುವುದು)

(ಇ) ರಾಜ್ಯದಲ್ಲಿ ಎಷ್ಟು ತೆಂಗು ಬೆಳೆಗಾರರ ಕಂಪನಿಗಳನ್ನು cpcಗಳನ್ನು ನೋಂದಾಯಿಸಲಾಗಿದೆ ; (ಜಿಲ್ಲಾವಾರು ಪಟ್ಟಿ ನೀಡುವುದು)

(ಈ) ಈ ಸೊಸೈಟಿ, ಫೆಡರೇಷನ್ ಮತ್ತು ಬೆಳೆಗಾರರ ಕಂಪನಿಗಳಿಗೆ ಯಾವ ಪ್ರೋತ್ಸಾಹಕ ಕಾರ್ಯಕ್ರಮಗಳನ್ನು ಸರ್ಕಾರ ರೂಪಿಸಿದೆ? (ವಿವರ ನೀಡುವುದು)

## ಕೃಷಿ ಬೆಲೆ ಆಯೋಗದ ಕುರಿತು

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೦೭ (೧೧೦೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಕೃಷಿ ಬೆಲೆ ಆಯೋಗ ಇಲ್ಲಿಯವರೆಗೆ ಎಷ್ಟು ಸಭೆಗಳನ್ನು ನಡೆಸಿದೆ ಸದರಿ ಸಭೆಗಳಲ್ಲಿ ಯಾವ ಯಾವ ನಿರ್ಣಯಗಳನ್ನು ಕೈಗೊಳ್ಳಲಾಗಿದೆ ;

(ಆ) ಇತ್ತೀಚೆಗೆ ರಾಜ್ಯದಲ್ಲಿ ಕೃಷಿ ಬೆಲೆ ಆಯೋಗವು ಯಾವ ಯಾವ ರೈತರ ಉತ್ಪನ್ನಗಳಿಗೆ ಬೆಂಬಲ ಬೆಲೆಯನ್ನು ಘೋಷಿಸಿದೆ; ಎಷ್ಟು ಪ್ರಮಾಣದಲ್ಲಿ ಬೆಂಬಲ ಬೆಲೆ ಘೋಷಣೆಗೆ ಹಣವನ್ನು ವ್ಯಯಿಸಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ತೆಂಗು ಅಭಿವೃದ್ಧಿ ಮಂಡಳಿ ಅನುಷ್ಠಾನಗೊಳಿಸಿದ ಯೋಜನೆ ಕುರಿತು

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೦೮ (೧೯೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೆಂಗು ಬೆಳೆ ಅಭಿವೃದ್ಧಿಗಾಗಿ ಶಾಸನಬದ್ಧ ಸಂಸ್ಥೆಯಾದ ತೆಂಗು ಅಭಿವೃದ್ಧಿ ಮಂಡಳಿಯಲ್ಲಿ ರಾಜ್ಯ ಸರ್ಕಾರವನ್ನು ಯಾರು ಪ್ರತಿನಿಧಿಸುತ್ತಿದ್ದಾರೆ ;

(ಆ) ಕಳೆದ ಎರಡು ವರ್ಷಗಳಲ್ಲಿ ತೆಂಗು ಅಭಿವೃದ್ಧಿ ಮಂಡಳಿಯು ಎಷ್ಟು ಸಭೆಗಳು ನಡೆಸಿದೆ ;

(ಇ) ರಾಜ್ಯ ಸರ್ಕಾರದ ಪ್ರತಿನಿಧಿ ಎಷ್ಟು ಸಭೆಗಳಿಗೆ ಹಾಜರಾಗಿದ್ದಾರೆ;

(ಈ) ತೆಂಗು ಅಭಿವೃದ್ಧಿ ಮಂಡಳಿಯ ಯೋಜನೆಗಳಲ್ಲಿ ಎಷ್ಟು ಯೋಜನೆಗಳನ್ನು ರಾಜ್ಯದಲ್ಲಿ ಅನುಷ್ಠಾನಕ್ಕೆ ತರಲಾಗಿದೆ ;

(ಉ) ತೆಂಗು ಅಭಿವೃದ್ಧಿ ಮಂಡಳಿಯ ಒಟ್ಟು ಆರ್ಥಿಕ ಅನುದಾನದಲ್ಲಿ ಶೇಕಡಾ ಎಷ್ಟು ಅನುದಾನವನ್ನು ರಾಜ್ಯದ ತೆಂಗಿಗೆ ಒದಗಿಸಲಾಗಿದೆ?

## ನೀರಾ ತೆಗೆಯುವ ತಂತ್ರಜ್ಞಾನ ಬಳಕೆ ಕುರಿತು

**ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೦೯ (೧೧೬೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೆಂಗಿನ ಮರದಿಂದ ನೀರಾವನ್ನು ನೀರಾ (ಕಲ್ಪರಸ) ಆಗಿಯೇ ಇಟ್ಟುಕೊಳ್ಳುವ ಎಷ್ಟು ತಂತ್ರಜ್ಞಾನಗಳು ಇಂದು ಲಭ್ಯ ಇವೆ ;

(ಆ) ಈ ತಂತ್ರಜ್ಞಾನಗಳನ್ನು ಯಾವ ಸಂಸ್ಥೆಗಳು ಅಭಿವೃದ್ಧಿ ಪಡಿಸಿವೆ;

(ಇ) ಇತರೆ ಯಾವುದಾದರೂ ರಾಜ್ಯದಲ್ಲಿ ಈ ತಂತ್ರಜ್ಞಾನಗಳನ್ನು ಬಳಸುತ್ತಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ;

(ಈ) ಅಂತಹ ತಂತ್ರಜ್ಞಾನಗಳನ್ನು ರಾಜ್ಯದ ತೆಂಗು ಬೆಳೆಗಾರರಿಗೆ ತಲುಪಿಸುವ ಕ್ರಮಗಳನ್ನು ಕೈಗೊಳ್ಳಲಾಗಿದೆಯೇ; ಹಾಗಿದ್ದರೆ ಯಾವುವು? (ವಿವರ ನೀಡುವುದು)

## ಮೊಬೈಲ್ ಕಂಪನಿಗಳು ಅಳವಡಿಸುವ ಟವರ್‌ಗಳಿಗೆ ಕರ ನಿಗಧಿಪಡಿಸುವ ಕುರಿತು

**ಶ್ರೀ ಕೆ.ಸಿ ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೧೦ (೧೧೩೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ವಿವಿಧ ಸ್ಥಳೀಯ ಸಂಸ್ಥೆಗಳ (ಗ್ರಾಮೀಣಾಭಿವೃದ್ಧಿ ಇಲಾಖೆ ಬಿಟ್ಟು) ವ್ಯಾಪ್ತಿಯಲ್ಲಿ ಮೊಬೈಲ್ ಕಂಪನಿಗಳು

ಅಳವಡಿಸುವ ಟವರ್‌ಗಳಿಗಾಗಿ (ಗೋಪುರ) ಸ್ಥಳೀಯ ಸಂಸ್ಥೆಗಳು ಯಾವುದೇ ರೀತಿಯ ಕರ ನಿಗಧಿ ಮಾಡದೇ ಇರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿಗಳು ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ವಿವಿಧ ಕಂಪನಿಗಳು ನಗರ, ಪಟ್ಟಣ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅಳವಡಿಸಿರುವ ಜಿಲ್ಲಾವಾರು, ಸ್ಥಳೀಯ ಸಂಸ್ಥೆವಾರು ಮೊಬೈಲ್ ಗೋಪುರಗಳ ಸಂಖ್ಯೆ ವಿವರಗಳನ್ನು ಕೊಡುವುದು ;

(ಇ) ಮೊಬೈಲ್ ಕಂಪನಿಗಳು ಸ್ಥಳೀಯ ಸಂಸ್ಥೆಗಳಿಗೆ ಶುಲ್ಕ ಭರಿಸುವ ನಿಟ್ಟಿನಲ್ಲಿ ಸರ್ಕಾರ ಕಾನೂನಿಗೆ ತಿದ್ದುಪಡಿ ತರಲು ಚಿಂತನೆ ನಡೆಸಿದೆಯೇ ? (ಅದರ ಸಮಗ್ರ ವಿವರಗಳನ್ನು ಕೊಡುವುದು)

## ಕೃಷಿ ಉತ್ಪನ್ನ ಮಾರುಕಟ್ಟೆ ಇದರ ಸಮಗ್ರ ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೦೧೧ (೧೧೪೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಉತ್ಪನ್ನ ಮಾರುಕಟ್ಟೆಯ ಸಮಗ್ರ ಅಭಿವೃದ್ಧಿಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು;

(ಆ) ಕೃಷಿ ಉತ್ಪನ್ನ ಮಾರುಕಟ್ಟೆ ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನ ಮತ್ತು ಖರ್ಚಾದ ಅನುದಾನದ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಬಳಸಿಕೊಳ್ಳಲು ಅವಕಾಶವಿದೆ ; ಸುತ್ತೋಲೆ ಮಾರ್ಗಸೂಚಿಗಳಿದ್ದಲ್ಲಿ ಒದಗಿಸುವುದು ?

## ವಿಜಯಪುರ ಜಿಲ್ಲೆಯ ಕೂಡಗಿಯಲ್ಲಿ ಸ್ಥಾಪಿತವಾಗುತ್ತಿರುವ ರಾಷ್ಟ್ರೀಯ ಶಾಖೋತ್ಪನ್ನ ವಿದ್ಯುತ್ ನಿಗಮಕ್ಕೆ ಬೇಕಾಗಿರುವ ಜಮೀನಿನ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೦೧೨ (೧೧೪೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಜಿಲ್ಲೆಯ ಕೂಡಗಿಯಲ್ಲಿ ಸ್ಥಾಪಿತವಾಗುತ್ತಿರುವ (ರಾಷ್ಟ್ರೀಯ ಶಾಖೋತ್ಪನ್ನ ವಿದ್ಯುತ್ ನಿಗಮ) ವಿದ್ಯುಚ್ಛಕ್ತಿ ಕೇಂದ್ರದಿಂದ ಎಷ್ಟು ಮೆಗಾವ್ಯಾಟ್ ವಿದ್ಯುಚ್ಛಕ್ತಿ ಸಿಗಲಿದೆ ;

(ಆ) ಈ ಶಾಖೋತ್ಪನ್ನ ಕೇಂದ್ರದಲ್ಲಿ ಎಷ್ಟು ಘಟಕಗಳ ಮೂಲಕ ಮತ್ತು ಎಷ್ಟು ಹಂತಗಳಲ್ಲಿ ಹಾಗೂ ಯಾವಾಗ ವಿದ್ಯುತ್ತನ್ನು ಉತ್ಪಾದಿಸಲಾಗುತ್ತಿದೆ ;

(ಇ) ಈ ಶಾಖೋತ್ಪನ್ನ ಕೇಂದ್ರಕ್ಕೆ ಒಟ್ಟು ಎಷ್ಟು ಭೂಮಿಯ ಬೇಡಿಕೆ ಇದೆ ;

(ಈ) ಈ ಬೇಡಿಕೆಯಲ್ಲಿ ಎಷ್ಟು ಎಕರೆ ಭೂಮಿಯನ್ನು ರಾಷ್ಟ್ರೀಯ ಶಾಖೋತ್ಪನ್ನ ವಿದ್ಯುತ್ ನಿಗಮಕ್ಕೆ ಹಸ್ತಾಂತರಿಸಲಾಗಿದೆ ;

(ಉ) ರಾಷ್ಟ್ರೀಯ ಶಾಖೋತ್ಪನ್ನ ನಿಗಮವು ಸಕಾಲದಲ್ಲಿ ವಿದ್ಯುತ್ ಉತ್ಪಾದನೆ ಪ್ರಾರಂಭ ಮಾಡದಿರುವುದಕ್ಕೆ ಈ ನಿಗಮಕ್ಕೆ ಬೇಕಾಗಿರುವಷ್ಟು ಜಮೀನನ್ನು ಕೊಡಮಾಡಿಲ್ಲವೆಂದು ವರದಿಯಾಗಿದ್ದು ಇದರ ಬಗ್ಗೆ ಸರ್ಕಾರದ ಉತ್ತರವೇನು ?

## ರಾಜ್ಯದಲ್ಲಿ ಬೇಸಿಗೆ ಕಾಲದಲ್ಲಿರುವ ವಿದ್ಯುತ್ ಬೇಡಿಕೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೦೧೩ (೧೧೪೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬೇಸಿಗೆ ಕಾಲದಲ್ಲಿ ಎಷ್ಟು ಪ್ರತಿಶತ ಹೆಚ್ಚಿನ ವಿದ್ಯುತ್ತಿನ ಬೇಡಿಕೆ ಇರುತ್ತದೆ ;

(ಆ) ಈ ಬೇಡಿಕೆಯನ್ನು ನೀಗಿಸಲು ಸರ್ಕಾರ ಯಾವ ಮೂಲಗಳಿಂದ ವಿದ್ಯುತ್ತನ್ನು ಪಡೆಯುತ್ತಿದೆ ; (ವಿವರ ನೀಡುವುದು)

(ಇ) ರಾಜ್ಯದ ವಿದ್ಯುತ್ ಕೊರತೆ ನೀಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಸುಮಾರು ೩೧೯ ಮೆಗಾವ್ಯಾಟ್ ವಿದ್ಯುತ್ ನೀಡಲು ಮುಂದಾಗಿದ್ದರೂ ರಾಜ್ಯ ಸರ್ಕಾರವು ಅದನ್ನು ನಿರಾಕರಿಸಲು ಕಾರಣವೇನು ?

## ಕೃಷಿ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ವಿವಿಧ ಕಾರ್ಯಕ್ರಮಗಳಿಗೆ ಬಿಡುಡಗೆಯಾದ ಅನುದಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೦೧೪ (೧೧೪೭) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ವಿವಿಧ ಕಾರ್ಯಕ್ರಮಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಇಲಾಖೆಯ ಕಾರ್ಯಕ್ರಮಗಳಿಗೆ ನಿಗಧಿಪಡಿಸಿದ ಹಾಗೂ ಸರ್ಕಾರದಿಂದ ಬಿಡುಗಡೆಯಾದ ಮತ್ತು ಖರ್ಚಾದ ಅನುದಾನದ ವಿವರ ನೀಡುವುದು ; (ಯೋಜನೆವಾರು, ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಇ) ಬರಗಾಲ ಪೀಡಿತ ಪ್ರದೇಶಗಳಲ್ಲಿ ಮಣ್ಣಿನ ಸಂರಕ್ಷಣೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ? (ಸಂಪೂರ್ಣ ವಿವರ ನೀಡುವುದು)

## ಉತ್ತರ ಕರ್ನಾಟಕ ಭಾಗದ ದ್ರಾಕ್ಷಿ ಬೆಳೆಗಾರರಿಗೆ ಪರಿಹಾರ ನೀಡುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೧೫ (೧೧೫೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕರ್ನಾಟಕದ ಬೆಳಗಾವಿ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳ ದ್ರಾಕ್ಷಿ ಬೆಳೆಗಾರರಿಗೆ ದ್ರಾಕ್ಷಿ ಬೆಲೆಯಲ್ಲಿ ಕುಸಿತ ಉಂಟಾಗಿ ರೈತರು ಸಂಕಷ್ಟಕ್ಕೆ ಈಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ದ್ರಾಕ್ಷಿ ಬೆಳೆಗಾರರಿಗೆ ದಲ್ಲಾಳಿಗಳ ಹಾವಳಿ ತಪ್ಪಿಸಿ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸಲು ಸರ್ಕಾರವು ಯೋಚಿಸಿದೆಯೇ;

(ಇ) ವಿಜಯಪುರದ ಎ.ಪಿ.ಎಂ.ಸಿ ಯಲ್ಲಿ ತೋಟಗಾರಿಕಾ ಬೆಳೆಗಳ ಆನ್ ಲೈನ್ ಟ್ರೇಡಿಂಗ್ ಸೆಂಟರ್ ಕಾರ್ಯನಿರ್ವಹಿಸುತ್ತಿದೆಯೇ

ಈ ಸೆಂಟರ್‌ನಿಂದ ರೈತರಿಗೆ ಆಗುತ್ತಿರುವ ಉಪಯೋಗಗಳೇನು ಎಷ್ಟು ಜನ ರೈತರು ಈಗಾಗಲೇ ಇದರ ಪ್ರಯೋಜನ ಪಡೆದುಕೊಂಡಿರುತ್ತಾರೆ ;

(ಈ) ಈ ಭಾಗದಲ್ಲಿ ಅಕಾಲಿಕ ಮಳೆಯಿಂದಾಗಿ ದ್ರಾಕ್ಷಿ ಬೆಳೆಯು ಹಾನಿಗೊಳಪಟ್ಟು ಬೆಳೆದ ಬೆಳೆಗೆ ಯೋಗ್ಯ ಬೆಲೆ ಸಿಗದೆ ಆರ್ಥಿಕವಾಗಿ ನಷ್ಟ ಅನುಭವಿಸಿದಂತಹ ರೈತರನ್ನು ಗುರುತಿಸಿ ಪರಿಹಾರ ಧನ ವಿತರಿಸುವ ಕುರಿತು ಸರ್ಕಾರವು ಚಿಂತಿಸಿದೆಯೇ?

## ರಾಜ್ಯದಲ್ಲಿ ೨೦೧೩–೧೪ನೇ ಸಾಲಿನ ಕಬ್ಬು ಬೆಳೆಗಾರರಿಗೆ ಬಾಕಿ ಪಾವತಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೧೬ (೧೧೫೦) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೨೦೧೩–೧೪ನೇ ಸಾಲಿನಲ್ಲಿ ರೈತರು ಬೆಳೆದ ಕಬ್ಬಿಗೆ ಸರ್ಕಾರವು ರೂ. ೨೫೦೦/– ಬೆಲೆಯನ್ನು ನಿಗದಿ ಮಾಡಿದ ಮೇಲೆ ಎಷ್ಟು ಕಾರ್ಖಾನೆಗಳು ರೈತರಿಗೆ ಈ ದರದಲ್ಲಿ ಹಣ ಪಾವತಿ ಮಾಡಿರುತ್ತವೆ ; (ಕಾರ್ಖಾನೆವಾರು ವಿವರ ನೀಡುವುದು)

(ಆ) ಇನ್ನೂ ರೈತರ ಖಾತೆಗಳಿಗೆ ಪಾವತಿ ಮಾಡಬೇಕಾಗಿರುವ ಬಾಕಿ ಹಣವೆಷ್ಟು ; (ಕಾರ್ಖಾನೆವಾರು ವಿವರ ನೀಡುವುದು)

(ಇ) ರೈತರ ಬಾಕಿ ಹಣವನ್ನು ಕಾರ್ಖಾನೆಗಳಿಂದ ಯಾವ ಕಾಲ ಮಿತಿಯೊಳಗೆ ರೈತರ ಖಾತೆಗಳಿಗೆ ಜಮಾ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಕೃಷಿ ಭಾಗ್ಯ ಯೋಜನೆಯಡಿ ಡೀಸೆಲ್ ಪಂಪ್‌ಸೆಟ್ ನೀಡುವ ಕುರಿತು.

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೧೭ (೧೧೪೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೃಷಿ ಭಾಗ್ಯ ಯೋಜನೆಯಡಿ ರೈತರಿಗೆ ಉಚಿತವಾಗಿ ಡೀಸೆಲ್ ಪಂಪ್‌ಸೆಟ್‌ಗಳನ್ನು ನೀಡಲು ರಾಜ್ಯದ ಎಷ್ಟು ಜಿಲ್ಲೆಗಳನ್ನು ಮತ್ತು ಯಾವ ಯಾವ ತಾಲ್ಲೂಕುಗಳನ್ನು ಆಯ್ಕೆ ಮಾಡಲಾಗಿದೆ;

(ಆ) ರೈತರು ಸದರಿ ಸವಲತ್ತುಗಳನ್ನು ಪಡೆದುಕೊಳ್ಳಲು ಇರಬೇಕಾದ ಅರ್ಹತೆಗಳೇನು ಹಾಗೂ ರೈತ ಫಲಾನುಭವಿಗಳನ್ನು ಆಯ್ಕೆಮಾಡಲು ಸರ್ಕಾರ ರೂಪಿಸಿರುವ ಮಾನದಂಡಗಳೇನು;

(ಇ) ೨೦೧೫–೧೬ನೇ ಸಾಲಿನಲ್ಲಿ ಎಷ್ಟು ರೈತರಿಗೆ ಈ ಯೋಜನೆಯನ್ನು ಒದಗಿಸಲಾಗಿದೆ ? (ವಿವರ ನೀಡುವುದು)

## ಕೇಂದ್ರದಿಂದ ಬಂದ ಅನುದಾನ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೦೧೮ (೧೧೬೮) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ನೇ ಸಾಲಿನಲ್ಲಿ ರಾಜ್ಯದ ಆಯವ್ಯಯದಲ್ಲಿ ಕೃಷಿ ಅಭಿವೃದ್ಧಿಗೋಸ್ಕರ ಮೀಸಲಿರಿಸಿದ ಅನುದಾನವೆಷ್ಟು ; ಆ ಪೈಕಿ ಕೇಂದ್ರದ ಪಾಲೇಷ್ಟು ;

(ಆ) ಅನುಷ್ಠಾನಗೊಂಡ ಕಾರ್ಯಕ್ರಮಗಳು ಯಾವುವು ; (ಜಿಲ್ಲಾವಾರು/ ಯೋಜನೆವಾರು ಮಾಹಿತಿ ನೀಡುವುದು)

(ಇ) ಕೃಷಿಯ ಅಭಿವೃದ್ಧಿಗಾಗಿ ಯಾವ ನೂತನ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಲಾಗಿದೆ ; ಅಳವಡಿಸಿಕೊಂಡಿದ್ದಲ್ಲಿ, ನೂತನ ತಂತ್ರಜ್ಞಾನದ ಮಾಹಿತಿಯನ್ನು ನೀಡುವುದು ;

(ಈ) ಕೇಂದ್ರದ ಅನುದಾನದಲ್ಲಿ ಹಮ್ಮಿಕೊಳ್ಳಲಾಗಿರುವ ಯೋಜನೆಗಳಾವುವು?

## ಶಾದಿ ಭಾಗ್ಯ ಯೋಜನೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೦೧೯ (೧೧೬೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಾದಿಭಾಗ್ಯ ಯೋಜನೆಗೆ ಕಳೆದ ವರ್ಷ ಅನುದಾನ ಹಾಗೂ ವೆಚ್ಚವಾದ ಹಣ ಎಷ್ಟು ; (ವಿವರ ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿ ಈ ಯೋಜನೆಗೆ ಅರ್ಹಗೊಂಡವರ ಸಂಖ್ಯೆ ಎಷ್ಟು ; ಯಾವ ಯಾವ ಸಮುದಾಯದವರಿಗೆ ನೀಡಲಾಗಿವೆ ;

(ಇ) ನೀಡಿದ್ದಲ್ಲಿ, ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ರೈತರ ಕಬ್ಬಿನ ಬೆಳೆಗೆ ಹಣ ಬಿಡುಗಡೆ ಮಾಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೦೨೦ (೧೧೭೦) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರೈತರಿಗೆ ಸರ್ಕಾರ ಪ್ರತಿ ಟನ್ ಕಬ್ಬಿಗೆ ನಿಗಧಿಪಡಿಸಿರುವ ದರವೆಷ್ಟು ಹಾಗೂ ಕಾರ್ಖಾನೆಗಳು ನೀಡುತ್ತಿರುವ ದರವೆಷ್ಟು ; ಈ ವ್ಯತ್ಯಾಸವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಆ) ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟು ಸಕ್ಕರೆ ಕಾಖಾನೆಗಳು ಕಾರ್ಯಸ್ಥಗಿತಗೊಳಿಸಿವೆ; (ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಕಬ್ಬು ಬೆಳೆದ ರೈತರಿಗೆ ನಷ್ಟವಾಗುತ್ತಿರುವುದು ನಿಜವೇ ;

(ಈ) ಈ ಸಕ್ಕರೆ ಕಾರ್ಖಾನೆಗಳನ್ನು ಪುನರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ, ಹಾಗಿದ್ದಲ್ಲಿ, ಯಾವಾಗ ಪುನರಾರಂಭಿಸಲಾಗುವುದು;

(ಉ) ಕೇಂದ್ರ ಸರ್ಕಾರದಿಂದ ಬಂದಿರುವ ಅನುದಾನ ಎಷ್ಟು ?

## K.R.D.C.L ರಸ್ತೆಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ)(ನಾಮನಿರ್ದೇಶನ ಹೊಂದಿದವರು) :–**

೧೦೨೧ (೧೧೭೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ (ಕೆ.ಆರ್.ಡಿ.ಸಿ.ಎಲ್) ಕಳೆದ ೩ ವರ್ಷಗಳಲ್ಲಿ ನಿರ್ವಹಿಸಿದ ಕಾಮಗಾರಿಗಳು ಯಾವುವು ಮತ್ತು ಕಾಮಗಾರಿಗಳಿಗೆ ವೆಚ್ಚ ಮಾಡಲಾದ ಮೊತ್ತವೆಷ್ಟು ; (ವರ್ಷವಾರು, ಕಾಮಗಾರಿವಾರು ವಿವರ ನೀಡುವುದು)

(ಆ) ಕೇಂದ್ರ ಸರ್ಕಾರಕ್ಕೆ ಕಳುಹಿಸಲಾದ ಪ್ರಸ್ತಾವನೆಗಳು ಮಂಜೂರಾಗದಿರಲು ಕಾರಣವೇನು ; ತುಮಕೂರು ಜಿಲ್ಲೆಯಲ್ಲಿ ತೆಗೆದುಕೊಂಡಿರುವ ಕಾಮಗಾರಿಗಳು ಯಾವುವು ; ಎಲ್ಲಿ ಪ್ರಾರಂಭಿಸಲಾಗಿದೆ ?

## ತುಮಕೂರು ಜಿಲ್ಲೆ ನಿರಂತರ ಜ್ಯೋತಿ ಬಗ್ಗೆ

**ಶ್ರೀ ಎಂ.ಡಿ.ಲಕ್ಷ್ಮೀನಾರಾಯಣ (ಅಣ್ಣಯ್ಯ)(ನಾಮನಿರ್ದೇಶನ ಹೊಂದಿದವರು) :–**

೧೦೨೨ (೧೧೬೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳಲ್ಲಿ ನಿರಂತರ ಜ್ಯೋತಿ ಯೋಜನೆ ಎಂದಿನಿಂದ ಜಾರಿಗೆ ಬಂದಿದೆ ;

(ಆ) ತುಮಕೂರು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ನಿರಂತರ ಜ್ಯೋತಿ ಯೋಜನೆ ಅಡಿಯಲ್ಲಿ ಮಂಜೂರಾದ ಕಾಮಗಾರಿಗಳು ಎಷ್ಟು ; ಇದಕ್ಕೆ ಮಂಜೂರಾದ ಮೊತ್ತ ಎಷ್ಟು; (ಗ್ರಾಮಾವಾರು ವಿವರ ನೀಡುವುದು)

(ಇ) ಎಲ್ಲಾ ತಾಲ್ಲೂಕಿನಲ್ಲಿ ನಿರಂತರ ಜ್ಯೋತಿ ಯೋಜನೆಯಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಎಷ್ಟು; ಆ ಪೈಕಿ ಎಷ್ಟು

ಕಾಮಗಾರಿಗಳು ಪೂರ್ಣಗೊಂಡಿವೆ ಹಾಗೂ ಪೂರ್ಣಗೊಳ್ಳದೇ ವಿಳಂಬವಾಗಿರುವ ಕಾಮಗಾರಿಗಳು ಎಷ್ಟು ; (ಕಾರಣ ಸಹಿತ ವಿವರ ನೀಡುವುದು)

(ಈ) ಈ ಕಾಮಗಾರಿಗಳನ್ನು ಮುಕ್ತಾಯಗೊಳಿಸಲಾಗುವುದು ಯಾವಾಗ ?

## ರೈತರಿಗೆ ಸಹಕಾರಿ ಬ್ಯಾಂಕುಗಳಿಂದ ಸಾಲ ನೀಡುವ ಬಗ್ಗೆ

**ಶ್ರೀ ಸಿ.ಆರ್.ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೨೩ (೧೧೧೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಕಳೆದ ಮೂರು ವರ್ಷಗಳಿಂದ ಸಣ್ಣ ಹಾಗೂ ಮಧ್ಯಮ ರೈತರಿಗೆ ಸಹಕಾರಿ ಬ್ಯಾಂಕುಗಳಿಂದ ನೀಡಲಾಗಿರುವ ಸಾಲ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಮಾವು ಬೆಳೆಗಾರರು ನಷ್ಟದಲ್ಲಿರುವ ಬಗ್ಗೆ

**ಶ್ರೀ ಸಿ.ಆರ್.ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೨೪ (೧೧೧೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳಲ್ಲಿ ಎಷ್ಟು ಹೆಕ್ಟೇರ್‌ನಲ್ಲಿ ಮಾವು ಬೆಳೆಗಳನ್ನು ಬೆಳೆಯಲಾಗುತ್ತಿದೆ ;

(ಆ) ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಮಾವು ಸಂಸ್ಕರಣ ಘಟಕವನ್ನು ತೆರೆಯುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಇ) ಮಾವು ಬೆಳೆಗಾರರು ಕಳೆದ ಮೂರು ವರ್ಷಗಳಿಂದ ನಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಅಲ್ಪಸಂಖ್ಯಾತರ ನಿರುದ್ಯೋಗ ಸಮಸ್ಯೆ ಕುರಿತು

**ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೨೫ (೧೧೧೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಅಲ್ಪಸಂಖ್ಯಾತರು ನಿರುದ್ಯೋಗ ಸಮಸ್ಯೆಯಿಂದ ನರಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿನ ಅಲ್ಪಸಂಖ್ಯಾತರ ನಿರುದ್ಯೋಗ ಸಮಸ್ಯೆಯನ್ನು ನಿವಾರಿಸಿ ಅವರನ್ನು ಆರ್ಥಿಕವಾಗಿ ಸಶಕ್ತಗೊಳಿಸಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಅಲ್ಪಸಂಖ್ಯಾತ ಮಹಿಳೆಯರನ್ನು ಆರ್ಥಿಕವಾಗಿ ಸಶಕ್ತರನ್ನಾಗಿಸಲು ಸರ್ಕಾರವು ಕೈಗೊಳ್ಳುವ ಕ್ರಮಗಳೇನು ?

## ಗದಗನಲ್ಲಿ ಈರುಳ್ಳಿ ಸಂರಕ್ಷಣೆಗಾಗಿ ಶೈತ್ಯಾಗಾರವನ್ನು ಒದಗಿಸುವ ಬಗ್ಗೆ

**ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨೬ (೧೧೧೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿಯೇ ಅತಿ ಹೆಚ್ಚು ಈರುಳ್ಳಿ ಬೆಳೆಯುವ ಗದಗ್ ಜಿಲ್ಲೆಯಲ್ಲಿ ಬೆಲೆ ಕುಸಿತದಿಂದ ಬೆಳೆಗಾರರು ಹತಾಶರಾಗಿ ಆತ್ಮಹತ್ಯೆಗೆ ಪ್ರಯತ್ನಿಸುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಗದಗ್‌ನಲ್ಲಿ ಶೈತ್ಯಾಗಾರವನ್ನು ಒದಗಿಸುವ ಮೂಲಕ ಹೆಚ್ಚಿನ ಈರುಳ್ಳಿ ಬೆಳೆಯನ್ನು ಸಂರಕ್ಷಿಸಿಟ್ಟು ಉತ್ತಮ ಬೆಲೆ ಬಂದಾಗ ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗುವುದೇ ;

(ಇ) ಅದೇ ರೀತಿ, ಹುಬ್ಬಳ್ಳಿ–ಧಾರವಾಡ ನಗರಗಳಲ್ಲಿ ಶೈತ್ಯಾಗಾರಗಳನ್ನು ಸ್ಥಾಪಿಸುವ ಮೂಲಕ ತೋಟಗಾರಿಕೆ ಉತ್ಪನ್ನಗಳನ್ನು ಸಂರಕ್ಷಿಸಲು ಅವಕಾಶ ಕಲ್ಪಿಸಲಾಗುವುದೇ ?

## ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಪುಷ್ಪೋದ್ಯಮ ಅಭಿವೃದ್ಧಿ ಕುರಿತು

**ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨೭ (೧೧೧೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕರ್ನಾಟಕದ ಜಿಲ್ಲೆಗಳು ಪುಷ್ಪೋದ್ಯಮಕ್ಕೆ ಅಗತ್ಯವಾದ ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರೈತರಿಗೆ ಸಾಂಪ್ರಾದಾಯಿಕ ಕೃಷಿಯ ಜೊತೆಗೆ ಪುಷ್ಪೋದ್ಯಮದಲ್ಲಿ ತೊಡಗಲು ಅಗತ್ಯ ಶಿಕ್ಷಣ ಮತ್ತು ಮಾರುಕಟ್ಟೆ ಸೌಲಭ್ಯಗಳನ್ನು ಕಲ್ಪಿಸಲಾಗುವುದೇ ;

(ಇ) ಹಿಂದುಳಿದ ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ತೋಟಗಾರಿಕೆ ಉತ್ಪನ್ನಗಳನ್ನು ರಫ್ತು ಮಾಡುವಲ್ಲಿ ಸರ್ಕಾರವು ನೀಡುತ್ತಿರುವ ಪ್ರೋತ್ಸಾಹಗಳೇನು ?

## ಆತ್ಮಹತ್ಯೆಗೆ ಶರಣಾಗುತ್ತಿರುವ ರೈತರನ್ನು ಸಂಕಷ್ಟಗಳಿಂದ ಪಾರು ಮಾಡುವ ಬಗ್ಗೆ

**ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨೮ (೧೧೧೬) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇವಲ ಕೃಷಿಯನ್ನೇ ಅವಲಂಬಿಸಿರುವ ರಾಜ್ಯದಲ್ಲಿನ ರೈತರು ಬರಗಾಲ ಮತ್ತು ಬೆಲೆ ಕುಸಿತದಿಂದ ಕೃಷಿ ಸಾಲ ಪಾವತಿಸಲಾಗದೇ ಹತಾಶರಾಗಿ ಆತ್ಮಹತ್ಯೆಗೆ ಶರಣಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇಂತಹ ದುಸ್ಥಿತಿಗಳಲ್ಲಿ ಸರ್ಕಾರವು ರೈತರನ್ನು ಸಂಕಷ್ಟಗಳಿಂದ ಪಾರು ಮಾಡಲು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಪ್ರಾದೇಶಿಕ ಅಸಮತೋಲನದಿಂದಾಗಿ ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿರುವ ಉತ್ತರ ಕರ್ನಾಟಕದ ರೈತರ ಶ್ರೇಯೋಭಿವೃದ್ಧಿಗಾಗಿ ಸರ್ಕಾರವು ರೂಪಿಸಿರುವ ಯೋಜನೆಗಳಾವುವು ;

(ಈ) ಉತ್ತರ ಕರ್ನಾಟಕದಲ್ಲಿ ಹೆಚ್ಚಿನ ಆಹಾರ ಉತ್ಪಾದನ ಕೈಗಾರಿಕೆಗಳು ಮತ್ತು ಸಂಸ್ಕರಣಾ ಘಟಕಗಳನ್ನು ಸ್ಥಾಪಿಸುವ ಮೂಲಕ ಕೃಷಿಗೆ ಪೂರಕವಾದ ಕೈಗಾರಿಕೆಗಳ ಅಭಿವೃದ್ಧಿ ಸಾಧಿಸುವ ಮೂಲಕ ಅಸಮತೋಲನ ನಿವಾರಿಸಲು ತೀವ್ರ ಕ್ರಮಗಳನ್ನು ಕೈಗೊಳ್ಳಲಾಗುವುದೇ ?

## ಪಶು ಸಂಗೋಪನೆ ಮೂಲಭೂತ ಸೌಲಭ್ಯಗಳ ಬಗ್ಗೆ

**ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೨೯(೧೧೧೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶುಗಳ ಆರೋಗ್ಯ ಮತ್ತು ತಳಿ ಸಂವರ್ಧನೆಗಾಗಿ ಸರ್ಕಾರವು ಕೈಗೊಳ್ಳುವ ಕ್ರಮಗಳೇನು ;

(ಆ) ರಾಜ್ಯದಲ್ಲಿನ ಪಶು ವೈದ್ಯಕೀಯ ಆಸ್ಪತ್ರೆಗಳು, ಪಶು ವೈದ್ಯಕೀಯ ಚಿಕಿತ್ಸಾಲಯಗಳು, ಪ್ರಾಥಮಿಕ ಪಶು ವೈದ್ಯಕೀಯ ಕೇಂದ್ರಗಳು, ಕೃತಕ ಗರ್ಭಧಾರಣಾ ಕೇಂದ್ರಗಳು ಮತ್ತು ಸಂಚಾರಿ ಪಶು ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು ; (ಉತ್ತರ ಕರ್ನಾಟಕ ಮತ್ತು ದಕ್ಷಿಣ ಕರ್ನಾಟಕ ಜಿಲ್ಲಾವಾರು ಅಂಕಿ ಸಂಖ್ಯೆಗಳ ವಿವರಗಳನ್ನು ನೀಡುವುದು)

(ಇ) ಪಶುಸಂಗೋಪನೆಗೆ ಮೂಲಭೂತ ಸೌಲಭ್ಯಗಳು ಅಗತ್ಯವಾಗಿರುವ ಉತ್ತರ ಕರ್ನಾಟಕದ ಜಿಲ್ಲೆಗಳಿಗೆ ಹೆಚ್ಚಿನ ಪ್ರಾಧಾನ್ಯತೆ ನೀಡಲಾಗುವುದೇ ?

## ಕಲಬೆರಕೆ ಹಾಲು ಮಾರಾಟ ಮಾಡುತ್ತಿರುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೦೩೦ (೧೧೯೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭಾರತೀಯರು ಅಮೃತ ಎಂದೆ ಪರಿಗಣಿಸಿ ನಿತ್ಯ ಸೇವಿಸುತ್ತಿರುವ ಹಾಲು ಇದೀಗ ಕಲಬೆರಕೆಯಿಂದ ಕೂಡಿ ಮಾರಾಟವಾಗುತ್ತಿದ್ದು, ಇದರಿಂದ ಗ್ರಾಹಕರ ಆರೋಗ್ಯ ಕೆಡುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಮಾರಾಟವಾಗುತ್ತಿರುವ ಹಾಲಿನಲ್ಲಿ ಡಿಟರ್ಜೆಂಟ್, ಕಾಸ್ಟಿಕ್ ಸೋಡಾ, ಗ್ಲೂಕೋಸ್, ವೈಟ್‌ಪೇಂಟ್ ಮತ್ತು ರಿಫೈನ್ಡ್ ಆಯಿಲ್‌ಗಳನ್ನು ಬೆರೆಸಿ ಮಾರುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಶುದ್ಧ ಹಾಲು ಮಾರಾಟವಾಗುತ್ತಿದೆ ಎಂಬುದನ್ನು ಪರಿಶೀಲಿಸಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ ;

(ಈ) ಅದರಲ್ಲಿಯೂ ವಿಶೇಷವಾಗಿ ಕ್ಷೀರಭಾಗ್ಯ ಯೋಜನೆಯಲ್ಲಿ ಪೂರೈಸುತ್ತಿರುವ ಹಾಲಿನಲ್ಲಿ ಕಲಬೆರಕೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಲಬೆರಕೆ ತಡೆಯಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

## ಕೇಂದ್ರ ಸರ್ಕಾರ ಕಬ್ಬು ಬೆಳೆದ ರೈತರಿಗೆ ಅನುಕೂಲವಾಗುವ ದೃಷ್ಟಿಯಿಂದ ಸಕ್ಕರೆ ಕಾರ್ಖಾನೆಗಳಿಗೆ ಬ್ಯಾಂಕ್ ಮೂಲಕ ಸಹಾಯ ಮಾಡಿದ ವಿವರ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೦೩೧ (೧೨೦೦) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಬ್ಬು ಬೆಳೆದ ರೈತರು ತೊಂದರೆಯಲ್ಲಿ ಇರುವುದರಿಂದ ಸಕ್ಕರೆ ಕಾರ್ಖಾನೆಗಳಿಗೆ ಬ್ಯಾಂಕ್ ಮುಖಾಂತರ ಕೇಂದ್ರ ಸರ್ಕಾರ ಸಹಾಯ ಮಾಡಿದ್ದು ಕರ್ನಾಟಕ ರಾಜ್ಯದ ಯಾವ-ಯಾವ ಸಕ್ಕರೆ ಕಾರ್ಖಾನೆಗಳು ಇದರ ಲಾಭ ಪಡೆದಿವೆ ;

(ಆ) ಬ್ಯಾಂಕ್‌ಗಳಿಂದ ಲಾಭ ಪಡೆದ ಕಾರ್ಖಾನೆಗಳು ಯಾವುವು ; ಮೊತ್ತದ ವಿವರ ; (ಕಾರ್ಖಾನೆಗಳವಾರು ವಿವರ ಒದಗಿಸುವುದು)

(ಇ) ಕೇಂದ್ರ ಸರ್ಕಾರವೇ ಬಡ್ಡಿಯನ್ನು ಬ್ಯಾಂಕಿಗೆ ತುಂಬುತ್ತಿದ್ದು, ಕೇವಲ ಅಸಲು ಮಾತ್ರ ಕಾರ್ಖಾನೆಯವರು ಮರಳಿ ತುಂಬಬೇಕಾಗಿದ್ದು ಕಾರ್ಖಾನೆಯವರು ಏಕೆ ಬ್ಯಾಂಕಿನಿಂದ ಹಣ ತೆಗೆದುಕೊಳ್ಳಲು ಹಿಂಜರಿಯುತ್ತಿವೆ ?

## ತೋಟಗಾರಿಕೆ ಇಲಾಖೆಯಿಂದ ಬೆಳಗಾವಿ ಜಿಲ್ಲೆಯಲ್ಲಿ ಕಾರ್ಯಕ್ರಮ ಹಮ್ಮಿಕೊಂಡ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೦೩೨ (೧೨೦೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಯಿಂದ ಯಾವ ಯಾವ ಅಭಿವೃದ್ಧಿ ಕೆಲಸ ಕೈಗೊಳ್ಳಲಾಗಿದೆ ;

(ಆ) ರೈತರಿಗೆ ಯಾವ-ಯಾವ ರೀತಿಯಿಂದ ಸಹಾಯ ಮಾಡಲಾಗಿರುವುದು ;

(ಇ) ಯಾವ-ಯಾವ ತಾಲ್ಲೂಕುಗಳಲ್ಲಿ ತೋಟಗಾರಿಕೆ ಕಛೇರಿಗಳು ಇರುತ್ತವೆ ; ಅವು ರೈತರಿಗೆ ಸಹಾಯ ಮಾಡಿದ ವಿವರ ನೀಡುವುದು ;

(ಈ) ಮಹಾರಾಷ್ಟ್ರ ರಾಜ್ಯದಲ್ಲಿ ತೋಟಗಾರಿಕೆ ಇಲಾಖೆ ಅಭಿವೃದ್ಧಿ ಪಡಿಸಿದಂತೆ ಹಾಗೂ ರೈತರಿಗೆ ಸಹಾಯ ಮಾಡಿದಂತೆ ಕರ್ನಾಟಕ ರಾಜ್ಯದಲ್ಲಿಯೂ ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಉ) ತೋಟಗಾರಿಕೆ ಇಲಾಖೆ ಅಭಿವೃದ್ಧಿ ಪಡಿಸಲು ಕೇವಲ ಬೆಂಗಳೂರು, ಮೈಸೂರು ಸೀಮಿತವಾಗಿವೆಯೇ ;

(ಊ) ಉತ್ತರ ಕರ್ನಾಟಕದಲ್ಲಿ ಯಾವುದೇ ಅಭಿವೃದ್ಧಿ ಕೆಲಸ ನಡೆಯದ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಬೈಲಹೊಂಗಲ ನಗರಕ್ಕೆ ಕುಡಿಯುವ ನೀರಿನ ತೊಂದರೆ ತಪ್ಪಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೦೩೩ (೧೨೦೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆ, ಬೈಲಹೊಂಗಲ ನಗರಕ್ಕೆ ಮಲಪ್ರಭಾ ನದಿಯಿಂದ ನೀರು ಪೂರೈಕೆ ಆಗುತ್ತಿದ್ದು, ನದಿಯಲ್ಲಿ ನೀರು ಇಲ್ಲದೆ ಇರುವುದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಹಿನ್ನೆಲೆಯಲ್ಲಿ ಬೈಲಹೊಂಗಲ ನಗರದಲ್ಲಿ ಇಪ್ಪತ್ತೈದು ಕೊಳವೆ ಬಾವಿ ತೊಡಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಶಿವಮೊಗ್ಗ ಜಿಲ್ಲೆಯ ರಸ್ತೆ ಅಗಲೀಕರಣ ಕಾಮಗಾರಿ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩೪ (೧೧೪೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆಯ ವಿದ್ಯಾನಗರ ರಸ್ತೆ, ಸಹ್ಯಾದ್ರಿ ಕಾಲೇಜು, ಎಂ.ಆರ್.ಎಸ್ ಸರ್ಕಲ್‌ನಿಂದ ಹೊಳೆ ಸೇತುವೆವರೆಗೂ ರಸ್ತೆ ಅಗಲೀಕರಣ ಕಾಮಗಾರಿಯ ಟೆಂಡರ್ ಆಗಿದ್ದು ಯಾವಾಗ ;

(ಆ) ಈ ರಸ್ತೆಯ ಅಗಲೀಕರಣವನ್ನು ಎಷ್ಟು ಅಡಿಗೆ ನಿಗಧಿಪಡಿಸಲಾಗಿದೆ ; ಹಾಗೂ ಅಗಲೀಕರಣಕ್ಕೆ ಸಾರ್ವಜನಿಕರಿಂದ ಎಷ್ಟು ಮೌಲ್ಯದ ಆಸ್ತಿಯನ್ನು ವಶಪಡಿಸಿಕೊಳ್ಳಲಾಗಿದೆ, ಇದರ ಪರಿಹಾರಕ್ಕಾಗಿ ನೀಡಿದ ಮೊತ್ತವೆಷ್ಟು ; (ವಿವರ ನೀಡುವುದು)

(ಇ) ಸದರಿ ರಸ್ತೆಯಲ್ಲಿ ಹೆಚ್ಚಾದ ಸಂಚಾರದಟ್ಟಣೆಯಿರುವುದರಿಂದ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಯಾರು ಕಾರಣ ;

(ಈ) ಈ ರಸ್ತೆಯ ಕಾಮಗಾರಿಯ ವಿಳಂಬಕ್ಕೆ ಹಾಗೂ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು ಬೇಕಾಗಿರುವ ಕಾಲಾವಧಿ ಎಷ್ಟು ? (ವಿವರ ನೀಡುವುದು)

## ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಿರುವ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩೫ (೧೧೦೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಿ ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗಳನ್ನಾಗಿ ಘೋಷಿಸಿರುವುದು ನಿಜವೇ ; ಹೊಸದಾಗಿ ಘೋಷಿಸಿರುವ ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗಳಿಗೆ ಯಾವ ಕಾಲಮಿತಿಯಲ್ಲಿ ಚುನಾವಣೆ ನಡೆಸಲಾಗುವುದು ;

(ಆ) ಈ ಪಟ್ಟಣ ಪಂಚಾಯಿತಿ ಮತ್ತು ಪುರಸಭೆಗಳ ವಾರ್ಡ್ ವಿಂಗಡಣೆಗಳಲ್ಲಿ ಲೋಪದೋಷಗಳಾಗಿರುವ ಕಾರಣ ಸಾರ್ವಜನಿಕರು ಕೋರ್ಟ್ ಮೆಟ್ಟಲೇರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಂತಹ ಎಷ್ಟು ಪ್ರಕರಣಗಳು ನ್ಯಾಯಾಲಯದಲ್ಲಿ ಬಾಕಿ ಇವೆ ? (ಮಾಹಿತಿ ನೀಡುವುದು)

## ಕೃಷಿ ಇಲಾಖೆಯ ವಿವಿಧ ಯೋಜನೆಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩೬ (೧೧೦೬) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆಯಲ್ಲಿ ರಾಜ್ಯದ ರೈತರಿಗೆ ಅನುಕೂಲವಾಗಲು ವಿವಿಧ ಕಾರ್ಯಕ್ರಮಗಳು ಮತ್ತು ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ಕಾರ್ಯಕ್ರಮಗಳನ್ನು ಮತ್ತು ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಕಾರ್ಯಕ್ರಮಗಳಿಗೆ ಮತ್ತು ಯೋಜನೆಗಳಿಗೆ ಸರ್ಕಾರದಿಂದ ನಿಗಧಿಪಡಿಸಲಾದ ಅನುದಾನವೆಷ್ಟು ; (ಯೋಜನೆವಾರು, ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ವಿವಿಧ ಕಾರ್ಯಕ್ರಮಗಳ ಮತ್ತು ಯೋಜನೆಗಳ ಸದುಪಯೋಗ ಪಡೆದುಕೊಳ್ಳಲು ಇರುವ ಮಾನದಂಡಗಳೇನು ? (ಮಾಹಿತಿ ನೀಡುವುದು)

## ತೆಂಗು ಬೆಳೆಗಾರರ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩೭ (೧೧೦೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ತೆಂಗು ಬೆಳಗಾರರು ಸಂಕಷ್ಟಕ್ಕೆ ಸಿಲುಕಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಾಜ್ಯದ ತೆಂಗು ಬೆಳಗಾರರ ಸಮಸ್ಯೆ ಪರಿಹರಿಸಲು ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು ; ಈ ಅನುದಾನವನ್ನು ಹೇಗೆ ಬಳಸಿಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ತೆಂಗು ಬೆಳೆಯಲಾಗುತ್ತಿದೆ ; ತೆಂಗು ಬೆಳೆಗಾರರಿಗೆ ಯಾವ ರೀತಿಯಲ್ಲಿ ಸಹಾಯಧನ ನೀಡಲಾಗುತ್ತಿದೆ ; (ವಿವರ ನೀಡುವುದು)

(ಈ) ಕಳೆದ ಆಯವ್ಯಯದಲ್ಲಿ ನೀರಾ ಕಾಯ್ದೆಗೆ ತಿದ್ದುಪಡಿ ತರುವುದಾಗಿ ಭರವಸೆ ನೀಡಿದ್ದು, ಈ ವಿಚಾರವಾಗಿ ಕೈಗೊಂಡ ಕ್ರಮಗಳೇನು ?

## ರಾಜ್ಯ ಹೆದ್ದಾರಿ–೨೭ ಹಾಲಾಡಿ–ದಾಸನಕಟ್ಟೆ ಬಳಿ ಕುಸಿಯುವ ಭೀತಿ ಇರುವುದರ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೩೮ (೧೨೩೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿರಾಜ್‌ಪೇಟೆ–ಬೈಂದೂರು ರಾಜ್ಯ ಹೆದ್ದಾರಿ–೨೭ರ ಹಾಲಾಡಿ ಮತ್ತು ದಾಸನಕಟ್ಟೆ ಮಧ್ಯದಲ್ಲಿ ರಸ್ತೆಯು ಕುಸಿಯುವ ಭೀತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದನ್ನು ಸರಿಪಡಿಸಲು ಅಂದಾಜು ವೆಚ್ಚ–೫ ಕೋಟಿ ರೂಪಾಯಿ ತಗುಲಿದೆ ಎನ್ನುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ವಿರಾಜ್‌ಪೇಟೆ–ಬೈಂದೂರು ರಾಜ್ಯ ಹೆದ್ದಾರಿ–೨೭ ಹಾಲಾಡಿ ಮತ್ತು ದಾಸನಕಟ್ಟೆ ಬಳಿ ಹಾದು ಹೋಗುವಾಗ ಅದರ ಪಕ್ಕದಲ್ಲೇ ವರಾಹಿ ನೀರಾವರಿ ಕಾಲುವೆ ಹಾದುಹೋಗುತ್ತಿರುವುದರಿಂದ ಕುಸಿಯುವ ಭೀತಿಯಲ್ಲಿರುವ ರಸ್ತೆಗೆ ಅನಾವಶ್ಯಕ ವೆಚ್ಚವನ್ನು ತಪ್ಪಿಸಲು ಇಲಾಖೆ ಪರ್ಯಾಯ ಮಾರ್ಗವನ್ನು ಕಂಡುಕೊಳ್ಳುವುದೇ ; ಇಲ್ಲವಾದಲ್ಲಿ, ಮುಂದಾಗುವ ಅನಾಹುತಕ್ಕೆ ಪರಿಹಾರವೇನು ?

## ಪಶುಸಂಗೋಪನೆ ಇಲಾಖೆಯ ಗೋಮಾಳಗಳ ರಕ್ಷಣೆ ಮತ್ತು ಸದ್ಬಳಕೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೯ (೧೨೩೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಗೋಮಾಳದ ವಿಸ್ತೀರ್ಣ ಎಷ್ಟು ; (ತಾಲ್ಲೂಕುವಾರು ಮತ್ತು ಎಕರೆವಾರು ವಿವರ ಒದಗಿಸುವುದು)

(ಆ) ಗೋಮಾಳಗಳ ಅತಿಕ್ರಮಣ ಮತ್ತು ಗೋಮಾಳಗಳ ರದ್ಧತಿ ಪ್ರಕರಣಗಳು ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಪಶುಸಂಗೋಪನೆ ಇಲಾಖೆಯಿಂದ ಗೋವಮಾಳದ ಪೂರ್ಣಮಾಹಿತಿ ಲಭ್ಯವಿಲ್ಲದೇ ಇರುವುದು ಮತ್ತು ಆ ಸ್ಥಳಗಳ ರಕ್ಷಣೆ ಹಾಗೂ ಉಪಯೋಗ ಪಡೆಯುವಲ್ಲಿ ಇಲಾಖೆಯು ವೈಫಲ್ಯವಾಗಿರುವುದನ್ನು ಸರಿಪಡಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದೇ ?

## ಕೃಷಿ ಉತ್ಪಾದನಾ ಮಾಹಿತಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೦ (೧೨೩೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಜಿಲ್ಲೆಯಲ್ಲಿ ಕೃಷಿ ಭೂಮಿಯು ಇತರ ಉದ್ದೇಶಗಳಿಗೆ ಭೂ ಪರಿವರ್ತನೆ ಹೊಂದಿರುವುದಲ್ಲದೆ ಕೃಷಿ ನಷ್ಟದಾಯಕವೆಂಬ ಹಿನ್ನಲೆಯಲ್ಲಿ ಕೃಷಿ ಆವರಿಸಿದ ವಿಸ್ತೀರ್ಣ ಗಣನೀಯ ಪ್ರಮಾಣದಲ್ಲಿ ಕಡಿಮೆಯಾಗುತ್ತಿದ್ದರೂ ಕೂಡ ಇಲಾಖಾ ಅಂಕಿ ಅಂಶಗಳು ಸಿಬ್ಬಂದಿಗಳ ತೀವ್ರ ಕೊರತೆಯಿಂದ ದೋಷಪೂರಿತ ಅಂಕಿ ಅಂಶಗಳ ಮಾಹಿತಿಯನ್ನು ಇಲಾಖೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕರಾವಳಿ ಜಿಲ್ಲೆಯಲ್ಲಿ ವಿಸ್ತೀರ್ಣದ ಮಾಹಿತಿಯನ್ನು ಯಾವ ಯಾವ ಇಲಾಖೆಗಳ ಸಹಯೋಗದಲ್ಲಿ ಸಂಗ್ರಹಿಸಲ್ಪಡುತ್ತಿದೆ ;

(ಇ) ಕೃಷಿ ಆವರಿತ ವಿಸ್ತೀರ್ಣದ ತಪ್ಪು ಮಾಹಿತಿಯಿಂದ ಬೆಳೆ ಉತ್ಪಾದನಾ ಮಾಹಿತಿ ಸರ್ಕಾರದ ಕಾರ್ಯಕ್ರಮಗಳ ಮೇಲೆ ಪರಿಣಾಮ ಬೀರುತ್ತಿರುವುದೆ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಕೃಷಿ ಯಾಂತ್ರಿಕರಣದ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೧ (೧೨೩೪) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಜಿಲ್ಲೆಗಳಲ್ಲಿ ವಿವಿಧ ಬೆಳೆ ಉತ್ಪಾದನೆಗೆ ಯಾಂತ್ರಿಕ ಪದ್ಧತಿಯಲ್ಲಿ ಬೆಳೆ ಬೆಳಸಲಾದ ಬೆಳೆ ವಿಸ್ತೀರ್ಣ ಹಾಗೂ ಮಾನವ ಸಂಪನ್ಮೂಲದ ಮುಖೇನ ಬೆಳೆ ಬೆಳಸಲಾದ ವಿಸ್ತೀರ್ಣ ಎಷ್ಟು ; (ಕಳೆದ ೩ ವರ್ಷಗಳ ತಾಲ್ಲೂಕುವಾರು, ಬೆಳೆವಾರು ವಿವರ ಒದಗಿಸುವುದು)

(ಆ) ಯಾಂತ್ರಿಕ ಕೃಷಿ ಪದ್ಧತಿ ಹಾಗೂ ಮಾನವ ಸಂಪನ್ಮೂಲದ ಮುಖೇನ ಬೆಳೆಸಲಾದ ಬೆಳೆಯ ಇಳುವರಿಯಲ್ಲಿ ಕಂಡುಕೊಂಡ ವ್ಯತ್ಯಾಸವೆಷ್ಟು ;

(ಇ) ಯಾಂತ್ರಿಕ ಉಪಕರಣಗಳನ್ನು ಬೇಡಿಕೆಯಿರುವ ಎಲ್ಲಾ ರೈತರಿಗೆ ಪೂರೈಸಲು ಇಲಾಖೆ ಕೈಗೊಂಡ ಕ್ರಮವೇನು ;

(ಈ) ಕರಾವಳಿ ಜಿಲ್ಲೆಗಳಲ್ಲಿ ಕೃಷಿ ಆದಾಯ ಗಣನೀಯವಾಗಿ ಕಡಿಮೆಯಾಗಿ ಭೂಮಿ ಬೀಳು ಬಿಡುವುದನ್ನು ತಪ್ಪಿಸಲು, ರೈತ ಸಹಕಾರಿ ಸಂಘಗಳ ಮೂಲಕ ಬೆಳೆ ಬೆಳೆಯಲು ಉತ್ತೇಜನ ನೀಡುವ ಯೋಜನೆ ಇಲಾಖೆಯ ಗಮನದಲ್ಲಿದೆಯೇ ;

(ಉ) ಇಂತಹ ಸಹಕಾರಿ ಸಂಘಗಳು ಕಾರ್ಯೋನ್ಮುಕವಾದಲ್ಲಿ ಇಲಾಖೆಯಿಂದ ಯಾವ ವಿಶೇಷ ಯೋಜನೆ ನೀಡಲಾಗುವುದು ಹಾಗೂ ಪ್ರತಿ ಸಂಘಕ್ಕೆ ಬೀಜ ಧನ ನೀಡುವ ಯೋಜನೆ ಇಲಾಖೆಯ ಮುಂದಿದೆಯೇ ;

(ಊ) ಕರಾವಳಿ ರೈತರು Corporate forming ಕಡೆ ಗಮನಹರಿಸುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ?

## ಕೆ.ಎಂ.ಎಫ್‌ನಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೪೨ (೧೧೨೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೨ ರಿಂದ ೨೦೧೬ನೇ ಸಾಲಿನವರೆಗೆ ಕರ್ನಾಟಕ ಹಾಲು ಮಹಾಮಂಡಲ (ಕೆ.ಎಂ.ಎಫ್) ದಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವ್ಯಾವ ವಿಭಾಗಗಳಲ್ಲಿ ಅವ್ಯವಹಾರಗಳು ನಡೆದಿವೆ ; (ಸಂಪೂರ್ಣ ವಿವರ ನೀಡುವುದು)

(ಆ) ಈ ಅವ್ಯವಹಾರಗಳಲ್ಲಿ ಭಾಗಿಯಾದ ಅಧಿಕಾರಿ/ನೌಕರರ ವಿವರವನ್ನು ಅವರ ಪದನಾಮದೊಂದಿಗೆ ನೀಡುವುದು ; ಇಂತಹ ಅಧಿಕಾರಿಗಳ ವಿರುದ್ಧ ಈವರೆಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಪಶು ಆಹಾರದ ಕಚ್ಚಾವಸ್ತು ಖರೀದಿ ಮಾಡುವಾಗ ಅನುಸರಿಸುವ ಮಾನದಂಡಗಳೇನು ? (ವಿವರ ಒದಗಿಸುವುದು)

## ಪೌರಾಡಳಿತ ಇಲಾಖೆಯಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಬಗ್ಗೆ

**ಶ್ರೀ ರಘನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೪೩ (೧೧೨೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪೌರಾಡಳಿತ ಇಲಾಖೆಯು ಪೌರಾಯುಕ್ತರು ಹಾಗೂ ಮುಖ್ಯಾಧಿಕಾರಿಗಳು ವೃಂದದಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಬೇರೆ ಇಲಾಖೆಯ ಅಧಿಕಾರಿಗಳೆಷ್ಟು ; ಎಷ್ಟು ಅವಧಿಯಿಂದ ಕಾರ್ಯನಿರ್ವಹಿಸುತ್ತಿದ್ದಾರೆ ; (ಸಂಪೂರ್ಣ ವಿವರ ಒದಗಿಸುವುದು)

(ಆ) ೫ ವರ್ಷಗಳಿಗೂ ಮೀರಿ ನಿಯೋಜನೆ ಮೇಲೆ ಮುಂದುವರೆದ ಅಧಿಕಾರಿಗಳೆಷ್ಟು ; (ವಿವರ ಒದಗಿಸುವುದು)

(ಇ) ೫ ವರ್ಷಗಳಿಗೂ ಮೀರಿ ನಿಯೋಜನೆ ಮೇಲೆ ಮುದುವರೆಸಲು ನಿಯಮಗಳಲ್ಲಿ ಅವಕಾಶ ಇದೆಯೇ ; ಇಲ್ಲದಿದ್ದಲ್ಲಿ, ೫ ವರ್ಷಗಳಿಗೂ ಮೀರಿ ಮುಂದುವರೆಸಲು ಕಾರಣಗಳೇನು ;

(ಈ) ಪೌರಾಯುಕ್ತರು ಮತ್ತು ಮುಖ್ಯಾಧಿಕಾರಿಗಳಾ ವೃಂದದ ಹುದ್ದೆಗಳಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಪೈಕಿ ಎಷ್ಟು ಅಧಿಕಾರಿಗಳ ವಿರುದ್ಧ ನಗರಾಭಿವೃದ್ಧಿ ಇಲಾಖೆಯಿಂದ ಇಲಾಖಾ ವಿಚಾರಣೆ ಆರಂಭಿಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯಲ್ಲಿ ಎಸ್‌ಸಿ/ಎಸ್‌ಟಿ ಜನಾಂಗಕ್ಕೆ ಮೀಸಲಿರಿಸಿದ ಅನುದಾನವೆಷ್ಟು

**ಶ್ರೀ ರಘನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೪೪ (೧೧೨೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ಇಲಾಖೆಗೆ ೨೦೧೩–೨೦೧೪ ರಿಂದ ೨೦೧೫–೧೬ನೇ ಸಾಲಿನ ಮಾಹೆಯ ಅಂತ್ಯದವರೆಗೆ ಆಯವ್ಯಯದಲ್ಲಿ ಮೀಸಲಿರಿಸಿದ ಅನುದಾನ ಮತ್ತು ಖರ್ಚಾದ ಅನುದಾನವೆಷ್ಟು; (ಮಾಹಿತಿ ನೀಡುವುದು)

(ಆ) ತೋಟಗಾರಿಕೆ ಇಲಾಖೆಯಲ್ಲಿ ೨೦೧೩–೨೦೧೪ ರಿಂದ ೨೦೧೫–೧೬ನೇ ಸಾಲಿನ ಅಂತ್ಯದವರೆಗೆ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಗಳ ಉಪಯೋಜನೆಯಡಿ ಆಯವ್ಯಯದಲ್ಲಿ ಮೀಸಲಿರಿಸಿದ ಅನುದಾನ ಮತ್ತು ಖರ್ಚಾದ ಅನುದಾನವೆಷ್ಟು ; (ವಾರ್ಷಿಕವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಪ್ರಸ್ತುತ ಇರುವ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕೆ ಬೆಳೆ ಇದೆ ; ೨೦೧೫-೧೬ನೇ ಸಾಲಿನಲ್ಲಿ ಅತಿವೃಷ್ಟಿಯಿಂದ ಹಾಗೂ ಮುಂಗಾರು ಅಭಾವದಿಂದ ಎಷ್ಟು ತೋಟಗಾರಿಕಾ ಬೆಳೆ ಹಾನಿಯಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಹಾನಿಯಾದ ತೋಟಗಾರಿಕಾ ಬೆಳೆಗಳಿಗೆ ಪ್ರತಿ ಹೆಕ್ಟೇರ್/ಎಕರೆ ಪ್ರದೇಶಕ್ಕೆ ನೀಡುವ ಪರಿಹಾರ ಧನವೆಷ್ಟು ; ೨೦೧೫-೧೬ನೇ ಸಾಲಿನಲ್ಲಿ ಮಾರ್ಚ್ ಅಂತ್ಯದವರೆಗೆ ಪರಿಹಾರ ನೀಡಿರುವ ಮೊತ್ತ ಹಾಗೂ ಫಲಾನುಭವಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ತೋಟಗಾರಿಕೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೦೪೫ (೧೧೨೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ತೋಟಗಾರಿಕಾ ಇಲಾಖೆಯಲ್ಲಿ ಶೇಕಡಾ ೮೦ ಕ್ಕೂ ಹೆಚ್ಚು ಹುದ್ದೆಗಳು ಖಾಲಿ ಇರುವುದರಿಂದ ಗ್ರಾಮೀಣ ಪ್ರದೇಶದ ತೋಟಗಾರಿಕೆ ಬೆಳೆಗಾರರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ಯಾವ ಯಾವ ವೃಂದದಲ್ಲಿ ಏಷ್ಟೆಷ್ಟು ಹುದ್ದೆಗಳು ಖಾಲಿ ಇವೆ? (ವೃಂದವಾರು ವಿವರ ನೀಡುವುದು)

## ನಿವೇಶನ ಹಂಚಿಕೆ ಮಾಡದಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೪೬ (೧೧೨೩) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ (ರಿ), ಎಂ.ಸಿ. ಲೇಔಟ್, ವಿಜಯನಗರ, ಬೆಂಗಳೂರು, ಇವರು ಸರ್ಕಾರಿ ನೌಕರರಿಗೆ ನಿವೇಶನಗಳನ್ನು ಹಂಚಲು ಎಷ್ಟು ಅರ್ಜಿಗಳನ್ನು ಯಾವಾಗ ಸ್ವೀಕರಿಸಿದ್ದಾರೆ ;

(ಆ) ಈ ಸಂಘದವರು ಎಷ್ಟು ಜನರಿಂದ ನಿವೇಶನದ ಪೂರ್ಣ ಹಣವನ್ನು ಮುಂಗಡವಾಗಿ ಪಡೆದಿದ್ದಾರೆ ; ಅದರ ಒಟ್ಟು ಮೊತ್ತ ಎಷ್ಟು ; ಈ ಪೈಕಿ ಬಡಾವಣೆ ನಿರ್ಮಾಣಕ್ಕೆ ವೆಚ್ಚ ಮಾಡಿರುವ ಹಣ ಎಷ್ಟು ; ಎಲ್ಲಿ ಬಡಾವಣೆ ನಿರ್ಮಿಸಿದ್ದಾರೆ ;

(ಇ) ಈವರೆಗೆ ಎಷ್ಟು ಜನರಿಗೆ ಯಾವಾಗ ನಿವೇಶನ ಹಂಚಿಕೆ ಮಾಡಲಾಗಿದೆ ; ಎಷ್ಟು ಜನರಿಗೆ ನಿವೇಶನ ಹಂಚಲು ಬಾಕಿ ಇದೆ ; ಇವರಿಗೆ ನಿವೇಶನ ಹಂಚದೇ ಇರಲು ಕಾರಣವೇನು ;

(ಈ) ನಿವೇಶನಕ್ಕಾಗಿ ಪೂರ್ಣ ಪ್ರಮಾಣದಲ್ಲಿ ಹಣ ಪಾವತಿಸಿಕೊಂಡು ವರ್ಷಗಳೇ ಕಳೆದರು ನಿವೇಶನ ಹಂಚಿಕೆ ಮಾಡದ ಸದರಿ ಸಹಕಾರ ಸಂಘದ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ ನಿವೇಶನ ಹಂಚಿಕೆಗಾಗಿ ಹಣವನ್ನು ಪಾವತಿಸಿರುವ ಅರ್ಜಿದಾರರಿಗೆ ನಿವೇಶನ ದೊರಕಿಸಿಕೊಡಲು ಸರ್ಕಾರ ಯಾವ ಕ್ರಮಕೈಗೊಂಡಿದೆ ?

## ರಾಮನಗರ – ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಹಾಲು ಉತ್ಪಾದನೆ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೭ (೧೧೨೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲೆಗಳಲ್ಲಿ ಉತ್ಪಾದನೆಯಾಗುತ್ತಿರುವ ಹಾಲಿನ ಪ್ರಮಾಣ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಒಟ್ಟು ಹಾಲು ಉತ್ಪಾದಕರ ಸಹಕಾರ ಸಂಘಗಳ ಸಂಖ್ಯೆ ಎಷ್ಟು ;

(ಇ) ಅವುಗಳಿಂದ ಉತ್ಪಾದನೆಯಾಗುತ್ತಿರುವ ಹಾಲಿನ ಪ್ರಮಾಣ ಎಷ್ಟು ; (ವಿವರ ನೀಡುವುದು) ಹಾಲು ಮಾರುಕಟ್ಟೆ ಮಾಡಿ ಉಳಿದ ಹಾಲಿನ ಪ್ರಮಾಣ ಎಷ್ಟು ; ಈ ಪ್ರದೇಶದಲ್ಲಿ ಮೆಗಾ ಡೈರಿ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಪ್ರೊ. ಬಸವರಾಜ ಸಮಿತಿಯ ವರದಿ ಕುರಿತು

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೮ (೧೧೨೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟಾರೆ ರೇಷ್ಮೆ ಉದ್ಯಮದ ಸಾಧಕ–ಬಾಧಕಗಳ ಬಗ್ಗೆ ಪರಿಶೀಲಿಸಿ ವರದಿ ನೀಡಲು ನಿಯೋಜಿಸಿರುವ ಪ್ರೊ. ಬಸವರಾಜ ಸಮಿತಿ ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ; ಸಲ್ಲಿಸಿದ್ದಲ್ಲಿ, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಒಟ್ಟು ರೇಷ್ಮೆ ಗೂಡುಗಳ ಮಾರುಕಟ್ಟೆಗಳೆಷ್ಟು ; (ವಿವರ ನೀಡುವುದು) ಹಾಗೂ ಅವುಗಳು ನಡೆಸುತ್ತಿರುವ ವ್ಯವಹಾರ ವಹಿವಾಟುಗಳೆಷ್ಟು ; (ವಿವರ ನೀಡುವುದು) ಜೊತೆಗೆ ಈ ಹರಾಜು ಪದ್ಧತಿಯನ್ನು ಅಳವಡಿಸಿರುವ ಮಾರುಕಟ್ಟೆಗಳ ವಿವರ ನೀಡುವುದು ; ಅದರಲ್ಲಿ ಕಂಡು ಬಂದಿರುವ ಲೋಪಗಳ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು, ಶಿವನಹಳ್ಳಿ ಸಮೀಪ ಡೈರಿ ಸಂಕೀರ್ಣ ಸ್ಥಾಪಿಸುವ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೪೯ (೧೧೨೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಬೆಂಗಳೂರು ಸಹಕಾರ ಒಕ್ಕೂಟದವರು ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು, ಶಿವನಹಳ್ಳಿ ಸಮೀಪ ಡೈರಿ ಸಂಕೀರ್ಣ (ಹಾಲು ಪ್ಯಾಕಿಂಗ್, ಹಾಲಿನ ಉತ್ಪನ್ನಗಳ ಘಟಕ) ಸ್ಥಾಪಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ; ಸಲ್ಲಿಸಿದ್ದಲ್ಲಿ, ಈ ಘಟಕವನ್ನು ಆರಂಭಿಸಲಾಗುವುದು ಯಾವಾಗ ; ಇದಕ್ಕೆ ಸರ್ಕಾರ ಒಪ್ಪಿಗೆ ನೀಡಿದೆಯೇ ?

## ರಾಮನಗರ – ಬೆಂಗಳೂರು ಗ್ರಾಮಾಂತರ ಜಿಲ್ಲೆ ಸಹಕಾರಿ ಕೇಂದ್ರ ಬ್ಯಾಂಕ್‌ಗಳಲ್ಲಿನ ಅಕ್ರಮ ಬಗ್ಗೆ

**ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫೦ (೧೧೨೮) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲೆಗಳ ಸಹಕಾರಿ ಕೇಂದ್ರ ಬ್ಯಾಂಕ್‌ಗಳಲ್ಲಿ ಇಲ್ಲಿಯವರೆಗೂ ನಡೆದಿರುವ ಅಕ್ರಮಗಳ ಬಗ್ಗೆ ಸಿ.ಬಿ.ಐ ಸಂಸ್ಥೆಯಿಂದ ದಾಖಲಾಗಿರುವ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಪ್ರಸ್ತುತ ಪ್ರಕರಣಗಳು ಯಾವ ಹಂತದಲ್ಲಿವೆ ; ಹೊಸದಾಗಿ ಸದರಿ ಬ್ಯಾಂಕ್‌ನಿಂದ ಸಿ.ಬಿ.ಐ ತನಿಖೆ ನಡೆಸುವಂತೆ ಯಾವುದಾದರೂ ಪ್ರಕರಣಗಳೂ ಬಂದಿವೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಸಹಕಾರ ಬ್ಯಾಂಕುಗಳಲ್ಲಿ ಹಣದ ದುರುಪಯೋಗದ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೫೧ (೧೧೬೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳ ಮೂಲಕ ವ್ಯವಸಾಯ ಸಾಲ ಪಡೆದ ಕೃಷಿ ಪತ್ತಿನ ಸಹಕಾರ ಸಂಘಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ಹೆಚ್ಚಿನ ಹಣ ದುರುಪಯೋಗದ ಪ್ರಕರಣಗಳಲ್ಲಿ ಭಾಗಿಯಾಗಿರುತ್ತಿರುವುದು, ಹಣಕಾಸು ಬ್ಯಾಂಕಿನಿಂದ ನಿಯಂತ್ರಣ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು;

(ಆ) ಕಾಮನ್ ಕೇಡರ್ ಅಥಾರಿಟಿಯನ್ನು ಪುನಃ ಜಾರಿಗೆ ತರಲು ಸರ್ಕಾರದ ಹಂತದಲ್ಲಿ ಯೋಜನೆ ಇದೆಯೇ ; ಇದ್ದಲ್ಲಿ, ಕೈಗೊಂಡ ಕ್ರಮಗಳೇನು;

(ಇ) ರಾಜ್ಯ ಸರ್ಕಾರವು ರೈತಾಪಿ ಜನರ ಅನುಕೂಲಕ್ಕಾಗಿ ಶೂನ್ಯ ಬಡ್ಡಿದರದಲ್ಲಿ ಜಾರಿಗೊಳಿಸಲಾಗಿರುವ ಅನೇಕ ಯೋಜನೆಗಳನ್ನು ಜಿಲ್ಲಾ ಕೇಂದ್ರ ಬ್ಯಾಂಕ್‍ಗಳ ಮುಖಾಂತರ ಜಾರಿಗೊಳಿಸಲಾಗುತ್ತಿದೆಯೇ ; ಜಿಲ್ಲಾ ಬ್ಯಾಂಕ್‍ಗಳಿಗೆ ಈ ಯೋಜನೆಗಳನ್ನು ಜಾರಿಗೊಳಿಸಲು ನಬಾರ್ಡ್ ಹಂತದಲ್ಲಿ ಪುನರ್ ಧನ ಕಡಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಮಾನ್ಯ ಸಹಕಾರ ಸಚಿವರು ಮುಜರಾಯಿ ಇಲಾಖೆಯ ಠೇವಣಿ ಹಣವನ್ನು ಜಿಲ್ಲಾ ಕೇಂದ್ರ ಬ್ಯಾಂಕ್‍ಗಳಲ್ಲಿ ಠೇವಣಿ ಮಾಡಲು ಈಗಾಗಲೇ ಸಂಬಂಧಪಟ್ಟ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದು, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು ;

(ಉ) ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಎಲ್ಲಾ ವ್ಯವಹಾರಗಳನ್ನು ಗಣಕೀಕರಣಗೊಳಿಸಲು ಮತ್ತು ಏಕ ರೀತಿಯ ತಂತ್ರಾಂಶವನ್ನು ಅಳವಡಿಸಲು ಸರ್ಕಾರದ ಹಂತದಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆಯೇ ;

(ಊ) ಮುಜರಾಯಿ ಇಲಾಖೆಯ ಠೇವಣಿ ಮತ್ತು ಲೋಕೋಪಯೋಗಿ ಇಲಾಖೆಯ ಹಾಗೂ ಜಿಲ್ಲಾ ಪಂಚಾಯತಿ (ಇ.ಎಂ.ಡಿ.) ಮೊತ್ತವನ್ನು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‍ಗಳಲ್ಲಿ ಠೇವಣಿ ಮಾಡುವುದರಿಂದ ಸರ್ಕಾರದ ಯೋಜನೆಗಳನ್ನು ಜಾರಿಗೊಳಿಸಲು ಸಾಧ್ಯವಾಗುತ್ತಿದ್ದು, ಈ ಸಂಬಂಧ ಸರ್ಕಾರದ ಕ್ರಮವೇನು ?

## ನೀರಾ ಪರಿಷ್ಕರಣೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೦೫೨ (೧೧೫೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೆಂಗಿನ ಗಿಡದಿಂದ ನೀರಾ ತೆಗೆದು ಪರಿಷ್ಕರಣೆ ಮಾಡಲು ಅನುಮತಿ ನೀಡುವುದಾಗಿ ೨೦೧೫-೧೬ರ ಆಯವ್ಯಯದಲ್ಲಿ ಘೋಷಿಸಲಾಗಿತ್ತು. ಈ ರೀತಿ ನೀರಾ ಪರಿಷ್ಕರಣೆ ಕಾರ್ಖಾನೆ ಆರಂಭಿಸುವವರಿಗೆ ಸರ್ಕಾರ ಯಾವ ಪ್ರೋತ್ಸಾಹಕ ಕ್ರಮಗಳನ್ನು ಕೈಗೊಂಡಿರುತ್ತದೆ ;

(ಆ) ತೆಂಗು ಅಭಿವೃದ್ಧಿ ಮಂಡಳಿಯಿಂದ ನೀರಾ ಪರಿಷ್ಕರಣೆ ಕಾರ್ಖಾನೆಗೆ ಎಷ್ಟು ಸಹಾಯಧನ ನೀಡಲಾಗುತ್ತಿದೆ ;

(ಇ) ಪಕ್ಕದ ಕೇರಳ ರಾಜ್ಯದಲ್ಲಿ ಅಲ್ಲಿನ ರಾಜ್ಯ ಸರ್ಕಾರವು ನೀರಾ ಪರಿಷ್ಕರಣೆ ಕಾರ್ಖಾನೆಗಳಿಗೆ ರೂ. ೫೦ ಲಕ್ಷ ಸಹಾಯ ಧನ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ತೆಂಗಿನ ಮರದಿಂದ ತೆಗೆದ ನೀರಾವನ್ನು ನೀರಾ (ಕಲ್ಪರಸ) ಆಗಿಯೇ ಇಟ್ಟುಕೊಳ್ಳುವ ತಂತ್ರಜ್ಞಾನ ಲಭ್ಯವಿರುವುದು ನಿಜವೇ ; (ವಿವರ ನೀಡುವುದು)

(ಉ) ಇದರ ಪ್ರಯೋಜನವನ್ನು ತೆಂಗು ಬೆಳೆಗಾರರಿಗೆ ಹೇಗೆ ಒದಗಿಸಲಾಗುತ್ತಿದೆ ?

## ಕಬ್ಬು ಬೆಳೆಗಾರರಿಗೆ ಬಾಕಿ ಹಣ ಪಾವತಿ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೦೫೩ (೧೧೫೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩-೧೪ನೇ ಸಾಲಿನಿಂದ ಇಲ್ಲಿಯವರೆವಿಗೆ ಕಬ್ಬು ಬೆಳೆಗಾರರಿಗೆ ಸಕ್ಕರೆ ಕಾರ್ಖಾನೆಗಳಿಂದ ನೀಡಬೇಕಾಗಿರುವ ಬಾಕಿ ಎಷ್ಟು ;

(ಆ) ಎಂಟು ತಿಂಗಳ ಹಿಂದೆ ಇದೇ ವಿಷಯಕ್ಕೆ ಜಪ್ತಿ ಮಾಡಲಾಗಿರುವ ಸಕ್ಕರೆ ಮಾರಾಟವಾಗದೇ ಹಾಗೇ ಇರುವುದು ನಿಜವೇ ; (ವಿವರ ನೀಡುವುದು)

(ಇ) ಇದರಿಂದಾಗಿ ಸದರಿ ಸಕ್ಕರೆಯು ಹಾಳಾಗುವುದಿಲ್ಲವೇ; ಹಾಳಾಗದಿರಲು ಮತ್ತು ಇದನ್ನು ಮಾರಾಟ ಮಾಡಲು ಏನು ವಿಶೇಷ ಕ್ರಮ ಕೈಗೊಳ್ಳಲಾಗಿದೆ ?

## ತೆಂಗು ಬೆಳೆಗಾರರಿಗೆ ಪ್ರೋತ್ಸಾಹ ಕಾರ್ಯಕ್ರಮಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೦೫೪ (೧೧೫೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೆಂಗು ಬೆಳೆಗಾರರ ಎಷ್ಟು ಸೊಸೈಟಿಗಳನ್ನು ನೋಂದಾಯಿಸಲಾಗಿದೆ ; (ಜಿಲ್ಲಾವಾರು ಪಟ್ಟಿ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ತೆಂಗು ಬೆಳೆಗಾರರ ಫೆಡರೇಷನ್‌ಗಳನ್ನು ಸ್ಥಾಪಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಎಷ್ಟು ತೆಂಗು ಬೆಳೆಗಾರರ ಕಂಪನಿಗಳನ್ನು (CPC)ಗಳನ್ನು ನೋಂದಾಯಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸದರಿ ಸೊಸೈಟಿ, ಫೆಡರೇಷನ್ ಮತ್ತು ಬೆಳೆಗಾರರ ಕಂಪನಿಗಳಿಗೆ ಕಳೆದ ಮೂರು ವರ್ಷಗಳಿಂದ ಯಾವ ಯಾವ ಪ್ರೋತ್ಸಾಹಕ ಕಾರ್ಯಕ್ರಮಗಳನ್ನು ಸರ್ಕಾರವು ರೂಪಿಸಿ ಅನುಷ್ಠಾನಗೊಳಿಸಿದೆ? (ವಿವರ ನೀಡುವುದು)

## ತೆಂಗು ಬೆಳೆಯುವ ಪ್ರದೇಶ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೦೫೫ (೧೧೫೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೆಂಗು ಬೆಳೆಯುವ ಪ್ರದೇಶ ಎಷ್ಟು ಹೆಕ್ಟೇರ್ ಇದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ದೇಶದ ಒಟ್ಟು ತೆಂಗು ಉತ್ಪಾದನೆಯಲ್ಲಿ ರಾಜ್ಯ ಎಷ್ಟನೇ ಸ್ಥಾನದಲ್ಲಿದೆ ;

(ಇ) ತೆಂಗು ಬೆಳೆಗಾರರ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ;

(ಈ) ತೆಂಗು ಉತ್ಪನ್ನವಾದ ಕೊಬ್ಬರಿಗೆ ಈ ಸಾಲಿನಲ್ಲಿ ಬೆಲೆ ತುಂಬಾ ಕಡಿಮೆಯಾಗಿ ರೈತರಿಗೆ ತೊಂದರೆಯಾಗಿರುವುದರಿಂದ ಇದನ್ನು ಪರಿಹರಿಸಲು ಸರ್ಕಾರ ಕೈಗೊಳ್ಳುವ ಕ್ರಮವೇನು ?

## ತೆಂಗು ಅಭಿವೃದ್ಧಿ ಮಂಡಳಿ ಯೋಜನೆಗಳು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೦೫೬ (೧೧೫೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೆಂಗು ಬೆಳೆ ಅಭಿವೃದ್ಧಿಗಾಗಿ ಶಾಸನ ಬದ್ಧ ಸಂಸ್ಥೆಯಾದ ತೆಂಗು ಅಭಿವೃದ್ಧಿ ಮಂಡಳಿಯಲ್ಲಿ ರಾಜ್ಯ ಸರ್ಕಾರವನ್ನು ಯಾರು ಪ್ರತಿನಿಧಿಸುತ್ತಿದ್ದಾರೆ ;

(ಆ) ಕಳೆದ ಎರಡು ವರ್ಷಗಳಲ್ಲಿ ತೆಂಗು ಅಭಿವೃದ್ಧಿ ಮಂಡಳಿಯ ಎಷ್ಟು ಸಭೆಗಳು ನಡೆದಿವೆ ;

(ಇ) ಎಷ್ಟು ಸಭೆಗಳಿಗೆ ರಾಜ್ಯ ಸರ್ಕಾರದ ಪ್ರತಿನಿಧಿಗಳು ಹಾಜರಾಗಿದ್ದಾರೆ ;

(ಈ) ತೆಂಗು ಅಭಿವೃದ್ಧಿ ಮಂಡಳಿಯ ಯೋಜನೆಗಳಲ್ಲಿ ಎಷ್ಟು ಯೋಜನೆಗಳನ್ನು ರಾಜ್ಯದಲ್ಲಿ ಅನುಷ್ಠಾನಕ್ಕೆ ತರಲಾಗಿದೆ ; ಅದರ ಫಲಶೃತಿ ಏನು ;

(ಉ) ಕಳೆದ ಎರಡು ವರ್ಷಗಳಲ್ಲಿ ತೆಂಗು ಅಭಿವೃದ್ಧಿ ಮಂಡಳಿಯ ಒಟ್ಟು ಆರ್ಥಿಕ ಅನುದಾನದಲ್ಲಿ ಎಷ್ಟು ಶೇಕಡಾ ಅನುದಾನವನ್ನು ರಾಜ್ಯದ ತೆಂಗು ಬೆಳೆಗಾರರಿಗೆ ತರಲಾಗಿದೆ ?

## ಸಾಲಭಾದೆಯಿಂದ ಆತ್ಮಹತ್ಯೆಗೆ ಶರಣಾದ ರೈತರ ಕುಟುಂಬಕ್ಕೆ ಪರಿಹಾರ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೫೭ (೧೧೬೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿಗೆ ಚಿತ್ರದುರ್ಗ ಜಿಲ್ಲೆಯಲ್ಲಿ ಸಾಲದ ಭಾದೆಯಿಂದ ಆತ್ಮಹತ್ಯೆಗೆ ಶರಣಾದ ರೈತರ ಸಂಖ್ಯೆ ಎಷ್ಟು ;

(ಆ) ಇವರಲ್ಲಿ ಎಷ್ಟು ಕುಟುಂಬಗಳಿಗೆ ಸರ್ಕಾರ ಪರಿಹಾರ ಒದಗಿಸಿದೆ ; ಉಳಿದ ಕುಟುಂಬಗಳಿಗೆ ಪರಿಹಾರ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ?

## ಕಾವೇರಿ ನದಿ ನೀರಿಗೆ ನಗರ/ಪಟ್ಟಣಗಳ ಕೊಳಚೆ ನೀರನ್ನು ಬಿಡುತ್ತಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫೮ (೧೧೩೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾವೇರಿ ನದಿ ನೀರಿಗೆ ನಗರಗಳ ಕೊಳಚೆ ನೀರನ್ನು ಬಿಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕುಶಾಲನಗರ, ಪಿರಿಯಪಟ್ಟಣ, ಶ್ರೀರಂಗಪಟ್ಟಣ, ಮಂಡ್ಯ ನಗರಗಳ ಕೊಳಚೆ ನೀರನ್ನು ಯಾವ ರೀತಿಯಲ್ಲಿ ಸಂಸ್ಕರಿಸಿ ವಿಲೆ ಮಾಡಲಾಗುತ್ತಿದೆ ;

(ಇ) ಈ ನಗರ/ಪಟ್ಟಣಗಳ ಕೊಳಚೆ ನೀರನ್ನು ಸಂಸ್ಕರಿಸಿ ವಿಲೆ ಮಾಡಲು ಖರ್ಚು ಮಾಡುತ್ತಿರುವ ಹಣ ಎಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿ ಕೃಷಿ ಬೆಳೆಗಳಿಗೆ ಮಾರಕ ಔಷಧಿಗಳನ್ನು ಬಳಸುತ್ತಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫೯ (೧೧೩೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿ ಸಂಬಂಧಿತ ಬೆಳೆಗಳನ್ನು ಬೆಳೆಯಲು ರೈತರು ಹೆಚ್ಚಿನ ಮಟ್ಟದಲ್ಲಿ ವಿಷಕಾರಕ ಔಷಧಿಗಳನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ವಿಷಕಾರಕ ಔಷಧಿಗಳನ್ನು ಕಡಿಮೆ ಬಳಸಲು ಮತ್ತು ಈ ಔಷಧಿಗಳಿಂದ ಆಗುತ್ತಿರುವ ಅಡ್ಡ ಪರಿಣಾಮಗಳ ಕುರಿತು ರೈತರಿಗೆ ಮನವರಿಕೆ ಮಾಡಲು ಸರ್ಕಾರದ ಜಾಗೃತಿ ಕಾರ್ಯಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಕೃಷಿಗೆ ನಿಷೇಧಿತ ಔಷಧಿಗಳು ಯಾವುವು ? (ವಿವರ ನೀಡುವುದು)

## ತೆಂಗಿನ ಮರದ ಉತ್ಪನ್ನಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೬೦ (೧೨೩೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೆಂಗಿನ ಯಾವ ಉತ್ಪನ್ನಗಳಿಗೆ ಸರ್ಕಾರ ರೂಪಿಸಿರುವ ಪ್ರೋತ್ಸಾಹಕ ಯೋಜನೆಗಳಾವುವು ;

(ಆ) ಈ ಸಾಲಿನಲ್ಲಿ ಕೊಬ್ಬರಿ ಬೆಲೆ ತುಂಬಾ ಕಡಿಮೆಯಾಗಿ ರೈತರಿಗೆ ಅನ್ಯಾಯವಾಗಿದ್ದು, ಇದರ ನಿವಾರಣೆಗೆ ಕೈಗೊಂಡಿರುವ ಕ್ರಮವೇನು ; ಪಕ್ಕದ ಕೇರಳ, ತಮಿಳುನಾಡು ಹಾಗೂ ಗೋವಾ ರಾಜ್ಯಗಳಲ್ಲಿ ನೀರಾ ಸಕ್ಕರೆ, ನೀರಾ ಬೆಲ್ಲ ತಯಾರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದ ತೆಂಗು ಬೆಳೆಗಾರರಿಗೂ, ತೆಂಗಿನ ಮೌಲ್ಯಧಾರಿತ ಉತ್ಪನ್ನಗಳನ್ನು ತಯಾರಿಸಲು ಅನುಕೂಲವಾಗುವ ನಿಟ್ಟಿನಲ್ಲಿ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಹಾವೇರಿ ಜಿಲ್ಲೆಯಲ್ಲಿ ವ್ಯವಸಾಯ ಸಹಕಾರ ಸಂಘಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೬೧ (೧೨೪೯) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ವ್ಯವಸಾಯ ಸೇವಾ ಸಹಕಾರಿ ಸಂಘಗಳು ಎಷ್ಟು ; ಅವುಗಳ ವಹಿವಾಟು ಎಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಸಹಕಾರಿ ಸಂಘದಿಂದ ಶೂನ್ಯ ಬಡ್ಡಿದರದಲ್ಲಿ ಸುಮಾರು ೨೫,೦೦೦ ದಿಂದ ೩ ಲಕ್ಷದವರೆಗೆ ಎಷ್ಟು ಜನ ರೈತರಿಗೆ ಸಾಲ ಮಂಜೂರು ಮಾಡಲಾಗಿದೆ ; ಯಾವ ಯಾವ ರೈತರಿಗೆ ಎಷ್ಟೆಷ್ಟು ಮಂಜೂರು ಮಾಡಲಾಗಿದೆ ; (ತಾಲ್ಲೂಕುವಾರು ರೈತನ ಹೆಸರು ಸಹಿತ ಮಾಹಿತಿ ಒದಗಿಸುವುದು)

(ಇ) ಹಾವೇರಿ ಜಿಲ್ಲೆಗೆ ಪ್ರತ್ಯೇಕ ಡಿ.ಸಿ.ಸಿ. ಬ್ಯಾಂಕ್ ಮಾಡುವ ವಿಚಾರ ಇದೆಯೇ ; ಇದ್ದರೆ, ಯಾವಾಗ ಘೋಷಣೇ ಮಾಡಲಾಗುವುದು ;

(ಈ) ಪ್ರತ್ಯೇಕ ಡಿ.ಸಿ.ಸಿ ಬ್ಯಾಂಕ್ ಮಾಡಲು ಸರ್ಕಾರದ ನಿಯಮವೇನು; ಹಾವೇರಿ ಜಿಲ್ಲೆ ಈ ನಿಯಮಗಳಲ್ಲಿ ಒಳಪಟ್ಟ ಬ್ಯಾಂಕ್ ಸ್ಥಾಪನೆಗೆ ಬರುತ್ತದೆಯೇ ?

## ಹಾವೇರಿ ಜಿಲ್ಲೆಯಲ್ಲಿ ಹಾಲು ಉತ್ಪಾದಕರ ಸಂಘ ಸಂಸ್ಥೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೬೨ (೧೨೨೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಎಷ್ಟು ಹಾಲು ಉತ್ಪಾದಕರ ಸಂಘ ಸಂಸ್ಥೆಗಳಿವೆ ; (ತಾಲ್ಲೂಕುವಾರು ಸಂಘ ಸಂಸ್ಥೆಗಳ ಹಾಗೂ ವಿಳಾಸದ ಮಾಹಿತಿ ಒದಗಿಸುವುದು)

(ಆ) ಪ್ರತಿ ಜಿಲ್ಲೆಯಲ್ಲಿ ಒಟ್ಟು ಹಾಲು ಉತ್ಪಾದಕರ ಸಂಖ್ಯೆ ಎಷ್ಟು ; ಎಷ್ಟು ಲೀಟರ್ ಹಾಲು ಉತ್ಪಾದನೆ ಆಗುತ್ತಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಹಾವೇರಿ ಜಿಲ್ಲೆಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪನೆ ಸರ್ಕಾರದ ಮುಂದಿದೆಯೇ ; ಹಾಗಿದ್ದರೆ, ಯಾವಾಗ ಸ್ಥಾಪಿಸಲಾಗುವುದು ;

(ಈ) ಪ್ರತ್ಯೇಕ ಹಾಲು ಒಕ್ಕೂಟ ರಚಿಸಲು ಸರ್ಕಾರದ ನಿಯಮಗಳೇನು ?

## ಮೈಸೂರು–ನಂಜನಗೂಡು ರಸ್ತೆ ಅಭಿವೃದ್ಧಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೬೩ (೧೧೬೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು–ನಂಜನಗೂಡು ರಸ್ತೆಯನ್ನು ಆರು ಪಥದ ರಸ್ತೆಯನ್ನಾಗಿ ಅಭಿವೃದ್ಧಿಪಡಿಸುವ ಕಾಮಗಾರಿಗಳು ಆರಂಭವಾಗಿದೆಯೇ ; ಕಾಮಗಾರಿ ಯಾವ ಹಂತದಲ್ಲಿದೆ ; ಈ ಯೋಜನೆಯ ಅಂದಾಜು ವೆಚ್ಚ ಎಷ್ಟು ; ಬಿಡುಗಡೆ ಆಗಿರುವ ಅನುದಾನ ಎಷ್ಟು ;

(ಆ) ಈ ರಸ್ತೆಯ ವಿಸ್ತರಣೆಗೆ ಇದ್ದ ವಿಮಾನ ನಿಲ್ದಾಣ ಪ್ರಾಧಿಕಾರದವರ ಅಡೆತಡೆ ನಿವಾರಣೆ ಆಗಿದೆಯೇ ; (ವಿವರ ನೀಡುವುದು)

(ಇ) ಈ ರಸ್ತೆಯಲ್ಲಿ ಬರುವ ಅಪಘಾತ ವಲಯಗಳಾದ ಮೂರು ಕೆರೆಗಳ ಏರಿಯನ್ನು ವಿಸ್ತರಿಸಲಾಗುವುದೇ ; ಹಾಗೂ ಇವುಗಳಿಗೆ ಬಹಳ ಬಿಗಿಯಾದ ಗರ್ಡರ್ಸ್ ಅಳವಡಿಸಲು ಕ್ರಮ ಜರುಗಿಸಲಾಗುವುದೇ ?

## ಹುಣಸೂರು–ಹೆಚ್.ಡಿ. ಕೋಟೆ ಹೆದ್ದಾರಿಯ ಉದ್ದಕ್ಕೂ ಕೇಬಲ್ ಅಳವಡಿಸುವಿಕೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೬೪ (೧೧೬೬) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಣಸೂರು–ಹೆಚ್.ಡಿ.ಕೋಟೆ ಹೆದ್ದಾರಿಯ ಉದ್ದಕ್ಕೂ ಮೈಸೂರು–ಕಣ್ಣಾನೂರು–ವೀರಾಜಪೇಟೆ ಹೆದ್ದಾರಿ ಉದ್ದಕ್ಕೂ, ದೂರಸಂಪರ್ಕ ಕೇಬಲ್ ಅಳವಡಿಸಲು ಖಾಸಗಿ ಕಂಪನಿಯವರು ಗುಂಡಿ ತೋಡಿದ್ದಾರೆಯೇ ; ಇದಕ್ಕೆ ಇಲಾಖೆಯಿಂದ ಅನುಮತಿ ಪಡೆಯಲಾಗಿದೆಯೇ ;

(ಆ) ಸಂರಕ್ಷಣಾ ಕ್ರಮಗಳನ್ನು ಅನುಸರಿಸದೇ ಗುಂಡಿ ತೋಡಿರುವುದರಿಂದ ಈ ಗುಂಡಿಯೊಳಕ್ಕೆ ಆಕಸ್ಮಿಕವಾಗಿ ಜಾನುವಾರುಗಳು ಮತ್ತು ಹಳ್ಳಿಯ ಜನರು ಬಿದ್ದು ಪ್ರಾಣ ಕಳೆದುಕೊಂಡಿರುವ ಘಟನೆಗಳು ನಡೆದಿದೆಯೇ ; (ವಿವರ ಒದಗಿಸುವುದು)

(ಇ) ಈ ಬಗ್ಗೆ ಪರಿಹಾರ ನೀಡುವವರು ಯಾರು ; ಪರಿಹಾರ ನೀಡಲಾಗಿದೆಯೇ ; ಇಲ್ಲದಿದ್ದಲ್ಲಿ, ಪರಿಹಾರ ನೀಡಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಸಿಂಡಿಕೇಟ್ ಬ್ಯಾಂಕ್ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ ಬಡಾವಣೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೬೫ (೧೧೬೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಡಿಕೇಟ್ ಬ್ಯಾಂಕ್ ನೌಕರರ ಗೃಹ ನಿರ್ಮಾಣ ಸಹಕಾರ ಸಂಘವು ಬೆಂಗಳೂರು ಮಹಾನಗರದ ಮಾಗಡಿ ರಸ್ತೆ ಹೇರೋಹಳ್ಳಿಯಲ್ಲಿ ನಿರ್ಮಿಸಿರುವ ಹೇರೋಹಳ್ಳಿ ಗ್ರಾಮ ಪಂಚಾಯಿತಿ ಅನುಮೋದಿತ ನಕ್ಷೆಯ ಬಡಾವಣೆಯಲ್ಲಿ ರಚಿಸಿರುವ ಅನಿಯಮಿತ ಅಳತೆಯ ನಿವೇಶನಗಳ (ಅಡ್‌ಜೈಮೆನ್‌ಷನ್ ಸೈಟ್) ಸಂಖ್ಯೆ ಎಷ್ಟು ; (ಈ ರೀತಿಯ ನಿವೇಶನಗಳ ಸಂಖ್ಯೆ, ಅಳತೆ ರೂಪ, ಉದ್ದ ಅಡಿಗಳಲ್ಲಿ, ಹಂಚಿಕೆ ಪಡೆದ ಸದಸ್ಯರ ಹೆಸರು, ನೋಂದಣಿ ದಿನಾಂಕದ ವಿವರಗಳನ್ನು ಒದಗಿಸುವುದು)

(ಆ) ಈ ನಿವೇಶನಗಳಲ್ಲಿ ಯಾವುದಾದರೂ ನಿವೇಶನಗಳು ಹಂಚಿಕೆಗೆ ಬಾಕಿ ಉಳಿದಿರುತ್ತವೆಯೇ ; ಸಂಘವು ಯಾವುದಾದರೂ ನಿವೇಶನಗಳನ್ನು ಉಳಿಸಿಕೊಂಡಿರುತ್ತದೆಯೇ ;

(ಇ) ಈ ಬಡಾವಣೆಯಲ್ಲಿ ರಚಿಸಿರುವ 50x80 ಮತ್ತು 30x50 ಅಡಿ ಅಳತೆಯ ನಿವೇಶನಗಳ ಸಂಖ್ಯೆ ಎಷ್ಟು ; (ನಿವೇಶನಗಳ ಸಂಖ್ಯೆ, ಹಂಚಿಕೆ ಪಡೆದ ಸದಸ್ಯರ ಹೆಸರು, ನೋಂದಣಿ ದಿನಾಂಕ, ನಿವೇಶನದ ಚಕ್ಕುಬಂದಿ ವಿವರಗಳನ್ನು ಒದಗಿಸುವುದು)

(ಈ) ಈ ಅಳತೆಯ ನಿವೇಶನಗಳಲ್ಲಿ ಹಂಚಿಕೆ ಬಾಕಿ ಇರುವ ನಿವೇಶನಗಳು ಇವೆಯೇ ?

## ಒಳ ಚರಂಡಿ ವ್ಯವಸ್ಥೆಯ ಕಾಮಗಾರಿಯನ್ನು ಪೂರ್ಣಗೊಳಿಸುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೬೬ (೧೧೬೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರದ ಒಳಚರಂಡಿ ಕಾಮಗಾರಿ ಯಾವಾಗ ಆರಂಭವಾಯಿತು ; ಇದರ ಪ್ರಾರಂಭಿಕ ಅಂದಾಜು ವೆಚ್ಚ ಎಷ್ಟು ; ಪರಿಷ್ಕೃತ ಅಂದಾಜು ವೆಚ್ಚ ಎಷ್ಟು ; ಇದುವರೆಗೆ ಆಗಿರುವ ಕಾಮಗಾರಿಗಳು, ಇವುಗಳಿಗೆ ಮಾಡಿರುವ ವೆಚ್ಚ, ಇನ್ನೂ ಆಗಬೇಕಾಗಿರುವ ಕಾಮಗಾರಿಗಳು, ಇವುಗಳಿಗೆ ತಗುಲುವ ವೆಚ್ಚ ಎಷ್ಟು ; (ವಿವರಗಳನ್ನು ಒದಗಿಸುವುದು)

(ಆ) ಚಾಮರಾಜನಗರ ಒಳಚರಂಡಿ ಕಾಮಗಾರಿಗಳು ಬಹಳ ದೀರ್ಘಕಾಲದಿಂದ ನಡೆಯುತ್ತಿದ್ದು, ಸಾರ್ವಜನಿಕರಿಗೆ ಅತೀವ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಯಾವಾಗ ?

## ರಾಜ್ಯ ಹೆದ್ದಾರಿಗಳ ಸಮರ್ಪಕ ಅನುಷ್ಠಾನ ಮತ್ತು ದುರಸ್ಥಿ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೬೭ (೧೧೪೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ರಾಷ್ಟ್ರೀಯ ಹೆದ್ದಾರಿಗಳ ಸಂಖ್ಯೆ ಎಷ್ಟು ಹಾಗೂ ದೂರ ಎಷ್ಟು ; (ವಿವರಗಳನ್ನು ಜಿಲ್ಲಾವಾರು ಒದಗಿಸುವುದು)

(ಆ) ಸದರಿ ಮಾರ್ಗಗಳ ಅಭಿವೃದ್ಧಿಗೆ ಸರ್ಕಾರದ ಕ್ರಮಗಳೇನು ; ರಾಷ್ಟ್ರೀಯ ಹೆದ್ದಾರಿಗಳಾಗಿ ಘೋಷಣೆ ಮಾಡಿ ಇಷ್ಟು ವರ್ಷಗಳಾದರೂ ಸಮರ್ಪಕ ಅನುಷ್ಠಾನವಾಗದಿರುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಹಳೆಯ ಮಾರ್ಗಗಳಲ್ಲದೆ ಹೊಸ ರಾಷ್ಟ್ರೀಯ ಹೆದ್ದಾರಿ ಮಾರ್ಗಗಳನ್ನು ಸರ್ಕಾರ ಗುರುತಿಸಿದೆಯೇ ; ಅವು ಯಾವುವು ; ಈ ಯೋಜನೆ ಯಾವಾಗಿನಿಂದ ಜಾರಿಗೆ ಬರುತ್ತದೆ ;

(ಈ) ಈ ಹೊಸ ಮಾರ್ಗಗಳು ಹಾದು ಹೋಗುವ ಸಂಪರ್ಕ ಸ್ಥಳಗಳಾವುವು ; (ಕಿ.ಮೀ.ವಾರು, ರಸ್ತೆವಾರು ವಿವರಗಳನ್ನು ಒದಗಿಸುವುದು)

(ಉ) ರಸ್ತೆಗಳ ನಿರ್ಮಾಣಕ್ಕೆ ಖರ್ಚಾಗುವ ಮೊತ್ತವೆಷ್ಟು ; ಇದರಲ್ಲಿ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಪಾಲು ಎಷ್ಟು ? (ಪ್ರತ್ಯೇಕವಾಗಿ ವಿವರ ನೀಡುವುದು)

## ರಾಜ್ಯದ ವಿದ್ಯುತ್ ಸಮಸ್ಯೆಯ ಪರಿಹಾರ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೬೮ (೧೧೦೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿದ್ಯುತ್ ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ವಿದ್ಯುತ್ ಅಭಾವ ಪರಿಸ್ಥಿತಿಗೆ ಕಾರಣಗಳೇನು ; ಇದನ್ನು ಸರಿದೂಗಿಸುವ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಬೇಸಿಗೆಯಲ್ಲಿ ನೀರಿನ ಕೊರತೆಯಿಂದ ಉಂಟಾಗುವ ಸಮಸ್ಯೆ ನಿವಾರಣೆಗೆ ತಾತ್ಕಾಲಿಕವಾಗಿ ವಿದ್ಯುತ್ ಖರೀದಿ ಮಾಡಲು ಸರ್ಕಾರ ಸಿದ್ಧವಿದೆಯೇ ; ಯಾವ ದರದಲ್ಲಿ ಯಾವ ರಾಜ್ಯದಿಂದ ವಿದ್ಯುತ್ ಖರೀದಿ ಮಾಡಲಾಗುತ್ತದೆ ;

(ಇ) ರಾಜ್ಯದ ವಿದ್ಯುತ್ ಉತ್ಪಾದನೆಯ ಸಾಮರ್ಥ್ಯವನ್ನು ಹೆಚ್ಚಿಸಲು ಇರುವ ತೊಂದರೆಗಳೇನು ;

(ಈ) ಯಾವ ಯಾವ ಮೂಲಗಳಿಂದ ವಿದ್ಯುತ್ ಉತ್ಪಾದನೆಗೆ ಸರ್ಕಾರ ಚಿಂತನೆ ನಡೆಸಿದೆ ; ಇಂತಹ ವಿದ್ಯುತ್ ಉತ್ಪಾದನೆ ಗುರಿ ಎಷ್ಟು ;

(ಉ) ಈ ಎಲ್ಲಾ ಮೂಲಗಳಿಂದ ಸಂಗ್ರಹಿಸಿರುವ ವಿದ್ಯುತ್ ಉತ್ಪಾದನೆಗೆ ತಗಲುವ ಖರ್ಚು ಎಷ್ಟು ?

## MSIL ಸಂಸ್ಥೆಯಲ್ಲಿನ ಭ್ರಷ್ಟಾಚಾರ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೦೬೯ (೧೧೩೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಉದ್ದಿಮೆಗಳಲ್ಲಿ ಒಂದಾದ ಎಂ.ಎಸ್.ಐ.ಎಲ್.ನಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡಿರುವ ನೌಕರರ ಪೈಕಿ ಎಷ್ಟು ನೌಕರರನ್ನು ಸೇವೆಯಿಂದ ವಜಾಗೊಳಿಸಲಾಗಿದೆ ; (ನೌಕರರ ಹೆಸರು, ದಿನಾಂಕ, ವಿಳಾಸ ಹಾಗೂ ಕಾರಣ ಸಹಿತ ಮಾಹಿತಿ ನೀಡುವುದು)

(ಆ) ಇವರುಗಳಿಗೆ ನೀಡುವ ಕನಿಷ್ಠ ಹಾಗೂ ಗರಿಷ್ಠ ಸಂಬಳವೆಷ್ಟು ;

(ಇ) ಡಿಸ್ಟ್ರಿಕ್ ಇನ್–ಚಾರ್ಜ್ ಮತ್ತು ರೀಟೇಲ್ ಇನ್–ಚಾರ್ಜ್ ಅಧಿಕಾರಿಗಳು ಸದರಿ ನೌಕರರಿಂದ ಲಂಚ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪ್ರಕರಣವಾರು ಹೆಸರು ಸಹಿತ ವಿವರ ನೀಡುವುದು ;

(ಈ) ಸಂಸ್ಥೆಯು ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಂಡಿದೆ ; ಆ ಅಧಿಕಾರಿಗಳು ಎಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ? (ಕೈಗೊಂಡ ತನಿಖಾ ಕ್ರಮದ ಬಗ್ಗೆ ವಿವರ ನೀಡುವುದು)

## ವಿಧಾನಸೌಧದಲ್ಲಿರುವ ಕೊಠಡಿಗಳ ನವೀಕರಣ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೦೭೦ (೧೧೭೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪ್ರತಿಷ್ಠಿತ ಕಟ್ಟಡವಾದ ವಿಧಾನಸೌಧದಲ್ಲಿ ಸಚಿವರುಗಳ ಕೊಠಡಿಯನ್ನು ಹೊರತುಪಡಿಸಿ, ಇತರೆ ಕಛೇರಿಗಳು ನವೀಕರಣಗೊಂಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣವೇನು ;

(ಆ) ವಿಧಾನಸೌಧದ ಆವರಣದಲ್ಲಿರುವ ಶೌಚಾಲಯಗಳಲ್ಲಿ ಶುಚಿತ್ವದ ಕೊರತೆ ಹಾಗೂ ಸಮರ್ಪಕವಾದ ನಿರ್ವಹಣೆ ಇಲ್ಲದಿರುವುದಕ್ಕೆ ಕಾರಣವೇನು ;

(ಇ) ಸರ್ಕಾರದ ಅಧೀನಕ್ಕೆ ಬರುವ ಪುರಾತನ ಕಟ್ಟಡಗಳ ಜೀರ್ಣೋದ್ಧಾರ ಕಾರ್ಯವನ್ನು ನಿರ್ವಹಿಸಲಾಗುತ್ತಿದೆಯೇ; ಸದರಿ ಕಟ್ಟಡಗಳ ಸಂರಕ್ಷಣೆಗಾಗಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳು ಯಾವುವು ? (ಕಟ್ಟಡವಾರು, ಸ್ಥಳವಾರು ವಿವರ ನೀಡುವುದು)

## ರಾಜ್ಯದ ರಸ್ತೆಗಳ ಅಭಿವೃದ್ಧಿ ಕುರಿತು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೦೭೧ (೧೧೭೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರಸ್ತೆಗಳ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರದಿಂದ ಬಂದಿರುವ ಅನುದಾನ ಎಷ್ಟು ; (ಕಳೆದ ೩ ವರ್ಷಗಳ ಮಾಹಿತಿ ನೀಡುವುದು)

(ಆ) ಸದರಿ ಅನುದಾನವನ್ನು ಯಾವ ಯಾವ ರಸ್ತೆಗಳ ಅಭಿವೃದ್ಧಿಗೆ ವಿನಿಯೋಗಿಸಲಾಗಿದೆ ; (ವರ್ಷವಾರು, ರಸ್ತೆವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ರಸ್ತೆಗಳ ಅಭಿವೃದ್ಧಿ ಪರಿಣಾಮಕಾರಿಯಾಗಿ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾರಣವೇನು ?

## ವಿಧಾನಸೌಧ ಮತ್ತು ವಿಕಾಸಸೌಧ ಕಟ್ಟಡಗಳ ಬಗ್ಗೆ ಮಾಹಿತಿ ಕುರಿತು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೧೦೭೨ (೧೨೨೩) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಧಾನಸೌಧ ಮತ್ತು ವಿಕಾಸಸೌಧ ಕಟ್ಟಡಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ಆದ ವರ್ಷಗಳು ಯಾವುವು ; ಆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮುಖ್ಯಮಂತ್ರಿಗಳು ಹಾಗೂ ನಾಯಕರು ಯಾರ್‍ಯಾರು ; (ಪೂರ್ಣ ವಿವರ ನೀಡುವುದು)

(ಆ) ಸದರಿ ೨ ಕಟ್ಟಡಗಳ ನಿರ್ಮಾಣ ಮಾಡಲು ತೆಗೆದುಕೊಂಡ ಅವಧಿ ಎಷ್ಟು ; (ಮಾಹಿತಿ ನೀಡುವುದು)

(ಇ) ವಿಧಾನಸೌಧ ಮತ್ತು ವಿಕಾಸಸೌಧ ಕಟ್ಟಡಗಳ ನಿರ್ಮಾಣಕ್ಕೆ ನಿಗಧಿ ಮಾಡಿದ್ದ ಅಂದಾಜು ವೆಚ್ಚ ಎಷ್ಟು ; ಅಂತಿಮವಾಗಿ ಖರ್ಚು ಮಾಡಿದ ವೆಚ್ಚ ಎಷ್ಟು ; (ಪೂರ್ಣ ವಿವರ ನೀಡುವುದು)

(ಈ) ಈ ಎರಡು ಕಟ್ಟಡಗಳ ವಿನ್ಯಾಸವನ್ನು ಮಾಡಿದವರು ಯಾರು ; ಕಟ್ಟಡಗಳನ್ನು ನಿರ್ಮಾಣ ಮಾಡಲು ಕಾರಣೀಭೂತರಾದ ನಾಯಕರನ್ನು ಸದಾ ನೆನಪಿಸಿಕೊಳ್ಳಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಖುಷ್ಕಿ ಮತ್ತು ತರಿ ಬೇಸಾಯ ಪ್ರದೇಶ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೧೦೭೩ (೧೧೩೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಒಟ್ಟಾರೆ ಭೂ ಪ್ರದೇಶದಲ್ಲಿ ಖುಷ್ಕಿ ಬೇಸಾಯ ಮತ್ತು ತರಿ ಬೇಸಾಯ ಮಾಡಲಾಗುತ್ತಿರುವ ಪ್ರದೇಶವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಖುಷ್ಕಿ ಬೇಸಾಯಗಾರರಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳಾವುವು ; (ವಿವರ ನೀಡುವುದು)

(ಇ) ೨೦೧೫–೧೬ನೇ ಸಾಲಿನಲ್ಲಿ ಬರದಿಂದ ನಷ್ಟಕ್ಕೆ ಗುರಿಯಾದ ರೈತರ ಸಂಖ್ಯೆ ಎಷ್ಟು ; ಹಾಗೆ ಎಷ್ಟು ಪ್ರದೇಶದಲ್ಲಿ ಬೆಳೆ ಹಾನಿಯಾಗಿರುತ್ತದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಈ ರೀತಿಯ ಬೆಳೆ ಹಾನಿಯಿಂದ ರೈತರಿಗಾಗಿರುವ ನಷ್ಟದ ಪ್ರಮಾಣವೆಷ್ಟು;

(ಉ) ರೈತರಿಗಾಗಿರುವ ನಷ್ಟವನ್ನು ತುಂಬಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಯಾವ ರೈತರಿಗೆ ಎಷ್ಟು ಪರಿಹಾರವನ್ನು ನೀಡಲಾಗಿದೆ ? (ವಿವರ ನೀಡುವುದು)

## ರಾಷ್ಟ್ರೀಯ, ರಾಜ್ಯ ಮತ್ತು ಜಿಲ್ಲಾ ಮುಖ್ಯ ರಸ್ತೆಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೧೦೭೪ (೧೧೩೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಕಿ.ಮೀ. ಉದ್ದದ ರಾಷ್ಟ್ರೀಯ, ರಾಜ್ಯ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳು ಅಸ್ತಿತ್ವದಲ್ಲಿವೆ ;

(ಆ) ಯಾವ ಯಾವ ತಾಲ್ಲೂಕುಗಳಲ್ಲಿ ಅಂತಹ ರಸ್ತೆಗಳು ಹಾದು ಹೋಗಿವೆ ; (ರಸ್ತೆವಾರು ಮಾಹಿತಿ ನೀಡುವುದು)

(ಇ) ಈ ರಸ್ತೆಗಳ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಇದುವರೆಗೆ ಯಾವ ರಸ್ತೆಗೆ, ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ; (ವಿವರ ನೀಡುವುದು)

(ಉ) ಯಾವ ಯಾವ ರಸ್ತೆಗಳ ಕಾಮಗಾರಿ ಕಳಪೆ ಎಂದು ಗುರುತಿಸಲಾಗಿದೆ ; ಆ ಕಳಪೆ ಕಾಮಗಾರಿಗಳಿಗೆ ಕಾರಣರಾರು ; ಅವರುಗಳ ಮೇಲೆ ಯಾವ ಕ್ರಮ ಜರುಗಿಸಲಾಗಿದೆ? (ರಸ್ತೆವಾರು ವಿವರ ನೀಡುವುದು)

## ರೈತರ ಕೃಷಿ ಪಂಪ್ ಸೆಟ್‌ಗಳಿಗೆ ಸೋಲಾರ್ ಅಳವಡಿಸುವ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭೫ (೧೯೯೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿಗೆ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಸೋಲಾರ್ ಅಳವಡಿಸಲು ನಿಗಧಿಪಡಿಸಿರುವ ಅನುದಾನ ಎಷ್ಟು ;

(ಆ) ಎಷ್ಟು ಕೃಷಿ ಪಂಪ್‌ಸೆಟ್‌ಗಳಿಗೆ ಸೋಲಾರ್ ಅಳವಡಿಸಲಾಗಿದೆ ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಫಲಾನುಭವಿಗಳ ವಿವರ ಒದಗಿಸುವುದು)

(ಇ) ಈ ಸಾಲಿನಲ್ಲಿ ಖರ್ಚು ಮಾಡಲಾದ ಅನುದಾನ ಎಷ್ಟು ; ಬಾಕಿ ಉಳಿದಿರುವ ಅನುದಾನ ಎಷ್ಟು ;

(ಈ) ಬಾಕಿ ಉಳಿಸಲು ಕಾರಣಗಳೇನು ; ಅಂತಹ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ ;

(ಉ) ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಸೋಲಾರ್ ಅಳವಡಿಕೆಯಲ್ಲಿ ಮೀಸಲಾತಿ ಪಾಲಿಸಲಾಗಿದೆಯೇ, ಇಲ್ಲದಿದ್ದಲ್ಲಿ, ಕಾರಣಗಳೇನು ?

## ಮೀಸಲಾತಿ ಪಾಲಿಸದೆ ಇರುವ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭೬ (೧೯೫೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಐ.ಟಿ.ಐ ಗೃಹ ನಿರ್ಮಾಣ ಸಹಕಾರ ಸಂಘ ಯಾವ ವರ್ಷದಲ್ಲಿ ಅಸ್ತಿತ್ವಕ್ಕೆ ಬಂದಿದೆ ;

(ಆ) ಈ ಸಹಕಾರ ಸಂಘದಲ್ಲಿರುವ ಒಟ್ಟು ಸದಸ್ಯರುಗಳ ಸಂಖ್ಯೆ ಎಷ್ಟು ; ಇದರಲ್ಲಿ ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡ ಸದಸ್ಯರ ಸಂಖ್ಯೆ ಎಷ್ಟು ;

(ಇ) ಇದುವರೆವಿಗೂ ಈ ಸಹಕಾರ ಸಂಘದಿಂದ ಎಷ್ಟು ಮಂದಿ ನೌಕರರಿಗೆ ನಿವೇಶನ ನೀಡಲಾಗಿದೆ ; ಈ ಪೈಕಿ ಪರಿಶಿಷ್ಠ ಜಾತಿ/ ಪರಿಶಿಷ್ಠ ಪಂಗಡ ನೌಕರರು ಎಷ್ಟು;

(ಈ) ಗೃಹ ನಿರ್ಮಾಣ ಸಹಕಾರ ಸಂಘಗಳಲ್ಲಿ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ ಮೀಸಲಾತಿ ಪಾಲಿಸಲಾಗುತ್ತಿದೆಯೇ ;

(ಉ) ಮೀಸಲಾತಿ ಅನ್ವಯ ಸರಾಸರಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವರ್ಗಗಳಿಗೆ ಎಷ್ಟು ನಿವೇಶನ ನೀಡಬೇಕಾಗಿತ್ತು ;

(ಊ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವರ್ಗಗಳಿಗೆ ಈಗ ನೀಡಿರುವ ನಿವೇಶನಗಳ ಸಂಖ್ಯೆ ಎಷ್ಟು ?

## ಸಂಕಷ್ಟದಲ್ಲಿರುವ ರೇಷ್ಮೆ ಬೆಳೆಗಾರರ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭೭ (೧೧೯೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ರೇಷ್ಮೆ ಬೆಳೆಗಾರರಿಗೆ ಪ್ರೋತ್ಸಾಹಧನ ವಿತರಣೆಗಾಗಿ ನಿಗಧಿಪಡಿಸಿರುವ ಅನುದಾನ ಎಷ್ಟು ;

(ಆ) ಇದುವರೆವಿಗೂ ಎಷ್ಟು ಹಣ ಖರ್ಚಾಗಿರುತ್ತದೆ ; ಬಾಕಿ ಉಳಿದಿರುವ ಹಣ ಎಷ್ಟು ;

(ಇ) ರಾಜ್ಯದಲ್ಲಿ ರೇಷ್ಮೆ ಬೆಳೆಗಾರರು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸಂಕಷ್ಟದಲ್ಲಿರುವ ರೇಷ್ಮೆ ಬೆಳೆಗಾರರಿಗೆ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ?

## ಮೇಕೆದಾಟು ಜಲ ವಿದ್ಯುತ್ ಯೋಜನೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೭೮ (೧೧೯೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರ ಜಲ ವಿದ್ಯುತ್ ಉತ್ಪಾದನೆಗೆ ಮೇಕೆದಾಟು ಯೋಜನೆಯನ್ನು ಪ್ರಾರಂಭಿಸಲು ಉದ್ದೇಶಿಸಿದೆಯೇ ;

(ಆ) ಈ ಯೋಜನೆಗೆ ಸರ್ಕಾರ ನಿಗಧಿಪಡಿಸಿರುವ ಹಣ ಎಷ್ಟು ;

(ಇ) ಈ ಯೋಜನೆಯ ಕಾಮಗಾರಿಯನ್ನು ಈಗಾಗಲೇ ಪ್ರಾರಂಭಿಸಲಾಗಿದೆಯೇ ; ಹಾಗಿದ್ದಲ್ಲಿ, ಬಿಡುಗಡೆಯಾದ ಹಣ ಎಷ್ಟು ;

(ಈ) ಹಾಗಿದ್ದಲ್ಲಿ, ಈ ಯೋಜನೆಯಿಂದ ಎಷ್ಟು ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತದೆ ?

## ಸಹಕಾರ ಸಂಘಗಳ ಅಸ್ತಿತ್ವ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭೯ (೧೯೯೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಸಹಕಾರ ಸಂಘಗಳು ಅಸ್ತಿತ್ವದಲ್ಲಿವೆ ;

(ಆ) ಅಸ್ತಿತ್ವದಲ್ಲಿರುವ ಸಹಕಾರ ಸಂಘಗಳಿಗೆ ಸರ್ಕಾರದ ಅನುದಾನ ನೀಡಲಾಗುತ್ತಿದೆಯೇ ;

(ಇ) ಹಾಗಿದ್ದಲ್ಲಿ, ೨೦೧೫–೧೬ನೇ ಸಾಲಿನಲ್ಲಿ ಸಹಕಾರ ಸಂಘಗಳಿಗೆ ನಿಗಧಿಪಡಿಸಿರುವ ಅನುದಾನ ಎಷ್ಟು ;

(ಈ) ಎಷ್ಟು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಸಹಕಾರ ಸಂಘಗಳು ಅಸ್ತಿತ್ವದಲ್ಲಿವೆ ;

(ಉ) ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ ಸಹಕಾರ ಸಂಘಗಳಿಗೆ ವಿಶೇಷವಾಗಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆಯೇ ;

(ಊ) ಹಾಗಿದ್ದಲ್ಲಿ, ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡ ಸಹಕಾರ ಸಂಘಗಳಿಗೆ ನಿಗಧಿಪಡಿಸಿರುವ ಅನುದಾನ ಎಷ್ಟು ?

## ಸಹಕಾರ ಸಂಘಗಳಿಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಮೊತ್ತದ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೮೦ (೧೨೪೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ದುರ್ಬಲ ವರ್ಗ ಪರಿಶಿಷ್ಠ ಜಾತಿ / ಪಂಗಡದವರ ಸಹಕಾರ ಸಂಘ ಮತ್ತು ಮಹಿಳಾ ಸಹಕಾರ ಸಂಘಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಯಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿರುವ ಹಣವೆಷ್ಟು ;

(ಆ) ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ಈ ಯೋಜನೆಯನ್ವಯ ಆಯಾಯ ಸಹಕಾರ ಸಂಘಗಳಿಗೆ ಬಿಡುಗಡೆಯಾಗಿರುವ ಹಣವೆಷ್ಟು ; (ಸಂಘಗಳವಾರು ಪ್ರತ್ಯೇಕ ವಿವರ ನೀಡುವುದು)

(ಇ) ಈ ಸಹಕಾರ ಸಂಘಗಳಿಗೆ ಆರ್ಥಿಕ ನೆರವನ್ನು ಮಂಜೂರು ಮಾಡಲು ಅನುಕಂಪದ ನಿಯಮಗಳಾವುವು? (ವಿವರ ನೀಡುವುದು)

## ರೈತರಿಗೆ ವಿತರಿಸಿದ ಬಿತ್ತನೆ ಬೀಜಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೮೧ (೧೨೪೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಿಂದ ರಾಜ್ಯದ ರೈತರಿಗೆ ವಿತರಿಸಲಾದ ಬಿತ್ತನೆ ಬೀಜಗಳೆಷ್ಟು ; ಅವು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರೈತರಿಂದ ಬೇಡಿಕೆ ಬಂದಿರುವ ಬಿತ್ತನೆ ಬೀಜಗಳಾವುವು ; ಬೇಡಿಕೆ ಬಂದಿರುವ ಪ್ರಮಾಣವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಕೃಷಿ ಇಲಾಖೆಯಿಂದ ನೇರವಾಗಿ ವಿತರಣೆಯಾಗುತ್ತಿರುವ ಬಿತ್ತನೆ ಬೀಜಗಳೆಷ್ಟು ; ಖಾಸಗಿ ಕಂಪನಿಗಳಿಂದ ವಿತರಿಸಲಾಗುತ್ತಿರುವ ಬಿತ್ತನೆ ಬೀಜಗಳಾವುವು ;

(ಈ) ಈ ಬಾರಿ ಸರಿಯಾದ ಪ್ರಮಾಣದಲ್ಲಿ ರೈತರಿಗೆ ಬಿತ್ತನೆ ಬೀಜ ಸಿಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಈ ಕೊರತೆ ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಹಾಲು ಉತ್ಪಾದಕರಿಗೆ ನೀಡುತ್ತಿರುವ ಉತ್ಪಾದನಾ ವೆಚ್ಚದ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೮೨ (೧೨೪೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಮತ್ತು ಕೋಲಾರ ಜಿಲ್ಲೆಗಳಲ್ಲಿನ ಹಾಲು ಉತ್ಪಾದಕರಿಗೆ ಪ್ರತಿ ಲೀಟರ್‌ಗೆ ನೀಡಲಾಗುತ್ತಿರುವ ಉತ್ಪಾದನಾ ವೆಚ್ಚವೆಷ್ಟು ;

(ಆ) ಇದರಿಂದ ರೈತರಿಗೆ ಆಗುತ್ತಿರುವ ನಷ್ಟ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಉತ್ಪಾದನಾ ವೆಚ್ಚವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಎ.ಪಿ.ಎಂ.ಸಿ ಮಾರುಕಟ್ಟೆಗಳಲ್ಲಿನ ಮೂಲಭೂತ ಸೌಲಭ್ಯಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೮೩ (೧೨೪೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಎ.ಪಿ.ಎಂ.ಸಿ ಮಾರುಕಟ್ಟೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಎ.ಪಿ.ಎಂ.ಸಿ ಮಾರುಕಟ್ಟೆಗಳಲ್ಲಿ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರಿನ ವ್ಯವಸ್ಥೆ, ಮರ ಗಿಡಗಳು ಮತ್ತು ಸರಿಯಾದ ಶೆಲ್ಟರ್‌ಗಳ ವ್ಯವಸ್ಥೆ ಇಲ್ಲದಿರುವುದರಿಂದ ರೈತರು ಈ ಮಾರುಕಟ್ಟೆಗಳನ್ನು ಸರಿಯಾಗಿ ಬಳಸಿಕೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಮಾರುಕಟ್ಟೆ ಪ್ರಾಂಗಣಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ಕಳೆದ ೨ ವರ್ಷಗಳಲ್ಲಿ ಮಾರುಕಟ್ಟೆಗಳ ಮೂಲಸೌಲಭ್ಯಕ್ಕೆ ಬಿಡುಗಡೆ ಮಾಡಿರುವ ವೆಚ್ಚವೆಷ್ಟು ? (ವಿವರ ನೀಡುವುದು)

## "ರಾಷ್ಟ್ರೀಯ ತೋಟಗಾರಿಕೆ ಮಿಷನ್" ಯೋಜನೆಯಲ್ಲಿ ಬಿಡುಗಡೆಯಾಗಿರುವ ಅನುದಾನದ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೦೮೪ (೧೨೪೫+೧೨೩೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್–ಕರ್ನಾಟಕ ಪ್ರದೇಶದ ೬ ಜಿಲ್ಲೆಯ ರೈತರು ಬೆಳೆದ ಬೆಳೆ ನಾಶವಾಗಿದ್ದು, ರೈತರು ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಳೆನಾಶವಾದ ರೈತರಿಗೆ ಸರ್ಕಾರದಿಂದ ಯಾವ ಯಾವ ಮೂಲಗಳಿಂದ ಪರಿಹಾರ ಒದಗಿಸಲಾಗಿದೆ ;

(ಇ) ಬೆಳೆ ಸರಿಯಾಗಿ ಆಗದ ಕಾರಣ ರೈತರು ಬೇರೆ ಪ್ರದೇಶಗಳಿಗೆ ಗುಳೆ (ವಲಸೆ) ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಇದಕ್ಕೆ ಸರ್ಕಾರದಿಂದ ಪರಿಹಾರೋಪಾಯಗಳೇನು ?

## ಬೀದರ್ ಜಿಲ್ಲೆಯ ಪಶು ಆಸ್ಪತ್ರೆಗಳ ಬಗ್ಗೆ

**ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೮೫ (೧೨೪೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ಪಶು ಆಸ್ಪತ್ರೆಗಳ ಸಂಖ್ಯೆ ಎಷ್ಟು ;

(ಆ) ಈ ಆಸ್ಪತ್ರೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ;

(ಇ) ಈ ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ ಇದನ್ನು ಯಾವಾಗ ಕಾರ್ಯರೂಪಕ್ಕೆ ತರಲಾಗುವುದು ?

## ರಾಜ್ಯದಲ್ಲಿ ಕಬ್ಬು ಬೆಳೆಯುವ ಪ್ರದೇಶಗಳ ಮಾಹಿತಿ ನೀಡುವ ಬಗ್ಗೆ

**ಶ್ರೀ ಲಹರ ಸಿಂಗ್ ಸಿರೋಯಾ (ನಾಮನಿರ್ದೇಶನ ಹೊಂದಿದವರು):–**

೧೦೮೬ (೧೧೧೯) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯಾವ ಯಾವ ಭಾಗಗಳಲ್ಲಿ ಕಬ್ಬು ಬೆಳೆಯನ್ನು ಬೆಳೆಯಲಾಗುತ್ತಿದೆ ;

(ಆ) ೨೦೦೮ ರಿಂದ ೨೦೧೪ ರವರೆಗೆ ಕಬ್ಬು ಬೆಳೆದ ಪ್ರದೇಶ ಮತ್ತು ಕಬ್ಬು ಬೆಳೆದ ರೈತರ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಇ) ಪ್ರತಿ ವರ್ಷ ಕಬ್ಬು ಬೆಳೆಯುವ ಪ್ರದೇಶದ ವಿಸ್ತೀರ್ಣ ಹೆಚ್ಚಾಗಲು ಕಾರಣವೇನು ;

(ಈ) ರಾಜ್ಯದಲ್ಲಿ ಎಷ್ಟು ಸಕ್ಕರೆ ಕಾರ್ಖಾನೆಗಳಿವೆ ? (ಕಾರ್ಖಾನೆವಾರು ಸ್ಥಾಪನೆಯಾದ ವರ್ಷ, ಸ್ವರೂಪದ ವಿವರ ನೀಡುವುದು)

## ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ, ೧೯೬೦ರ ವರ್ಗಾವಣೆ ಬಗ್ಗೆ

**ಶ್ರೀ ಲಹರ ಸಿಂಗ್ ಸಿರೋಯಾ (ನಾಮನಿರ್ದೇಶನ ಹೊಂದಿದವರು):–**

೧೦೮೭ (೧೨೨೪) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ ೧೯೬೦ರ ಕಾರ್ಯನಿರ್ವಹಣೆಯನ್ನು ಕಂದಾಯ ಇಲಾಖೆಯಿಂದ ಸಹಕಾರ ಇಲಾಖೆಗೆ ಯಾವ ದಿನಾಂಕದಂದು ವರ್ಗಾವಣೆ ಮಾಡಲಾಗಿದೆ ;

(ಆದೇಶದ ಪ್ರತಿ ಒದಗಿಸುವುದು) ನಂತರ ಪುನಃ ಸಹಕಾರ ಇಲಾಖೆಯಿಂದ ಕಂದಾಯ ಇಲಾಖೆಗೆ ಯಾವಾಗ ವರ್ಗಾವಣೆ ಮಾಡಲಾಗಿದೆ ; (ಆದೇಶದ ಪ್ರತಿ ಒದಗಿಸುವುದು)

(ಆ) ಸಹಕಾರ ಇಲಾಖೆಯ ಅಧೀನದಲ್ಲಿದ್ದ ಅವಧಿಯಲ್ಲಿ ಸಂಘಗಳ ಕಾರ್ಯನಿರ್ವಹಣೆ ಬಗ್ಗೆ ನಿಯಮಾವಳಿಗಳಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯಿಂದ ತಿದ್ದುಪಡಿ ಮಾಡಲಾಗಿತ್ತೇ ; (ಇದ್ದಲ್ಲಿ ಪ್ರತಿ ಒದಗಿಸುವುದು)

(ಇ) ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ, ೧೯೬೦ರನ್ವಯ ನೋಂದಣಿಯಾಗಿದ್ದ ಕ್ಷೇಮಾಭಿವೃದ್ಧಿ ಸಂಘಗಳು ಜಮೀನು ಖರೀದಿಸಿ ನಿವೇಶನಗಳನ್ನು ರಚಿಸಿ ಹಂಚಿಕೆ ಮಾಡುವ ಅಧಿಕಾರ ಹೊಂದಿರುತ್ತವೆಯೇ ; ಇದ್ದಲ್ಲಿ ಯಾವ ನಿಯಮದಡಿ ಅಧಿಕಾರ ಹೊಂದಿರುತ್ತದೆ ; ಪ್ರತಿ ನೀಡುವುದು ;

(ಈ) ಕರ್ನಾಟಕ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು ನಿಗಮ ಮತ್ತು ಮಂಡಲಿಗಳು ಹಾಗೂ ಇನ್ನಿತರೆ ಪ್ರಾಧಿಕಾರಗಳಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ, ೧೯೬೦ರಡಿ ರಚಿತವಾದ ಕ್ಷೇಮಾಭಿವೃದ್ಧಿ ಸಂಘಗಳಿಗೆ ತನ್ನ ನೌಕರರನ್ನು ಹೊರತುಪಡಿಸಿ ಶೇಕಡ ೧೦ ರಷ್ಟು ಸಹ ಸದಸ್ಯರು (associated members) ಗಳನ್ನು ಹೊಂದಲು ಅವಕಾಶ ಇದೆಯೇ ; ಇದ್ದಲ್ಲಿ ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ, ೧೯೬೦ರ ಯಾವ ನಿಯಮದಡಿ ಹೊಂದಬಹುದಾಗಿದೆ ; (ಆದೇಶದ ಪ್ರತಿ ನೀಡುವುದು)

(ಉ) ಇಲ್ಲದಿದ್ದಲ್ಲಿ, ಈ ರೀತಿ ಕಾನೂನು ಬಾಹಿರವಾಗಿ ವ್ಯವಹರಿಸುವ ಸಂಘಗಳು ಯಾವುವು ; ಹಾಗೂ ಅವುಗಳ ಮೇಲೆ ಕೈಗೊಂಡ ಕ್ರಮಗಳಾವುವು ;

(ಊ) ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ, ೧೯೬೦ರ ಕಾರ್ಯನಿರ್ವಹಣೆ ಸಹಕಾರ ಇಲಾಖೆಯ ವ್ಯಾಪ್ತಿಯಲ್ಲಿದ್ದ ಸಂದರ್ಭದಲ್ಲಿ ಯಾವುದಾದರೂ ಕ್ಷೇಮಾಭಿವೃದ್ಧಿ ಸಂಘಗಳಲ್ಲಿ

ನಿವೇಶನ ರಚಿಸಿ ಅಕ್ರಮ ಅವ್ಯವಹಾರಗಳು ನಡೆದಿದೆಯೇ ; ಇದ್ದಲ್ಲಿ, ಸದರಿ ಪ್ರಕರಣಗಳ ವಿರುದ್ಧ ತನಿಖೆ ನಡೆಸಲಾಗಿದೆಯೇ ; ನಡೆಸಲಾಗಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಕೈಗೊಂಡ ಕ್ರಮಗಳೇನು ? (ತನಿಖಾ ವರದಿಯ ಪ್ರತಿಯೊಂದಿಗೆ ವಿವರ ಒದಗಿಸುವುದು)

## ಅಲ್ಪಸಂಖ್ಯಾತರ ಅಭಿವೃದ್ಧಿಗೆ ಅನುದಾನದ ಬಗ್ಗೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು):–**

೧೦೮೮ (೧೧೩೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩–೨೦೧೪ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಸರ್ಕಾರ ನಿಗದಿಪಡಿಸಿದ ಅನುದಾನವೆಷ್ಟು; ಬಿಡುಗಡೆಯಾದ ಮತ್ತು ಖರ್ಚು ಮಾಡಿದ ಅನುದಾನವೆಷ್ಟು; (ಯೋಜನವಾರು ವಿವರ ಒದಗಿಸುವುದು)

(ಆ) ಸದರಿ ಸಾಲಿನಲ್ಲಿ ಕಲಬುರಗಿ ಜಿಲ್ಲೆಗೆ ಪ್ರತ್ಯೇಕವಾಗಿ ಎಷ್ಟು ಅನುದಾನ ಬಿಡುಗಡೆಯಾಗಿದೆ ; ಹಾಗೂ ಖರ್ಚು ಮಾಡಿದ ಅನುದಾನವೆಷ್ಟು; (ವಿವರ ಒದಗಿಸುವುದು)

(ಇ) ಕಲಬುರಗಿ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗಾಗಿ ಹೊಸ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಯೋಜನೆ ರೂಪಿಸಲಾಗಿದೆಯೇ ? (ಇದ್ದಲ್ಲಿ, ವಿವರ ತಿಳಿಸುವುದು)

## ಸಹಕಾರ ಸಂಘಗಳ ವತಿಯಿಂದ ರೈತರಿಗೆ ಸಾಲ ಒದಗಿಸುವ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು):–**

೧೦೮೯ (೧೧೩೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಸಹಕಾರ ಸಂಘಗಳ ಮೂಲಕ ರೈತರಿಗೆ ವಿತರಿಸಲಾಗಿರುವ ಸಾಲದ ಮೊತ್ತವೆಷ್ಟು; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ರೈತರಿಗೆ ವಿತರಿಸಲಾಗಿರುವ ಸಾಲದ ಮೊತ್ತವೆಷ್ಟು? (ವಿವರ ಒದಗಿಸುವುದು)

## ಎನ್.ಟಿ.ಐ ಹೌಸಿಂಗ್ ಕೋ–ಆಪರೇಟಿವ್ ಸೊಸೈಟಿ ಸದಸ್ಯರ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೪೯೦ (೧೧೩೭) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿರುವ ಎನ್.ಟಿ.ಐ ಹೌಸಿಂಗ್ ಕೋ–ಆಪರೇಟಿವ್ ಸೊಸೈಟಿಯಲ್ಲಿರುವ ಸದಸ್ಯರುಗಳ ಸಂಖ್ಯೆಯೆಷ್ಟು; (ಹೆಸರು, ವಿಳಾಸ ಸಹಿತ ಮಾಹಿತಿ ನೀಡುವುದು)

(ಆ) ಸದರಿ ಸಂಘದಲ್ಲಿರುವ ಸಹ ಸದಸ್ಯರ ಸಂಖ್ಯೆಯೆಷ್ಟು; (ಹೆಸರು, ವಿಳಾಸ ಸಹಿತ ಮಾಹಿತಿ ನೀಡುವುದು)

(ಇ) ಈ ಸಂಘದ ಮುಖಾಂತರ ಕಳೆದ ೩ ವರ್ಷಗಳಲ್ಲಿ ಸಂಘವು ಸದಸ್ಯರಿಗೆ ಹಾಗೂ ಸಹ ಸದಸ್ಯರಿಗೆ ಹಂಚಿಕೆ ಮಾಡಲಾಗಿರುವ ನಿವೇಶನಗಳೆಷ್ಟು; (ವರ್ಷವಾರು ಹೆಸರು, ವಿಳಾಸ ಸಹಿತ ಮಾಹಿತಿ ನೀಡುವುದು)

(ಈ) ನಿವೇಶನ ಮಂಜೂರಾಗಿ ನೋಂದಣಿಯಾದ ನಂತರ ಸದಸ್ಯರಿಂದ ಹೆಚ್ಚುವರಿಯಾಗಿ ನಿಯಮಬಾಹಿರವಾಗಿ ಹಣ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಸಂಘದ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

## ಕೊಪ್ಪ ಪ್ರಾಥಮಿಕ ಕೃಷಿ ಪತ್ತಿನಲ್ಲಿ ನಡೆಯುವ ಅವ್ಯವಹಾರದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೮೯೧ (೧೧೫೨) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮದ್ದೂರು ತಾಲ್ಲೂಕು, ಕೊಪ್ಪ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಕೇಂದ್ರ ಸರ್ಕಾರದ ೨೦೦೮ ಮತ್ತು ರಾಜ್ಯ ಸರ್ಕಾರದ ೨೦೦೬ ಹಾಗೂ ೨೦೧೨ರ ಸಾಲ ಮನ್ನಾ ಯೋಜನೆಯಡಿ ಸಾಲ ಮನ್ನಾ ಯೋಜನೆಯಲ್ಲಿ ನಡೆದಿರುವ ಅವ್ಯವಹಾರಗಳ ತನಿಖೆಗೆ ಸಹಕಾರ ಸಂಘಗಳ ನಿಯಮ ೬೪ರ ಅಡಿ ಆದೇಶ ನೀಡಿದ್ದು ಯಾವಾಗ ; ತನಿಖೆಗೆ ಕಾಲಮಿತಿ ನಿಗದಿಪಡಿಸಲಾಗಿದೆಯೇ ;

(ಆ) ತನಿಖೆಯು ಯಾವ ಹಂತದಲ್ಲಿದೆ ; ಈವರೆಗಿನ ತನಿಖೆಯಲ್ಲಿ ಕಂಡು ಬಂದಿರುವ ಅವ್ಯವಹಾರಗಳ ಸಂಪೂರ್ಣ ವಿವರ ನೀಡುವುದು ;

(ಇ) ಸದರಿ ಸಂಘದ ವಿರುದ್ಧ ಇಷ್ಟೆಲ್ಲಾ ಆರೋಪಗಳು ಇದ್ದರೂ, ಕಾಲಕಾಲಕ್ಕೆ ಸಂಘಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದೆಯೇ ; ಪರಿಶೀಲನೆ ನಡೆಸಿದ ಅಧಿಕಾರಿಗಳು ಯಾರು ; ಎಷ್ಟು ಬಾರಿ ಸಂಘಕ್ಕೆ ಭೇಟಿ ನೀಡಿದ್ದಾರೆ ; ಭೇಟಿ ಸಮಯದಲ್ಲಿ ದಾಖಲಿಸಿರುವ ದಾಖಲೆಗಳೇನು ; ಭೇಟಿ ನೀಡಿ ಪರಿಶೀಲನೆ ನಡೆಸದಿದ್ದಲ್ಲಿ, ಯಾವ ಅಧಿಕಾರಿಯನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ ; ಅವರ ವಿರುದ್ಧ ತೆಗೆದುಕೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ಸಂಘದ ವತಿಯಿಂದ ಕ್ಯಾಲ್ಸಿಮ್ಯಾಕ್ಸ್ ಮತ್ತು ಡಿ.ಎನ್.ಪಿ ಸಾವಯವ ಗೊಬ್ಬರವನ್ನು ಸೂಪರ್ ಪಾಸ್ಪೇಟ್ ಗೊಬ್ಬರ ಎಂದು ರೈತರಿಗೆ ಮಾರಾಟ ಮಾಡಿರುವ ಪ್ರಕರಣಕ್ಕೆ ಸಂಬಂಧಪಟ್ಟಂತೆ ಕೊಪ್ಪ

ಠಾಣೆಯಲ್ಲಿ ದಾಖಲಾಗಿರುವ ದೂರಿನ ಪ್ರಗತಿ ಕುರಿತು ವಿವರ ನೀಡುವುದು ; ದೂರಿನ ಆಧಾರದ ಮೇಲೆ ಕೈಗೊಂಡಿರುವ ಕ್ರಮಗಳೇನು ?

## ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣ ಯೋಜನೆಯ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು):–**

೧೯೨ (೧೨೧೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಿಂದ ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರ ವರ್ಗದವರಿಗೆ ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊರೆಸಿರುವ ಕೊಳವೆ ಬಾವಿಗಳೆಷ್ಟು ;

(ಆ) ಈ ಕೊಳವೆ ಬಾವಿಗಳಲ್ಲಿ ಸಮರ್ಪಕವಾಗಿ ನೀರು ದೊರೆತಿರುವ ಕೊಳವೆ ಬಾವಿಗಳೆಷ್ಟು ; ಹಾಗೂ ನೀರು ದೊರೆಯದೇ ವಿಫಲವಾಗಿರುವ ಕೊಳವೆ ಬಾವಿಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ನೀರು ದೊರೆತಿರುವ ಎಷ್ಟು ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕಗಳನ್ನು ಒದಗಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಇನ್ನೂ ಎಷ್ಟು ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕವನ್ನು ಒದಗಿಸಬೇಕಾಗಿರುತ್ತದೆ ? (ತಾಲ್ಲೂಕುವಾರು ವಿವರ ನೀಡುವುದು)

# ಸರ್ಕಾರಿ ಗೋ ಶಾಲೆಗಳ ಬಗ್ಗೆ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೩ (೧೨೧೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಗೋ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಈ ಗೋ ಶಾಲೆಯಲ್ಲಿ ಒಟ್ಟು ಎಷ್ಟು ಗೋವುಗಳಿವೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಗೋ ಶಾಲೆ ನಿರ್ವಹಣೆಗೆ ರಾಜ್ಯ ಸರ್ಕಾರ ಪ್ರತಿ ವರ್ಷ ಬಿಡುಗಡೆ ಮಾಡಿದ ಅನುದಾನ ಎಷ್ಟು;

(ಈ) ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಯೋಜನೆಗಳಿಗೆ ಬಳಸಲಾಗುವುದು ; (ವಿವರ ನೀಡುವುದು)

(ಉ) ಪ್ರತಿ ವರ್ಷ ಗೋ ಶಾಲೆಯಲ್ಲಿ ಮೃತಪಟ್ಟ ಗೋವುಗಳ ಸಂಖ್ಯೆ ಎಷ್ಟು ; ಅವುಗಳನ್ನು ಸತ್ತ ನಂತರ ಏನು ಮಾಡಲಾಗುತ್ತಿದೆ ;

(ಊ) ಮರಣ ಹೊಂದಿದ ನಂತರ ಅದರ ಚರ್ಮ ಹಾಗೂ ಮೂಳೆಗಳನ್ನು ಮಾರಾಟ ಮಾಡಿ ಆದಾಯಗಳಿಸಲು ಇಲಾಖೆ ಯೋಜನೆ ರೂಪಿಸಿದೆಯೇ ? (ವಿವರ ನೀಡುವುದು)

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ,ಬೆಂಗಳೂರು–59/ಕಾ.ಸೂ. 0328/1000 ಪ್ರತಿಗಳು/24–03–2016